ಸಂಪುಟ: ೦೭/ ಸಂಚಿಕೆ: ೧೬೩/ಶುಕ್ರವಾರ ದಿನಾಂಕ : ೧೫-೦೮-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 163/ FRIDAY Date : 15-08-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಅರ್ಹರಿಗೆ ರೇಷನ್ ಕಾರ್ಡ್ ನೀಡಲು ಮುಂದಿನ ತಿಂಗಳಿಂದ ಅವಕಾಶ ವಿಧಾನಸಭೆಯಲ್ಲಿ ಕೆ.ಹೆಚ್. ಮುನಿಯಪ್ಪ ಸ್ಪಷ್ಟನೆ

ಬೆಂಗಳೂರು: ರಾಜ್ಯದಲ್ಲಿ 13 ಲಕ್ಷ ಅನರ್ಹ ಬಿಪಿಎಲ್ ಕಾರ್ಡ್‌ದಾರರಿದ್ದು, ಅವುಗಳನ್ನು ಪರಿಷ್ಕರಣೆ ಮಾಡಲಾಗುವುದು. ಅರ್ಹರಿಗೆ ಬಿಪಿಎಲ್ ಕಾರ್ಡ್ ನೀಡಲು ಮುಂದಿನ ತಿಂಗಳಿನಿಂದ ವೆಬ್‌ಸೈಟ್ ಮುಕ್ತವಾಗಿಡುವುದಾಗಿ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ ವಿಧಾನಸಭೆಯಲ್ಲಿ ಇಂದು ತಿಳಿಸಿದರು.

ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿ ಶಾಸಕ ಡಾ. ವೈ.ಭರತ್ ಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ವೈದ್ಯಕೀಯ ಚಿಕಿತ್ಸೆಯ ತುರ್ತು ಸಂದರ್ಭಕ್ಕೆ ಅನುಕೂಲವಾಗಲು ಪಡಿತರ ಕಾರ್ಡ್ ನೀಡುವ ಸಲುವಾಗಿ ಪ್ರತ್ಯೇಕ ಪೋರ್ಟಲ್ ಆರಂಭಿಸಲಾಗುತ್ತಿದೆ. ಇನ್ನು ಮುಂದೆ 24 ಗಂಟೆಯೊಳಗಾಗಿ ವೈದ್ಯಕೀಯ ಚಿಕಿತ್ಸೆಗೆ ಪಡಿತರ ಕಾರ್ಡ್‌ಗಳನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸ್ಪಷ್ಟಪಡಿಸಿದರು.

ರಾಜ್ಯದಲ್ಲಿ 25 ಲಕ್ಷ ಎಪಿಎಲ್ ಕಾರ್ಡ್‌ದಾರರಿದ್ದು, 1 ಲಕ್ಷ ಮಂದಿ ಅಕ್ಕಿ ತೆಗೆದುಕೊಳ್ಳುತ್ತಿರಲಿಲ್ಲ. ಅದಕ್ಕಾಗಿ ಎಪಿಎಲ್ ಕಾರ್ಡ್‌ಗೆ ಅಕ್ಕಿ ನೀಡುವುದನ್ನು ನಿಲ್ಲಿಸಲಾಗಿದೆ ಎಂದರು.

ರಾಜ್ಯದಲ್ಲಿ ಒಟ್ಟು ಕಾರ್ಡ್‌ದಾರರ ಪೈಕಿ ಶೇ.75ರಷ್ಟು ಬಿಪಿಎಲ್ ಕಾರ್ಡ್‌ಗಳಿವೆ. ಆಂಧ್ರಪ್ರದೇಶ, ತೆಲಂಗಾಣ, ತಮಿಳು ನಾಡಿನಲ್ಲಿ ಶೇ.50 ರಷ್ಟು ಬಿಪಿಎಲ್ ಕಾರ್ಡ್‌ಗಳಿವೆ. ಕಾರ್ಡ್‌ಗಳನ್ನು ಆಧರಿಸಿ ನೋಡುವುದಾದರೆ ಮಹಾರಾಷ್ಟ್ರಕ್ಕಿಂತ ಹೆಚ್ಚು ಬಡತನದ ರಾಜ್ಯ ಕರ್ನಾಟಕ. ಬಿಪಿಎಲ್ ಪಟ್ಟಿಯಲ್ಲಿ 13 ಲಕ್ಷ ಮಂದಿ ಅನರ್ಹರಿದ್ದಾರೆ. ಅವರನ್ನು ತೆಗೆಯಲು ಪ್ರಯತ್ನಿಸಿದಾಗ ಗೊಂದಲ ಉಂಟಾದವು. ಈ ಕಾರ್ಯಕ್ಕೆ ಎಲ್ಲಾ ಪಕ್ಷಗಳು ಕೈ ಜೋಡಿಸಬೇಕು ಎಂದು ತಿಳಿಸಿದರು. ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡುವುದಿಲ್ಲ. ಅನರ್ಹರನ್ನು ಎಪಿಎಲ್ ವ್ಯಾಪ್ತಿಗೆ ತರುತ್ತೇವೆ. ಒಂದು ವೇಳೆ ಅರ್ಹರ ಕಾರ್ಡ್‌ಗಳು ರದ್ದುಗೊಂಡಿದ್ದರೆ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಬಹುದು. ತಕ್ಷಣವೇ ಅವರಿಗೆ ಬಿಪಿಎಲ್ ಕಾರ್ಡ್ ನೀಡುವುದಾಗಿ ಭರವಸೆ ನೀಡಿದರು.



ಅನರ್ಹ ಬಿಪಿಎಲ್ ಕಾರ್ಡ್‌ದಾರರಿಗೆ ಹೊಸದಾಗಿ ಎಪಿಎಲ್ ನೀಡಲು ಹಾಗೂ ಅನರ್ಹರ ಪರಿಷ್ಕರಣೆಯ ನಂತರ ಮುಂದಿನ ತಿಂಗಳಲ್ಲಿ ಹೊಸದಾಗಿ ಬಿಪಿಎಲ್ ನೀಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಸ್ಪಷಪಡಿಸಿದರು.

ಶಾಸಕರಾದ ಕೆ.ಗೋಪಾಲಯ್ಯಸೇರಿದಂತೆ ಹಲವರು ವೈದ್ಯಕೀಯ ತುರ್ತು ಸಂದರ್ಭದಲ್ಲಿ ಬಿಪಿಎಲ್ ಕಾರ್ಡ್‌ದಾರರಿಗೆ ಅನುಕೂಲ ಮಾಡಿಕೊಡಬೇಕು ಎಂದಾಗ, ಪ್ರತ್ಯೇಕ ಪೋರ್ಟಲ್ ಮಾಡುವುದಾಗಿ ಭರವಸೆ ನೀಡಿದರು.

ಬಿಪಿಎಲ್ ಕಾರ್ಡ್ ಕರ್ನಾಟಕದಲ್ಲೇ ಹೆಚ್ಚು: ಮೊನ್ನೆ ವಿಧಾನಪರಿಷತ್‌ನಲ್ಲಿ ಉತ್ತರಿಸಿದ್ದ ಸಚಿವ ಮುನಿಯಪ್ಪ ಅವರು, ದಕ್ಷಿಣ ಭಾರತದ ರಾಜ್ಯಗಳ ಪೈಕಿ ಕರ್ನಾಟಕದಲ್ಲೇ ಅತೀ ಹೆಚ್ಚು ಬಿಪಿಎಲ್ ಫಲಾನುಭವಿಗಳಿದ್ದಾರೆ. ತಮಿಳುನಾಡು ಶೇ.50, ಕೇರಳ ಶೇ.45, ತೆಲಂಗಾಣ ಶೇ.50, ಆಂಧ್ರಪ್ರದೇಶ ಶೇ.50, ನಮ್ಮಲ್ಲಿ ಮಾತ್ರ ಶೇ.70 ರಿಂದ 75 ರಷ್ಟು ಬಿಪಿಎಲ್ ಫಲಾನುಭವಿಗಳು ಇದ್ದಾರೆ ಎಂದು ತಿಳಿಸಿದ್ದರು. ಬಿಪಿಎಲ್ ಫಲಾನುಭವಿ ಗುರುತಿಸಲು ಕೇಂದ್ರ ಸರ್ಕಾರ 11 ಹಾಗೂ ರಾಜ್ಯ ಸರ್ಕಾರ 5 ಮಾನದಂಡಗಳನ್ನು ನಿಗದಿಪಡಿಸಿದೆ. ಈ ಮಾನದಂಡ ಪಾಲಿಸಿದರೆ ಬಿಪಿಎಲ್ ಫಲಾನುಭವಿಗಳ ಸಂಖ್ಯೆ 35ಕ್ಕೆ ಇಳಿಕೆಯಾಗುತ್ತದೆ ಎಂದಿದ್ದರು.

## ವಿಧಾನ ಪರಿಷತ್ತಿನಲ್ಲಿ ಕೋಮುಗಲಭೆ ಬಗ್ಗೆ ಗಂಭೀರ ಚರ್ಚೆ

ಬೆಂಗಳೂರು, ಗುರುವಾರದಂದು ವಿಧಾನ ಪರಿಷತ್ತಿನಲ್ಲಿ ರಾಜ್ಯಾದ್ಯಂತ ಹೆಚ್ಚುತ್ತಿರುವ ಕೋಮುಗಲಭೆ ಹಾಗೂ ಅದರಿಂದ ಸಮಾಜದಲ್ಲಿ ಉಂಟಾಗುತ್ತಿರುವ ದುಷ್ಪರಿಣಾಮಗಳ ಕುರಿತು ಗಂಭೀರ ಸ್ವರೂಪದ ಚರ್ಚೆ ನಡೆಯಿತು.

ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿ ಸದಸ್ಯ ಕಿಶೋರ್ ಕುಮಾರ್ ಪುತ್ತೂರ್ ಕೋಮುಗಲಭೆ ಬಗ್ಗೆ ಸರಕಾರದ ತೆಗೆದುಕೊಂಡ ಕ್ರಮಗಳ ಬಗ್ಗೆ ಪ್ರಸ್ತಾಪ ಮಾಡಿದರು. ಗೃಹ ಸಚಿವ ಡಾ.ಜಿ.ಪರಮೇಶ್ವರ್ ಉತ್ತರ ನೀಡಿದರು.

ಈ ವೇಳೆ ಗೃಹಸಚಿವರ ಉತ್ತರಕ್ಕೆ ತೃಪ್ತರಾಗದ ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರು, ಸೌಹಾರ್ದ ವಾತಾವರಣ ಹದಗೆಡಿಸುತ್ತಿರುವವರ ಮೇಲೆ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಸದಸ್ಯ ಕಿಶೋರ್ ಕುಮಾರ್ ಮಾತನಾಡಿ, ಮಂಗಳೂರಿನಲ್ಲಿ ಕೆಲ ತಿಂಗಳ ಹಿಂದೆ ಸುಹಾಸ್ ಶೆಟ್ಟಿ ಕೊಲೆಯಾಯಿತು. ಆದರೆ ಸಚಿವರು ಕೊಲೆಯಾದವರ ಮನೆಗೆ ಮನೆಗೆ ಹೋಗಲಿಲ್ಲ. ಅವರ ತಂದೆತಾಯಿಗಳನ್ನು, ಸಂಬಂಧಿಕರನ್ನು ಭೇಟಿಯಾಗಿ ಸ್ವಾಂತನವನ್ನು ಹೇಳಿಲ್ಲ. ಆದರೆ ಕೆಲ ದಿನಗಳ ಹಿಂದೆ ಬೇರೇ ಸಮುದಾಯದ ವ್ಯಕ್ತಿಯೊಬ್ಬ ಮೃತಪಟ್ಟಾಗ ಅಲ್ಲಿ ಹೋಗಿ ಬಂದಿದ್ದೀರಿ. ನೀವು ಯಾವುದೋ ಜಾತಿ ಅಥವಾ ಧರ್ಮಕ್ಕೆ ಸೀಮಿತರಾದ ಸಚಿವರಲ್ಲ. ಆರು



ಕೋಟಿ ಕನ್ನಡಿಗರ ಗೃಹಸಚಿವರು. ಪ್ರತಿಯೊಬ್ಬರ ರಕ್ಷಣೆ ನಿಮ್ಮ ಕರ್ತವ್ಯ ಎಂದು ಹೇಳಿದರು.

ಕಾಂಗ್ರೆಸ್‌ನ ಸದಸ್ಯ ಐವಾನ್ ಡಿಸೋಜ ಮಾತನಾಡಿ, ಕರಾವಳಿಯಲ್ಲಿ ನಡೆಯುತ್ತಿರುವ ಕೋಮುಗಲಭೆಗೆ ಯಾರು ಕಾರಣ ಎಂಬುದು ಎಲ್ಲರಿಗೂ ಗೊತ್ತಿದೆ. ಗೃಹಸಚಿವರು ತಾರತಮ್ಯ ಮಾಡದೆ ಕ್ರಮ ಕೈಗೊಂಡಿದ್ದಾರೆ ಎಂದು ಸಮರ್ಥನೆ ಮಾಡಿಕೊಂಡರು.

ಪ್ರವೀಣ್ ನೆಟ್ಟಾರು ಕೊಲೆಯಾದಾಗ ಅಂದಿನ ಮುಖ್ಯಮಂತ್ರಿಗಳು ಕೊಲೆಯಾದವರ ಮನೆಗೆ ಹೋಗಿ ಕುಟುಂಬಕ್ಕೆ ಸಾಂತ್ವಾನ ಹೇಳಿ 50 ಲಕ್ಷ ರೂ.ಗಳನ್ನು ನೀಡಿದ್ದಾರೆ. ಅದೇ ಸಂದರ್ಭದಲ್ಲಿ ಮುಸ್ಲಿಂ ಸಮುದಾಯದವರ ಕೊಲೆಯಾಯಿತು. ಅವರ ಮನೆಗೆ ಏಕೆ ಹೋಗಲಿಲ್ಲ ಎಂದು ಪ್ರಶ್ನಿಸಿದರು.

ಕಾಂಗ್ರೆಸ್‌ನ ಸದಸ್ಯ ಬಿ.ಕೆ.ಹರಿಪ್ರಸಾದ್ ಮಾತನಾಡಿ, ರೌಡಿಶೀಟರ್ ಹಿನ್ನೆಲೆಯುಳ್ಳ ವ್ಯಕ್ತಿ ಸತ್ತರೆ ಅಥವಾ ಅನ್ಯ ಕಾರಣಗಳಿಂದ ಕೊಲೆಯಾದರೆ ಗೃಹಸಚಿವರು ಅಲ್ಲಿಗೆ ಹೋಗಬೇಕೆ ಎಂದು ಪ್ರಶ್ನೆ ಮಾಡಿದರು.

****

## ಜಿಲ್ಲೆಯ 93- ಅಮೃತ ಸರೋವರ ದಡದ ಮೇಲೆ ಹಾರಲಿದೆ ರಾಷ್ಟ್ರ ಧ್ವಜ: ಜಿ.ಪಂ. ಸಿ.ಇ.ಓ ರಾಹುಲ್ ಶಿಂಧೆ

ಬೆಳಗಾವಿ: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಬೆಳಗಾವಿ ಜಿಲ್ಲೆಯ 93 ಅಮೃತ ಸರೋವರಗಳ ದಡದಲ್ಲಿ "ಜಲ ಸಂರಕ್ಷಣೆಗಾಗಿ ಒಂದು ಸರೋವರ, ಒಂದು ಸಂಕಲ್ಪ" ಥೀಮ್ ಅಡಿಯಲ್ಲಿ ಆ.15 ರಂದು ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಅನುಷ್ಠಾನಗೊಂಡ ಅಮೃತ ಸರೋವರಗಳ ದಡದಲ್ಲಿ ಧ್ವಜಾರೋಹಣ ನೆರವೇರಿಸಿದ ಬಳಿಕ ರಾಷ್ಟ್ರಗೀತೆಯ ಮೂಲಕ ಗೌರವ ಸಲ್ಲಿಸಲಾಗುವುದು. ಈ ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಮಾಜಿ ಸೈನಿಕರು, ಮಹಿಳಾ ಸ್ವಸಹಾಯ ಗುಂಪಿನ ಸದಸ್ಯರು, ಅಮೃತ ಸರೋವರ ಬಳಕೆದಾರರ ಗುಂಪಿನ ಸದಸ್ಯರು ಹಾಗೂ ಗ್ರಾಪಂ ಅಧಿಕಾರಿಗಳು ಸಿಬ್ಬಂದಿ ಉಪಸ್ಥಿತರಿರುವರು.

ಈ ಕಾರ್ಯಕ್ರಮದಡಿ ಧ್ವಜಾರೋಹಣದ ಜತೆಗೆ ತಿರಂಗ ಯಾತ್ರೆ, ಅರಣ್ಯೀಕರಣ, ಅಮೃತ ಸರೋವರದ ಐತಿಹಾಸಿಕ ಮಹತ್ವ ಹೇಳುವ ಪಾರಂಪರಿಕ ನಡಿಗೆ, ಸರೋವರದಲ್ಲಿ ಸೆಲ್ಫಿ, ಡ್ರೋನ್/ಬೆಳಕಿನ ಧ್ವನಿ ಪ್ರದರ್ಶನ, ಪ್ರಬಂಧ ಸ್ಪರ್ಧೆ, ಕವನ ಸ್ಪರ್ಧೆ, ಪರಿಸರ ಸಂರಕ್ಷಣೆ ಕುರಿತಾದ ನಾಟಕಗಳು, ಪರಿಸರ ಸ್ನೇಹಿ ಕಲಾ ಸ್ಪರ್ಧೆ, ಸ್ವಚ್ಛತಾ ಅಭಿಯಾನಗಳು, ಚಿತ್ರಕಲೆ ಸ್ಪರ್ಧೆ ಸೇರಿದಂತೆ ವಿವಿಧ ಕಾರ್ಯಕ್ರಮಗಳಡಿ ಯಾವುದಾದರೂ ಒಂದೆರಡು ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ವಿವಿಧ ಗ್ರಾಪಂಗಳ ಜಲ ಸಂರಕ್ಷಣೆಗಾಗಿ ಅಮೃತ ಸರೋವರಗಳನ್ನು ನಿರ್ಮಿಸಲಾಗಿದ್ದು, ಈ ಅಮೃತ ಸರೋವರಗಳು ಗ್ರಾಮೀಣ ಭಾಗದಲ್ಲಿ ಜಲಸಂರಕ್ಷಣೆಗೆ ಪ್ರಮುಖ ವಹಿಸುತ್ತಿವೆ. ಅಮೃತ ಸರೋವರಗಳ ದಡದಲ್ಲಿ ನಿರಂತರವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಏನಿದು ಅಮೃತ ಸರೋವರ?

ನಮ್ಮ ಪೂರ್ವಜರು ಕೆರೆಗಳನ್ನು ನಿರ್ಮಿಸಿ ನೀರಿನ ಬಳಕೆ ಮಾಡಿಕೊಳ್ಳುತ್ತಿದ್ದರು, ಇತ್ತೀಚಿನ ದಿನಗಳಲ್ಲಿ ಕೆರೆಗಳು ನಶಿಸಿ ಹೋಗುತ್ತಿದೆ ಸರ್ಕಾರ ಅಮೃತ ಸೋರವರ ಯೋಜನೆಯಡಿ ಕೆರೆಗಳನ್ನು ಅಭಿವೃದ್ಧಿಪಡಿಸಿ ಅಂತರ್ಜಲ ಮಟ್ಟ ಹೆಚ್ಚಳಕ್ಕೆ ಕಾರ್ಯಕ್ರಮವನ್ನು ರೂಪಸಿದೆ. ಈ ಯೋಜನೆಯಡಿ ಕೆರೆಗಳ ಹೂಳೆತ್ತುವುದು, ರಾಜ ಕಾಲುವೆ ಅಭಿವೃದ್ಧಿ ಕೆರೆಕಟ್ಟೆಗಳ ಅಭಿವೃದ್ಧಿ, ಕೆರೆ ಸುತ್ತಮುತ್ತ ಪರಿಸರ ಸಂರಕ್ಷಣೆ ಸೇರಿದಂತೆ ಹಲವು ಕಾರ್ಯಕ್ರಮ ರೂಪಿಸಿ ಜಲಮೂಲ ಪುನಶ್ಚೇತನ ಗೊಳಿಸಲು ನರೇಗಾ ಅಡಿ ಕೆರೆಗಳ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಹೀಗಾಗಿ ಕೆರೆಗಳ ಅಭಿವೃದ್ಧಿಯೇ ಅಮೃತ ಸರೋವರದ ಉದ್ದೇಶವಾಗಿದೆ.





ಬಸವನಬಾಗೇವಾಡಿ ಆರಾಧ್ಯದೈವ ಮೂಲನಂದೀಶ್ವರ(ಬಸವೇಶ್ವರ) ಜಾತ್ರಾಯಂಗವಾಗಿ ಬುಧವಾರ ಜರುಗಿದ ಭಾರ ಎತ್ತುವ ಸ್ಪರ್ಧೆಯಲ್ಲಿ ತಾಲೂಕಿನ ಮುತ್ತಗಿ ಗ್ರಾಮದ ಪರಶುರಾಮ ಹೂಗಾರ ಅವರು ತಮ್ಮ ಮೀಸೆಗೆ 80 ಕೆಜಿ ಸಂಗ್ರಾಣಿ ಕಲ್ಲನ್ನು ಕಟ್ಟಿಕೊಂಡು ಸರಳವಾಗಿ ಎತ್ತುವ ಮೂಲಕ ನೆರೆದ ಜನಸ್ತೋಮದಿಂದ ಸೈ ಎನಿಸಿಕೊಂಡರು.

# ಮೈಮನ ರೋಮಾಂಚನಗೊಳಿಸಿದ ವಿವಿಧ ಕಸರತ್ತಿನ ಸ್ಪರ್ಧೆಗಳು



ಬಸವನಬಾಗೇವಾಡಿ, : ಪಟ್ಟಣದ ಆರಾಧ್ಯದೈವ ಮೂಲನಂದೀಶ್ವರ(ಬಸವೇಶ್ವರ) ಜಾತ್ರೆಯ ಮೂರನೇ ದಿನ ಬುಧವಾರ ಬಸವೇಶ್ವರ ದೇವಸ್ಥಾನದ ಸಿಬಿಎಸ್‌ಸಿ ಶಾಲಾ ಆವರಣದಲ್ಲಿ ಜರುಗಿದ ವಿವಿಧ ಭಾರ ಎತ್ತುವ ಕಸರತ್ತಿನ ಸ್ಪರ್ಧೆಗಳು ವಿವಿಧೆಡೆಗಳಿಂದ ಆಗಮಿಸಿದ್ದ ಜನರ ಮೈಮನ ರೋಮಾಂಚನ ಗೊಳಿಸಿದವು. ಫೈಲ್ವಾನರು ಭಾರ ಎತ್ತುವಾಗ ನೆರೆದ ಜನರು ಕೇಕೇ,ಚಪ್ಪಾಳೆ ತಟ್ಟುವ ಮೂಲಕ ಅವರಿಗೆ ಹುರಿದುಂಬಿಸುವದು ಕಂಡುಬಂದಿತ್ತು.

ಜಾತ್ರಾ ಉತ್ಸವ ಸಮಿತಿಯು ಭಾರ ಎತ್ತುವ ಸ್ಪರ್ಧಾಕಣವನ್ನು ಎತ್ತರ ಮಟ್ಟದಲ್ಲಿ ನಿರ್ಮಾಣ ಮಾಡಿದ್ದರಿಂದಾಗಿ ಎಲ್ಲ ಜನ-ರಿಗೆ ಫೈಲ್ವಾನರು ಭಾರ ಎತ್ತುವ ದೃಶ್ಯವನ್ನು ಕಣ್ಣುತುಂಬಿಕೊಂಡರು. 1 ಕ್ವಿಂಟಾಲ್‌ಕ್ಕಿಂತಲೂ ಹೆಚ್ಚಿನ ಭಾರವಾದ ಗುಂಡುಕಲ್ಲು, 80 ಕೆಜಿಯಿಂದ 145 ಕೆಜಿಯ ಸಂಗ್ರಾಣಿ ಕಲ್ಲು, ಮೂರು ಕ್ವಿಂಟಾಲ್ ಉಸುಕಿನ ಚೀಲ, ಹಲ್ಲಿನಿಂದ ಕಬ್ಬಿಣದ ಹಾರೆಗಳನ್ನು ಒಗೆಯುವದು, ಜೋಳದ ಚೀಲ ತೆಕ್ಕಿ ಬಡಿದುಕೊಂಡು ಎತ್ತುವದು ಸೇರಿದಂತೆ ವಿವಿಧ ಸ್ಪರ್ಧೆಗಳಲ್ಲಿ ವಿವಿಧೆಡೆಗಳಿಂದ ಆಗಮಿಸಿದ್ದ ಫೈಲ್ವಾನ್‌ರು ತಮ್ಮ ಕಸರತ್ತನ್ನು ಪ್ರದರ್ಶಿಸಿ ನೆರೆದ ಅಪಾರಸಂಖ್ಯೆಯ ಜನ-ರಿಂದ ಭೇಷ್ ಎನಿಸಿಕೊಂಡರು. ಪಟ್ಟಣದಲ್ಲಿ ಮೋಡ ಕವಿದ ವಾತಾವರಣವಿದ್ದರೂ ಸಹ ಮಳೆ ಬಾರದೇ ಇರುವದರಿಂದಾಗಿ ಈ ಸ್ಪರ್ಧೆಗಳು ಸಾಂಗವಾಗಿ ಜರುಗಿದವು. ಬೆಳಗ್ಗೆ 11 ಗಂಟೆಗೆ ಆರಂಭವಾದ ಈ ಸ್ಪರ್ಧೆಗಳು ಸಂಜೆ ನಾಲ್ಕು ಗಂಟೆಯವರೆಗೆ ಜರುಗಿದವು. ಭಾರ ಎತ್ತುವ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಜಾತ್ರೆ ಸಮಿತಿಯಿಂದ ಪ್ರಶಸ್ತಿ ಪತ್ರ, ಬೆಳ್ಳಿ ಕಡಗ, ನಗದು ಹಣ ನೀಡಿ ಗೌರವಿಸಲಾಯಿತು. ಕಳೆದ ವರ್ಷ ಹರನಾಳ ಗ್ರಾಮದ –ಲ್ವಾನ್ ಆನಂದ ಗುಣಕಿ ಅವರು 2.15 ಕೆಜಿ ಗುಂಡುಕಲ್ಲು ಎತ್ತುವ ಫೈಲ್ವಾನ್‌ಗೆ 50 ತೊಲಿಯ ಬೆಳ್ಳಿ ಗದೆಯನ್ನು ಜಾತ್ರೆ ಉತ್ಸವ ಸಮಿತಿಗೆ ನೀಡಿದ್ದರು. ಆ ವರ್ಷ ಯಾವುದೇ ಫೈಲ್ವಾನ್ 2.15 ಕೆಜಿ ಗುಂಡುಕಲ್ಲನ್ನು ಎತ್ತದೇ ಇರುವದರಿಂದಾಗಿ ಬೆಳ್ಳಿ ಗದೆ ಉತ್ಸವ ಸಮಿತಿಯಲ್ಲಿ ಉಳಿದುಕೊಂಡಿತ್ತು. ಈ ಸಲದ ಜಾತ್ರೆಯಲ್ಲಿಯೂ ಈ ಭಾರದ ಗುಂಡುಕಲ್ಲನ್ನು ಎತ್ತದೇ ಇರುವದರಿಂದಾಗಿ ಮತ್ತೆ ಬೆಳ್ಳಿ ಗದೆ ಸಮಿತಿಯ ಕಡೆಗೆ ಉಳಿದುಕೊಂಡಿತ್ತು.

ಕಳೆದ ಹತ್ತು ವರ್ಷದಿಂದ ಈ ಜಾತ್ರೆಗೆ ಜತ್ತ ತಾಲೂಕಿನ ಆಸಂಗಿ ಗ್ರಾಮದ ಅಫಜಲ ಮುಜಾವರ ಬರುತ್ತಿದ್ದಾರೆ. ಈ ಸಲವೂ ಅವರು 95 ಕೆಜಿ ಸಂಗ್ರಾಣಿ ಕಲ್ಲು ಸಾಗುವ ಹಾಕುವ ಮೂಲಕ ಈ ಬಾರಿಯೂ ಹನ್ನೊಂದನೇ ವರ್ಷವು ಬೆಳ್ಳಿ ಕಡಗ ತಮ್ಮದಾಗಿಸಿಕೊಂಡರು. ಬೀಳಗಿ ತಾಲೂಕಿನ ಬಿಸನಾಳ ಗ್ರಾಮದ 20 ವರ್ಷದ ಕಿರಣಿ ಅರಕೇರಿ ಅವರು 85 ಕೆಜಿಯ ಸಂಗ್ರಾಣಿ ಕಲ್ಲನ್ನುಸಾಗ ಹಾಕುವ ಸ್ಪರ್ಧೆಯಲ್ಲಿ ಪ್ರೇಕ್ಷಕರನ್ನು ಗಮನ ಸೆಳೆದರು. ಮುತ್ತಗಿಯ ಪರಶುರಾಮ ಹೂಗಾರ ಅವರು 80ಕೆಜಿ ಸಂಗ್ರಾಣಿ ಕಲ್ಲನ್ನು ಮೀಸೆಗೆ ಕಟ್ಟಿಕೊಂಡು ಒಂದು ಸುತ್ತು ಹಾಕಿ ಗಮನ ಸೆಳೆದರೆ, ಸಿದ್ಧನಾಥ ಗ್ರಾಮದ 80 ವರ್ಷದ ದಿಗಂಬರ ಕೊಳಮಲಿ ಅವರು 20 ಕೆಜಿ ಕಲ್ಲನ್ನು ತಮ್ಮ ಮೀಸೆಗೆ ಕಟ್ಟಿಕೊಂಡು ಎತ್ತಿ ಗಮನ ಸೆಳೆದರು. ದೇವರಹಿಪ್ಪರಗಿ ಫೈಲ್ವಾನರು ಹಲ್ಲಿನಿಂದ ಕಬ್ಬಿಣದ ಹಾರೆಗಳನ್ನು ಹಿಂದಕ್ಕೆ ಒಗೆದರು. 2 ಕ್ವಿಂಟಾಲ್ ಜೋಳದ ಚೀಲವನ್ನು ತೆಕ್ಕಿ ಬಡಿದುಕೊಂಡು ಎತ್ತುವದು ಸೇರಿದಂತೆ ವಿವಿಧ ಭಾರ ಎತ್ತುವ ಸ್ಪರ್ಧೆಗಳು ನೆರೆದ ಜನರನ್ನು ರೋಮಾಂಚನ ಗೊಳಿಸಿದವು.

ಪಟ್ಟಣದ ಹಿರಿಯರು, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜನಪದ ಗಾಯಕ ಬಸವರಾಜ ಹಾರಿವಾಳ ಅವರು ತಮ್ಮದೇ ವಿಶಿಷ್ಟ ಶೈಲಿಯಿಂದ ನಿರೂಪಿಸಿ ಜನರನ್ನು ಮನಸೂರೆಗೊಂಡರು. ಇವರ ಜೊತೆಗೆ ಜಾತ್ರಾ ಉತ್ಸವ ಸಮಿತಿಯ ಅಧ್ಯಕ್ಷ ರವಿ ರಾಠೋಡ, ಮುಖಂಡ ಸಂಗಮೇಶ ಓಲೇಕಾರ ಸಾಥ್ ನೀಡಿದರು.

ವಿವಿಧ ಭಾರ ಎತ್ತುವ ಸ್ಪರ್ಧೆಯಲ್ಲಿ ವಿಜೇತರುಃ ಸಂಗ್ರಾಣಿ ಕಲ್ಲು ಸಾಗ ಎತ್ತುವ ಸ್ಪರ್ಧೆಯಲ್ಲಿ ಜತ್ತ ತಾಲೂಕಿನ ಆಸಂಗಿಯ ಅಫಜಲ್ ಮುಜಾವರ ಪ್ರಥ-ಮ,ಬೀಳಗಿ ತಾಲೂಕಿನ ಬಿಸನಾಳದ ಕಿರಣ ಅರಕೇರಿ ದ್ವಿತೀಯ, ರಿಯಾಜ ಜಮಾದಾರ ತೃತೀಯ ಸ್ಥಾನ, ಸಂಗ್ರಾಣಿ ಕಲ್ಲು ವತ್ತಿ ಎತ್ತುವ ಸ್ಪರ್ಧೆಯ್ಲಿ ಗುಳೇದಗುಡ್ಡದ ವಿಠ್ಠಲ ಮುತ್ತಪ್ಪ ಮನಿಕಟ್ಟಿ ಪ್ರಥಮ, ಗೋಕಾಕ ತಾಲೂಕಿನ ಮಳ್ಳವಂಕಿ ಗ್ರಾಮದ ಶಿವಾನಂದ ಜಾಡನವರ ದ್ವಿತೀಯ, ನಾಗೂರ ಗ್ರಾಮದ ಮುತ್ತಪ್ಪ ಶರಣಪ್ಪ ಕಡ್ಲಿಮಟ್ಟಿ ತೃತೀಯ ಸ್ಥಾನ, ಗುಂಡು ಎತ್ತುವ ಸ್ಪರ್ಧೆಯಲ್ಲಿ ನಾಗಠಾಣದ ಬೀರಪ್ಪ ಗೂಳಪ್ಪ ಪೂಜಾರಿ ಪ್ರಥಮ, ಗುನ್ನಾಪೂರಿನ ಶಿವಲಿಂಗಪ್ಪ ಶಿವೂರ ದ್ವಿತೀಯ, ಯಾಳವಾರದ ಮಾಳಿಂಗರಾಯ ಕೊಂಡಗುಳಿ ಹಾಗೂ ಅಂಬರೀಶ ಬಮ್ಮನಜೋಗಿ ತೃತೀಯ ಸ್ಥಾನ ಪಡೆದುಕೊಂಡರು.

ಹಲ್ಲಿನಿಂದ ಹಾರಿ ಒಗೆಯವ ಸ್ಪರ್ಧೆಯಲ್ಲಿ ದೇವರಹಿಪ್ಪರಗಿ ತಾಲೂಕಿನ ಮಡ್ಡಿಮಣ್ಣೂರಿನ ಸದ್ದಾಮ ಹಸನಸಾಬ ಮಾಡಬಾಳ ಪ್ರಥಮ, ಇಂಗಳಗಿ ಗ್ರಾಮದ ಮಾಳಪ್ಪ ಸೋಮಲಿಂಗ ಪೂಜಾರಿ ದ್ವಿತೀಯ ಸ್ಥಾನ ಪಡೆದುಕೊಂಡರು.

ತೆಲಗಿಯ ಕಾಂತಪ್ಪ ತೆಲಗಿ ಅವರು ಹಲ್ಲಿನಿಂದ ಹಾರಿ ಜಗ್ಗಿದರೆ, 80 ಕೆ-ಜಿಯ ಸಂಗ್ರಾಣಿ ಕಲ್ಲನ್ನು ಮುತ್ತಗಿ ಗ್ರಾಮದ ಪರಶುರಾಮ ಹೂಗಾರ, ಸಿದ್ದನಾಥದ 80 ವರ್ಷದ ದಿಗಂಬರ ಕೊಳಮಲಿ ಅವರು 20 ಕೆಜಿ ಕಲ್ಲನ್ನು ತಮ್ಮ ಮೀಸೆಗೆ ಕಟ್ಟಿಕೊಂಡು ಎತ್ತುವ ಮೂಲಕ ನೆರೆದ ಜನರನ್ನು ಗಮನ ಸೆಳೆದರು.

ಗುನ್ನಾಪೂರಿನ ಬೀರಪ್ಪ ಶಿವಪ್ಪ ಲೋಗಾವಿ ಅವರು ಮೆಟನಾಲಿಗೆ ಮೇಲಿಂದ ಅಕ್ಕಿ ಚೀಲ ತಮ್ಮ ಬೆನ್ನು ಮೇಲೆ ಇಟ್ಟುಕೊಂಡು ತಮ್ಮ ಕಸರತ್ತು ಮಾಡಿದರು. ವಗನೂರಿನ ಹಣಮಂತ ತಿಪ್ಪಣ್ಣ ವಡ್ಡರ ಅವರು ಕೈ ಸಹಾಯವಿಲ್ಲದೆ ಕಾಲಿನಿಂದ ದೊಡ್ಡ ಕೊಡ ಎತ್ತಿ ಭೇಷ್ ಎನಿಸಿಕೊಂಡರು. ವಿವಿಧ –ಲ್ವಾನರು 2 ಕ್ವಿಂಟಾಲ್ ಜೋಳದ ಚೀಲವನ್ನು ತೆಕ್ಕಿ ಬಡಿದುಕೊಂಡು ಎತ್ತಿದರೆ, ಉಸುಕಿನ ಚೀಲ ತಮ್ಮ ಬೆನ್ನು ಮೇಲೆ ಇಟ್ಟುಕೊಂಡು 5–6 ಸಲ ಕೂಡುವದು, ಎಳ್ಳುವದು ಮಾಡಿ ಸೈ ಎನಿಸಿಕೊಂಡರು.

ಈ ಸಂದರ್ಭದಲ್ಲಿ ಸಿದ್ದಲಿಂಗ ಸ್ವಾಮೀಜಿ, ಬಸವೇಶ್ವರ ಸೇವಾ ಸಮಿತಿಯ ಅಧ್ಯಕ್ಷ ಈರಣ್ಣ ಪಟ್ಟಣಶೆಟ್ಟಿ, ಜಾತ್ರಾ ಉತ್ಸವ ಸಮಿತಿ ಅಧ್ಯಕ್ಷ ರವಿ ರಾಠೋಡ, ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಉಪಾಧ್ಯಕ್ಷ ಅಶೋಕ ಹಾರಿವಾಳ, ಮುಖಂಡರಾದ ಸಂಗಣ್ಣ ಕಲ್ಲೂರ, ಎಂ.ಜಿ.ಆದಿಗೊಂಡ, ಅನಿಲ ಅಗರವಾಲ, ಸಂಗಮೇಶ ಓಲೇಕಾರ, ಸುರೇಶಗೌಡ ಪಾಟೀಲ, ಶೇಖರ ಗೊಳಸಂಗಿ, ಮೀರಾಸಾಬ ಕೊರಬು, ಶಂಕರಗೌಡ ಬಿರಾದಾರ, ಸಂಗಯ್ಯ ಒಡೆಯರ, ಸುಭಾಸ ಗಾಯಕವಾಡ, ಜಟ್ಟಿಂಗರಾಯ ಮಾಲಗಾರ, ಮಹಾಂತೇಶ ಹಂಜಗಿ,ಮುತ್ತು ಗುಂಡಳ್ಳಿ, ಮಲ್ಲಿಕಾರ್ಜುನ ಗುಂದಗಿ, ರವಿ ಪಟ್ಟಣಶೆಟ್ಟಿ, ದಯಾನಂದ ಜಾಲಗೇರಿ, ವಿಶ್ವನಾಥ ಹಾ-ರಿವಾಳ, ನಂದೀಶ ಪಾಟೀಲ, ಸಿದ್ರಾಮ ಪಾತ್ರೋಟಿ, ರಮೇಶ ಮಸಬಿನಾಳ, ಮಹೇಶ ಹಿರೇಕುರಬರ, ಮಂಜು ಜಾಲಗೇರಿ, ಮಲ್ಲು ಪಟ್ಟಣಶೆಟ್ಟಿ ಸೇರಿದಂತೆ ಇತರರು ಇದ್ದರು.

# ಸಕ್ಕರೆ ವಿತರಣೆಗೆ ಕೊನೆ ದಿನಾಂಕ ಘೋಷಿಸಿದ ಬೆಳಗಾಂ ಸಕ್ಕರೆ ಕಾರ್ಖಾನೆ




ಬೆಳಗಾವಿ: ಸನ್ 2024–25 ರ ಹಂಗಾಮಿನಲ್ಲಿ ಹುದಲಿ ಬೆಳಗಾಂ ಸಕ್ಕರೆ ಕಾರ್ಖಾನೆಗೆ ಕಬ್ಬು ಪೂರೈಸಿದ ಎಲ್ಲ ರೈತ ಬಾಂಧವರಿಗೆ ಪ್ರತಿ ಟನ್ ಕಬ್ಬಿಗೆ 500 ಗ್ರಾಂ. (ಅರ್ಧಕೆ.ಜಿ)ಯಂತೆ ಸಕ್ಕರೆಯನ್ನು ಪ್ರತಿ ಕಿ.ಗ್ರಾಂ.ಗೆ ರೂ.20/–ರ ರಿಯಾಯಿತಿ ದರದಲ್ಲಿ ಕಾರ್ಖಾನೆಯ ಆಡಳಿತ ಮಂಡಳಿ ನಿರ್ಧರಿಸದಂತೆ ಆ. 07 ರಿಂದ 20 ವರೆಗೂ ಸಕ್ಕರೆಯನ್ನು ಕಾರ್ಖಾನೆಯ ಆವರಣದಲ್ಲಿ ಈಗಾಗಲೇ ವಿತ-ರಿಸಲಾಗುತ್ತಿದೆ. ಕೊನೆಯ ದಿನವಾದ ಆ. 20 ರಂದು ಸಕ್ಕರೆ ವಿತರಣೆಯನ್ನು ಮುಕ್ತಾಯ ಗೊಳಿಸಲು ನಿರ್ಧರಿಸಲಾಗಿದೆ.

ಸನ್ 2024–25 ರ ಹಂಗಾಮಿನಲ್ಲಿ ಕಬ್ಬು ಪೂರೈಸಿದ ಎಲ್ಲ ರೈತ ಬಾಂಧವರು ಇದುವರೆಗೆ ಸಕ್ಕರೆಯನ್ನು ಪಡೆಯದಿದ್ದಲ್ಲಿ ತಾವು ಖುದ್ದಾಗಿ ಅಥ-ವಾ ತಮ್ಮ ಪ್ರತಿನಿಧಿಯ ಮೂಲಕ ಕಾರ್ಖಾನೆಯ ಆವರಣದ ಸಕ್ಕರೆ ವಿತರಣಾ ಕೇಂದ್ರದಲ್ಲಿ ಕಬ್ಬಿನ ತೂಕದ ಪಾವತಿ, ಗುರುತಿನ ಚೀಟಿ ಹಾಗೂ ಪ್ರತಿನಿಧಿಯಾಗಿದ್ದಲ್ಲಿ ಸಂಬಂಧಪಟ್ಟ ವಲಯ ಕಚೇ-ರಿಗಳಿಂದ ಅನುಮೋದಿಸಲ್ಪಟ್ಟ ಸಮ್ಮತಿ ಪತ್ರಗಳನ್ನು ಕಡ್ಡಾಯವಾಗಿ ಕಚೇರಿ ವೇಳೆಯಲ್ಲಿ ಹಾಜರು ಪಡಿಸಿ ಸೆ. 20 ಒಳಗಾಗಿ ಸಕ್ಕರೆಯನ್ನು ಪಡೆದುಕೊಳ್ಳಬೇಕು ಬೆಳಗಾಂ ಶುಗರ್ಸ ಹಿರಿಯ ಉಪಾಧ್ಯಕ್ಷರು ಎಲ್.ಆರ್.ಕಾರಗಿ ಅವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ರಂಜಿಸಿದ 'ಜೋಕಿಗೊಂದು ಜೋಕ್' ವಿನೂತನ ಕಾರ್ಯಕ್ರಮ




ಬೆಳಗಾವಿ – ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ. 9 ಶನಿವಾರದಂದು ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ ಜೋಕಿಗೊಂದು ಜೋಕು ಎಂಬವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು.

ಅಧ್ಯಕ್ಷತೆಯನ್ನು ಹಿರಿಯ ಪತ್ರರ್ತ ಎಲ್. ಎಸ್. ಶಾಸ್ತ್ರಿಯವರು ಸ್ವರಚಿತ ಹಾಸ್ಯ ಚುಟುಕುಗಳ ವಾಚನ ಮಾಡಿದರು. ಅತಿಥಿಗಳಾಗಿ ಆಗಮಿಸಿದ್ದ ನಿವೃತ್ತ ಪ್ರಾಚಾರ್ಯರಾದ ಪ್ರೊ. ವ್ಹಿ. ಎನ್. ಜೋಶಿ ನಗೆಪ್ರಸಂಗವೊಂದನ್ನು ಹಂಚಿಕೊಂಡರು.

ಪ್ರಾಸ್ತಾವಿಕ ಮಾತುಗಳನ್ನಾಡಿದ ಹಾಸ್ಯಕೂಟ ಸಂಚಾಲಕ, ಪತ್ರಕರ್ತ ಗುಂಡೇನಟ್ಟಿ ಮಧುಕರ ಮಾತನಾಡುತ್ತ ಸಂಘಟನೆಯೊಂದಿಗಿನ ದಾರಿ ತುಂಬ ಕಷ್ಟದ ದಾರಿ ಆದರೆ ಸಂಘಟನೆಯನ್ನು ಪ್ರಾಮಾಣಿಕ ಬೆಳೆಸುವ ಉಳಿಸುವ ಪ್ರಯತ್ನ ಮಾಡಿದಾಗ ಸಂಘಟನೆಯೊಂದಿಗೆ ನಾವು ಬೆಳೆಯುತ್ತೇವೆ ಎಂದು ಹೇಳಿದರು.

ಹಾಸ್ಯಕೂಟ ಬೆಳೆಯುವಲ್ಲಿ ಪ್ರೊ. ಜಿ. ಕೆ. ಕುಲಕರ್ಣಿ, ಎಂ. ಬಿ. ಹೊಸಳ್ಳಿ, ಜಿ. ಎಸ್. ಸೋನಾರ, ತಾನಾಜಿಯವರದ್ದು ಮಹತ್ವದ ಪಾತ್ರವಿದೆ ಹಾಸ್ಯಕೂಟ ಸಂಘಟನೆಯೊಂದಿಗೆ ಜನರು ನಮ್ಮನ್ನು ಪರಿಚಯಿಸುತ್ತಿದ್ದಾರೆ ಎಂದು ಗುಂಡೇನಟ್ಟಿ ಹೇಳಿದರು.

ಪ್ರಾಯೋಜಕತ್ವವನ್ನು ವಹಿಸಿಕೊಂಡಿದ್ದ ಕರ್ನಾಟಕ ವಿಕಾಸ ಬ್ಯಾಂಕ್ ನ ನಿವೃತ್ತ ವ್ಯವಸ್ಥಾಪಕರಾದ ಪಿ. ವಿ. ಪಾಟೀಲ, ಎಂ.ಬಿ. ಹೊಸಳ್ಳಿ, ಜಿ. ಎಸ್. ಸೋನಾರ, ಅರವಿಂದ ಹುನಗುಂದ, ಜೋಕಿಗೊಂದು ಜೋಕ್ ಹೇಳಿದರು. ತಾನಾಜಿ ನಿರೂಪಿಸಿದರು.

# ವಿದ್ಯುತ್ ವ್ಯತ್ಯಯ

ಬೆಳಗಾವಿ, ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವ್ಹಿ. ಉಚಗಾಂವ ಉಪಕೇಂದ್ರದಲ್ಲಿ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ಬಿಜಗರ್ಣಿ, ಬೋಕಮೂರ, ಕವಳೇವಾಡಿ, ಬೆಳವಟ್ಟಿ, ಬಾಕನೂರ, ಬೆಳಗುಂದಿ, ಸೋನೋಲಿ, ಎಳೆಬೈಲ, ರಾಕಸಕೊಪ್ಪ, ಕುದ್ರೇಮನಿ, ಕಲ್ಲೇಹೋಳ, ಬೆಳಗುಂದಿ ಇಂ-ಡಸ್ಟ್ರೀಯಲ್ ಏರಿಯಾ, ಉಚಗಾಂವ, ಬಸುರ್ತೆ, ಬೆಕ್ಕಿನಕೇರಿ, ಸುಳಗಾ, ತುರಮುರಿ, ಕೋಣೇವಾಡಿ, ಬಾಚಿ, ಬೆನಕನಹಳ್ಳಿ, ಸಾವಗಾಂವ, ಮಂಡೋಳಿ, ಹಂಗರಗಾ, ಅಂಗಡಿ ಕಾಲೇಜ್, ಗಣೇಶಪೂರ, ಮಹಾಲಕ್ಷ್ಮೀ ನಗರ, ಆರ್ಮಿ ಕಾಲನಿ, ಕೆ.ಎಚ್.ಬಿ. ಲೇಔಟ್, ಬೆನಕನಹಳ್ಳಿ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ದಿನಾಂಕ 14.08.2025 ರಿಂದ 16.08.2025 ವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಕಾರ್ಯಾ ಮತ್ತು ಪಾಲನೆ, ನಗರ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರು(ವಿ), ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಶಾಮುಕ್ತ ಭಾರತ ಅಭಿಯಾನ : ವಿದ್ಯಾರ್ಥಿಗಳು ದುಷ್ಟಗಳಿಂದ ದೂರವಿರಬೇಕು : ಮಹಾಂತೇಶ



ಗದಗ : ಶಾಲೆ ಮತ್ತು ಕಾಲೇಜಿನ ವಿದ್ಯಾರ್ಥಿಗಳು ಮದ್ಯಪಾನ, ಧೂಮ್ರಪಾನಗಳಂತ ದುಶ್ಚಟಗಳಿಂದ ದೂರಯಿದ್ದು, ದೇಶದ ಆಸ್ತಿಯಾಗಿ ಬೆಳೆಯಬೇಕು ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿಗಳಾದ ಮಹಾಂತೇಶ ಕೆ. ಅವರು ಹೇಳಿದರು.

79ನೇ ಸ್ವಾತಂತ್ರ ದಿನಾಚರಣೆ ಅಂಗವಾಗಿ ಹಾಗೂ ನಶಾಮುಕ್ತ ಭಾರತ ಅಭಿಯಾನದ ನಿಮಿತ್ತ ನಗರದ ತೋಂಟದ ಸಿದ್ಧೇಶ್ವರ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ಪದವಿ ಪೂರ್ವ ಮಹಾವಿದ್ಯಾಲಯ ಆವರಣದಲ್ಲಿ ಸಸಿ ನಡೆವುದರ ಮೂಲಕ ನಶಾಮುಕ್ತ ಭಾರತ ಅಭಿಯಾನದ ಪ್ರತಿಜ್ಞಾವಿಧಿ ಸ್ವೀಕಾರ ಸಮಾರಂಭದಲ್ಲಿ ಅವರು ಮಾತನಾಡಿ, ನಶಾಮುಕ್ತ ಭಾರತ ಅಭಿಯಾನ ಆರಂಭವಾಗಿ 5 ವರ್ಷ ಕಳೆದಿವೆ. ಆದ-ರೂ ಬಳಕೆಯ ಪ್ರಮಾಣ ಕಡಿಮೆ ಆಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಇದರ ದುಷ್ಪರಿಣಾಮದ ಬಗ್ಗೆ ಯುವ ಜನರಲ್ಲಿ ಜಾಗೃತಿ ಮೂಡಿಸುವುದು ಅತ್ಯವಶ್ಯವಾಗಿದೆ. ಆದ್ದರಿಂದ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ನಶಾಮುಕ್ತ ಭಾರತ ಅಭಿಯಾನ ಯೋಜನೆಯಡಿಯಲ್ಲಿ ಜಿಲ್ಲೆಯ ಎಲ್ಲ ಶಾಲಾ–ಕಾಲೇಜುಗಳಲ್ಲಿ ಮಾದಕ ವಸ್ತು ಸೇವನೆ ವಿರೋಧಿ ಅಭಿಯಾನ ಹಮ್ಮಿಕೊಂಡಿದ್ದೇವೆ ಎಂದು ತಿಳಿದರು.

ಈ ಸಂದರ್ಭದಲ್ಲಿ ಗದಗ ತಾಲೂಕ ಎಂಆರ್‌ಡಬ್ಲೂ ಖಾಜಾಹಸೇನ ಕಾತರಕಿ, ಕಾಲೇಜಿನ ಪ್ರಾಚಾರ್ಯ ವ್ಹೆ.ಎಸ್. ಮತ್ತೂರ, ಶಿಲ್ಪಾ ಪಾಟೀಲ, ನಾಗರತ್ನಾ, ಎನ್.ವಿ. ಕಡಗದ, ಕೆ.ಎಸ್. ಮುಲ್ಲಾಫೀರ್, ವಿಜಯಲಕ್ಷ್ಮೀ ಕೊಣ್ಣೂರ, ಎಸ್. ಎಸ್. ನಿಲೋಗಲ್ಲ, ಪ್ರತಿಭಾ ಪಟ್ಟೇದ, ಎನ್.ಎಂ.ಮಕಾಂದಾರ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

## ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮ: ಪ್ರಗತಿ ಪರಿಶೀಲನಾ ಸಭೆ

# ಅಲ್ಪಸಂಖ್ಯಾತರ ಯೋಜನೆಗಳ ಅನುಷ್ಠಾನಕ್ಕೂ ಒತ್ತು ನೀಡಿ- ಜಿಲ್ಲಾಧಿಕಾರಿ



ಕೊಪ್ಪಳ ; ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮ ದಡಿ ಇಲಾಖೆಗಳು ಅಲ್ಪಸಂಖ್ಯಾತರ ಯೋಜನೆಗಳ ಅನುಷ್ಠಾನಕ್ಕೂ ಒತ್ತು ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ. ಸುರೇಶ್ ಬಿ. ಇಟ್ನಾಳ ಹೇಳಿದರು. ಅವರು ಬುಧವಾರ ಜಿಲ್ಲಾಧಿಕಾ-ರಿಗಳ ಕಛೇರಿ ಸಭಾಂಗಣದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹಮ್ಮಿಕೊಂಡಿದ್ದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಅಲ್ಪಸಂಖ್ಯಾತರ ಸಮುದಾಯದವರನ್ನು ಮುಖ್ಯವಾಹಿನಿಗೆ ತರಲು ಪ್ರಧಾನಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಅಲ್ಪಸಂಖ್ಯಾತ ಸಮುದಾಯಗಳಾದ ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್ ಪಾರ್ಸಿ ಬೌದ್ಧ ಸಮುದಾಯಗಳಗಳಿಗೆ ಇಲಾಖಾವಾರು ವಿವಿಧ ಯೋಜನೆ ಗಳಡಿಯಲ್ಲಿ ನಿಗದಿಪಡಿಸಿದ ಗು-ರಿಗಳಂತೆ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ತಲುಪಿಸಬೇಕು. ವಿದ್ಯಾರ್ಥಿಗಳಿಗೆ ಅರಿವು ಯೋಜನೆ ಹಾಗೂ ಆರ್ಥಿಕವಾಗಿ ಸಬಲಿಕರಣಗೊಳಿಸಲು ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ಒದಗಿಸವ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿ ವೇತನ, ಉಚಿತ ಪರೀಕ್ಷಾ ಪೂರ್ವ ತರಬೇತಿಗಳನ್ನು ನೀಡಲಾಗುತ್ತಿದ್ದು, ಇದರ ಸದುಪಯೋಗ ಅಲ್ಪಸಂಖ್ಯಾತರ ಸಮುದಾಯದ ಅರ್ಹ ಫಲಾನುಭವಿಗಳಿಗೆ ಸಿಗುವಂತಾಗಬೇಕು. ಈ ಹಿನ್ನೆಲೆಯಲ್ಲಿ ಯೋಜನೆಗಳು ಮತ್ತು ಕಾರ್ಯಕ್ರಮಗಳ ಕು-ರಿತು ಸಾರ್ವಜನಿಕರಿಗೆ ಮಾಹಿತಿ ನೀಡಲು ಕ್ರಮ ವಹಿಸುವಂತೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾ-ರಿಗಳಿಗೆ ಸೂಚನೆ ನೀಡಿದರು.

ವಿವಿಧ ಇಲಾಖೆಗಳ ಮೂಲಕವು ಅಲ್ಪಸಂಖ್ಯಾತರಿಗಾಗಿಯೇ ಮೀಸಲಿಟ್ಟ ಅನುದಾನವನ್ನು ಸಹ ಅರ್ಹರಿಗೆ ತಲುಪಿಸಲು ಆಯಾ ಇಲಾಖೆಗಳ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು. ನಿವೇಶನ, ಮನೆಗಳ ಹಂಚಿಕೆ, ಸ್ವಯಂ ಉದ್ಯೋಗ ಯೋಜನೆ, ಗಂಗಾ ಕಲ್ಯಾಣ ಹಾಗೂ ವಿವಿಧ ಇಲಾಖೆಯ ಯೋಜನೆಗಳ ಬಗ್ಗೆ ಅರಿವು ಮೂಡಿಸಲು ಪ್ರಚಾರ ಕಾರ್ಯಕ್ರಮ ಕೈಗೊಂಡು ಪ್ರಧಾನಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದಡಿ ಅರ್ಹ ಅಲ್ಪಸಂಖ್ಯಾತರ ಫಲಾನುಭವಿಗಳಿಗೆ ಸೂಕ್ತ ಸೌಲಭ್ಯ ಒದಗಿಸಲು ಕ್ರಮವಹಿಸುವಂತೆ ಜಿಲ್ಲಾಧಿಕಾ-ರಿಗಳು ಸಂಬಂಧಿಸಿದ ಅಧಿಕಾ-ರಿಗಳಿಗೆ ಸೂಚನೆ ನೀಡಿದರು. ಪ್ರಧಾನಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯ ನಾಮ ನಿರ್ದೇಶಿತ ಸದಸ್ಯರಾದ ನಜೀರಸಾಬ್ ಮೂಲಿಮನಿ, ಮೆಹಬೂಬ್ ಪಾಷಾ ಮಾನ್ವಿ, ಎಂ.ಡಿ ಸಿರಾಜ್ ಸಿದ್ದಾಪುರ ಅವರು ಯೋಜನೆಗಳ ಅನುಷ್ಠಾನದ ಕು-ರಿತಂತೆ ವಿವಿಧ ವಿಷಯಗಳನ್ನು ಸಭೆಯಲ್ಲಿ ಪ್ರಸ್ತಾಪಿಸಿದರು ಮತ್ತು ಸಲಹೆಗಳನ್ನು ನೀಡಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರ್, ಜಂಟಿ ಕೃಷಿ ನಿರ್ದೇಶಕ ಟಿ.ಎಸ್. ರುದ್ರೇಶಪ್ಪ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅಜ್ಮೀರ್ ಅಲಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕೃಷ್ಣ ಸಿ. ಉಕ್ಕುಂದ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಮ ಶೆಟ್ಟೆಪ್ಪನವರ್, ಪಶು ಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕ ಡಾ. ಪಿ.ಎಂ.ಮಲ್ಲಯ್ಯ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ತಾಲ್ಲೂಕು ವಿಸ್ತರಣಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಮಳೆಯಿಂದ ರದ್ದುಗೊಂಡ ತಿರಂಗಾ ಯಾತ್ರೆ ರ್‍ಯಾಲಿ: ಜಗತ್ತಿನ ಸರ್ವಶ್ರೇಷ್ಠ ರಾಷ್ಟ್ರ ನಮ್ಮ ಭಾರತ



ತೇರದಾಳ–ಜಾಗತಿಕ ಮಟ್ಟದಲ್ಲಿ ತನ್ನದೇಯಾದ ಸದ್ದು ಮಾಡುತ್ತಿರುವ ಭಾರತ ದೇಶ ಜಗತ್ತಿನ ಸರ್ವಶ್ರೇಷ್ಠ ರಾಷ್ಟ್ರವಾಗಿದೆ ಎಂದು ಬಿಜೆಪಿ ಗ್ರಾಮೀಣ ಮಂಡಲ ಅಧ್ಯಕ್ಷ ಸುರೇಶ ಅಕ್ಕಿವಾಟ ಹೇಳಿದರು.

ಸ್ವಾತಂತ್ರ್ಯೋತ್ಸವ ನಿಮಿತ್ತ ತೇರದಾಳದಲ್ಲಿ ಹಮ್ಮಿಕೊಂಡಿದ್ದ ತಿರಂಗಾ ಯಾತ್ರೆ ಬೈಕ್ ರ್‍ಯಾಲಿ ಮಳೆಯಿಂದಾಗಿ ರದ್ದುಗೊಂಡ ಹಿನ್ನಲೆಯಲ್ಲಿ ಯುವಕರನ್ನು ಉದ್ದೇಶಿಸಿ ಸಾಂಕೇತಿಕವಾಗಿ ಮಾತನಾಡಿದರು.

ಭಾರತ ದೇಶ ಎಂದರೆ ಹಿಯಾಳಿಸುವ ಒಂದು ಕಾಲವಿತ್ತು. ಆದರೆ ಇಂದು ನರೇಂದ್ರ ಮೋದಿ ಅವರು ಪ್ರಧಾನ ಮಂತ್ರಿ ಆದಾಗಿನಿಂದ ಇಡೀ ಜಗತ್ತು ಭಾರತವನ್ನು ಕೊಂಡಾಡುವಂತೆ ಆಗಿದೆ ಎಂದು ಬಣ್ಣಿಸಿದ ಅವರು, ಮುಂಬರುವ ದಿನಗಳಲ್ಲಿ ಭಾರತ ವಿಶ್ವಕ್ಕೆ ಮಾದರಿ ಆಗಲಿದೆ ಎಂದು ಅಭಿಮಾನದಿಂದ ಹೇಳಿದರು. ಕೆಎಂಎಫ್ ಅವಳಿ ಜಿಲ್ಲಾ ನಿರ್ದೇಶಕ ಲಕ್ಕಪ್ಪ ಪಾಟೀಲ, ಬಿಜೆಪಿ ನಗರ ಘಟಕ ಅಧ್ಯಕ್ಷ ಮಹಾವೀರ ಕೊಕಟನೂರ, ಯುವಮೋರ್ಚಾ ಅಧ್ಯಕ್ಷ ವಿಠ್ಠಲ ತಟ್ರಿ, ಒಬಿಸಿ ಅಧ್ಯಕ್ಷ ಶಂಕರ ಕುಂಬಾರ, ಅಪ್ಪು ಮಂಗಸೂಳಿ, ಶಂಕರ ಹುನ್ನೂರ, ಪ್ರಭಾಕರ ಬಾಗಿ, ರಾಮಣ್ಣ ಹಿಡಕಲ್, ಶಿವಗೊಂಡ ಸನದಿ, ಸುರೇಶ ರೇನಕೆ, ಬಾಳು ದೇಶಪಾಂಡೆ, ಅಲ್ಲಪ್ಪ ಮದಲಮಟ್ಟಿ, ಕೇದಾರಿ ಪಾಟೀಲ, ಆಕಾಶ ತೇಲಿ, ತೇರದಾಳ, ಸಸಾಲಟ್ಟಿ, ಕಾಲತಿಪ್ಪಿ, ಗೋಲಭಾವಿ, ಯರಗಟ್ಟಿ, ಹನಗಂಡಿ, ಹಳಿಂಗಳಿ ತಮದಡ್ಡಿ ಗ್ರಾಮಗಳ ನೂರಾರು ಯುವಕರು ಪಾಲ್ಗೊಂಡಿದ್ದರು.

# ತೋಟಗಾರಿಕೆ ಇಲಾಖೆ: ಬೆಳೆ ವಿಮಾ ಪಾವತಿಗೆ ಕೋರಿಕೆ

ಬೆಳಗಾವಿ, : ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ(ವಿಮಾ) ಯೋಜನೆಯಡಿ ಮುಂಗಾರು–2025 ಬೆಳಗಾವಿ ಜಿಲ್ಲೆಗೆ ಅರಿಶಿಣ, ಆಲೂಗಡ್ಡೆ (ಮಳೆಯಾಶ್ರಿತ), ಟೊಮ್ಯಾಟೋ, ಈರುಳ್ಳಿ (ನೀರಾವರಿ/ಮಳೆಯಾಶ್ರಿತ) ಬೆಳೆಗಳಿಗೆ ವಿಮೆ ಪಾವತಿಸಲು ವಿಮಾ ಕಂತನ್ನು ನಿಗದಿಪಡಿಸಲಾಗಿರುತ್ತದೆ.

ಬೆಳೆ ಸಾಲ ಪಡೆದ ರೈತರು **(LOANEE)** ಮಾತ್ರ ಅರಿಶಿಣ ರೂ. 7113/–, ಆಲೂಗಡ್ಡೆ (ಮಳೆಯಾಶ್ರೀತ) ರೂ. 3613/–, ಟೊಮ್ಯಾಟೋ ರೂ.7075/–, ಈರುಳ್ಳಿ (ನೀರಾವರಿ) ರೂ. 4025/–, ಈರುಳ್ಳಿ (ಮಳೆಯಾಶ್ರಿತ) ರೂ. 3788/– ವಿಮಾ ಕಂತನ್ನು ಪ್ರತಿ ಹೆಕ್ಟರ್‌ಗೆ ನಿಗಧಿಪಡಿಸಲಾಗಿದೆ.

ಬೆಳಗಾವಿ ಜಿಲ್ಲೆಗೆ ಪ್ರಧಾನಮಂತ್ರಿ ಫಸಲ ಬಿಮಾ ಯೋಜನೆಗೆ **Universal Sompo General Insurance Co.,** ಐಆಜ. ಕಂಪನಿಯು ಅಧಿಸೂಚಿತ ವಿಮಾ ಸಂಸ್ಥೆಯಾಗಿದೆ. ಆಸಕ್ತ ರೈತರು ಪ್ರಸಕ್ತ ಸಾಲಿನ ಪಹಣಿ, ಆಧಾರ ಕಾರ್ಡ ಹಾಗೂ ಬ್ಯಾಂಕ್ ಪಾಸ್‌ಬುಕ್ ಪ್ರತಿಯೊಂದಿಗೆ ಹತ್ತಿರದ ಬ್ಯಾಂಕ್ ಶಾಖೆಗಳಲ್ಲಿ, ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಅಥವಾ ಗ್ರಾಮ ಒನ್ ಕೇಂದ್ರಗಳಲ್ಲಿ ವಿಮೆ ಕಂತು ಪಾವತಿಸಬಹುದಾಗಿದೆ. ಸದರಿ ಯೋಜನೆಗೆ ಸಂಬಂಧಪಟ್ಟಂತೆ ಅಧಿಸೂಚಿತ ಹೋಬಳಿವಾರು ಬೆಳೆಗಳ ವ್ಯಾಪ್ತಿಯ ಕು-ರಿತು ಸಂಬಂಧಪಟ್ಟ ತಾಲೂಕು ಮತ್ತು ಹೋಬಳಿಮಟ್ಟದ ತೋಟಗಾರಿಕೆ ಅಧಿಕಾ-ರಿಗಳನ್ನು ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹೋಬಳಿ/ತಾಲೂಕು ಮಟ್ಟದ ತೋಟಗಾರಿಕೆ ಅಧಿಕಾ-ರಿಗಳ ದೂರವಾಣಿ ಸಂಖ್ಯೆ ಬೆಳಗಾವಿ: 9886400526, ಗೋಕಾಕ: 9449517449, ಖಾನಾಪೂರ: 9886909153, ಸವದತ್ತಿ: 9513481947, ಅಥಣಿ: 9036995750, ರಾಮದುರ್ಗ: 8861609569, ರಾಯಬಾಗ: 8904381481, ಹುಕ್ಕೇರಿ: 9886609248, ಚಿಕ್ಕೋಡಿ: 9742436124, ಬೈಲಹೊಂಗಲ: 8951052518 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ತೋಟಗಾರಿಕೆ ಇಲಾಖೆ ಉಪನಿರ್ದೇಶಕರು (ಜಿ.ಪಂ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಪ್ಪಳ ತಾ.ಪಂ 1ನೇ ತ್ರೈಮಾಸಿಕ ಕೆಡಿಪಿ ಸಭೆ ಆಗಸ್ಟ 25ಕ್ಕೆ

ಕೊಪ್ಪಳ : ಕೊಪ್ಪಳ ತಾಲೂಕು ಪಂಚಾಯತ್ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದ 20 ಅಂಶಗಳು ಸೇರಿದಂತೆ 2025–26ನೇ ಸಾಲಿನ 1ನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಆಗಸ್ಟ 25 ರಂದು ಬೆಳಿಗ್ಗೆ 10 ಗಂಟೆಗೆ ತಾ.ಪಂ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಸಭೆಯ ಅಧ್ಯಕ್ಷತೆ ವಹಿಸುವರು. ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ಹಾಗೂ ಅನಿವಾರ್ಯ ಕಾರಣಗಳಿಂದ ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದಲ್ಲಿ ಶಾಸಕರ ಅನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ ಎಂದು ಕೊಪ್ಪಳ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತರು ಕಡಿಮೆ ಖರ್ಚಿನಲ್ಲಿ ಹೆಚ್ಚು ಇಳುವರಿ ಪಡೆದು ಲಾಭ ಪಡೆದುಕೊಳ್ಳೀರಿ ಅಲ್ಲನಗೌಡ ಪಾಟಿಲ



ಹಳ್ಳೂರ : ಕಬ್ಬಿನ ಸಸಿ ಮಾಡಿ ನಾಟಿ ಮಾಡುವುದರಿಂದ ರೈತರಿಗೆ ಕಡಿಮೆ ಖರ್ಚಿನಲ್ಲಿ ಹೆಚ್ಚು ಇಳುವರಿ ಪಡೆದು ರೈತ ಅರ್ಥಿಕವಾಗಿ ಸಬಲರಾಗಬಹುದು ಎಂದು ಅಲ್ಲನ ಗೌಡ ಪಾಟೀಲ ಅವರು ಹೇಳಿದರು. ಶಿವಾಪೂರ ಗ್ರಾಮದ ಭೀಮಪ್ಪ ಬೆಳಗಲಿ ಅವರ ತೋಟದಲ್ಲಿ ನಡೆದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ,ಬಿ ಸಿ ಟ್ರಸ್ಟ್ ( ರಿ ) ಮೂಡಲಗಿ ಗ್ರಾಮಿಣ ವಲಯದ ವತಿಯಿಂದ ನಡೆದ ಸುಸ್ಥಿರ ಕಬ್ಬಿಣ ಬೇಸಾಯದ ಬಗ್ಗೆ ರೈತ ಕ್ಷೇತ್ರ ಶಾಲಾ ಕಾರ್ಯಕ್ರಮದಲ್ಲಿ ಮಾತನಾಡಿ ಗ್ರಾಮೀಣ ಕಬ್ಬಿನ ಬೇಸಾಯ ದ ಬಗ್ಗೆ ರೈತ ಕ್ಷೇತ್ರ ಪಾಠಶಾಲೆ ಕಾರ್ಯಕ್ರಮ ಹಮ್ಮಿಕೊಂಡಿದ್ದು ಪ್ರಗತಿಪರ ರೈತರು, ಕಬ್ಬಿನ ಬೇಸಾಯದಲ್ಲಿ ನಾಟಿ ಮಾಡುವ ವಿಧಾನದ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು. ಕಬ್ಬಿಣ ಕನ್ನ ಕಸಿ ವಿಧಾನದ ದೊಣ್ಣೆ ಹುಳು ನಿಯಂತ್ರಣದ ಸರಳ ಮಾರ್ಗ ಹೇಳಿದರು, ಕಡಿಮೆ ಖರ್ಚು ಮಾಡಿ, ಹೆಚ್ಚು ಆದಾಯ ಪಡೆಯುವ ತಳಿಗಳ ಆಯ್ಕೆ ಮಾಡುವ ವಿಧಾನದ ಬಗ್ಗೆ ಬಿಜೋಪಚಾರ ಮಾಡುವ ವಿಧಾನ ದ , ಅಂತರ ಬೆಳೆ,ಬೇಸಾಯದ ಬಗ್ಗೆ,ಮಾಹಿತಿ ನೀಡಿದರು,

ಕೃಷಿ ಮೇಲ್ವಿಚಾರಕರಾದ ಮೈಲಾರಪ್ಪ ಪೈಲಿ ಪ್ರಸ್ತಾವಿಕವಾಗಿ ಯೋಜನೆ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು ಮೇಲ್ವಿಚಾರಕರಾದ ರವಿ ಜಾಡಗೋಪ್ಪದ ಇವರು ಸರ್ವ ಸದಸ್ಯರ ಪ್ರಬುದ್ಧತೆ ನಮ್ಮ ಬದ್ಧತೆ ಬಗ್ಗೆ ಮಾಹಿತಿ ನೀಡಿದರು, ಕಾರ್ಯಕ್ರಮದಲ್ಲಿ ಪತ್ರಕರ್ತರಾದ ಮುರಿಗೆಪ್ಪ ಮಾಲಗಾರ.ಪ್ರಗತಿಪರ ರೈತರಾದ ಶಿವಪುತ್ರಪ್ಪ ಹುಣಶ್ಯಾಳ, ದುಂಡಪ್ಪ ತುಕ್ಕನವರ. ರಾಮಪ್ಪ ಕುಂದರಗಿ . ಸ್ವ ಸಹಾಯ, ಸಂಘ ದ ಸದಸ್ಯರು, ರೈತರು ಭಾಗವಹಿಸಿದರು, ಸೇವಾ ಪ್ರತಿನಿಧಿಯಾದ ಸುನಂದಾ ಮೇನಸಪ್ಪಗೋಳ, ಕಾರ್ಯಕ್ರಮ ನಿರೂಪಿಸಿದ ಕಸ್ತೂರಿ ಸವದಿ ವಂದಿಸಿದರು, ಯಲ್ಲವ್ವ ಬೆಳಗಲಿ ಸ್ವಾಗತಿಸಿದರು.

****

## ಪಿಎಂ ಜೀವನ ಜ್ಯೋತಿ ಭೀಮಾ ಯೋಜನೆ: ವಿಮಾ ಮೊತ್ತ ಪಾವತಿಸಲು ಆದೇಶ ಪ್ರಕಟ

ಕೊಪ್ಪಳ : ಫಿರ್ಯಾದುದಾರರಿಗೆ ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆಯ ವಿಮಾ ಮೊತ್ತವನ್ನು ಪಾವತಿಸಲು ಇನ್ಸೂರೆನ್ಸ್ ಕಂಪನಿಗೆ ಆದೇಶಿಸಿ, ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ತೀರ್ಪು ಪ್ರಕಟಿಸಿದೆ.

ಗ್ರಾಹಕ ಫಿರ್ಯಾದು ಸಂಖ್ಯೆ: 43/2025 ರಲ್ಲಿನ ಅಂತಿಮ ತೀರ್ಪಿನ ಸಾರಾಂಶದನ್ವಯ ಫಿರ್ಯಾದುದಾರರಾದ ಉಮೇಶ ತಂದೆ ಪರಸಪ್ಪ ಶಿವಪ್ಪ ಭಜಂಗರವರು, ವಾಸ ಸ್ಥಳ ಹಸಬ್ ರಸ್ತೆ, ಹಟಗಾರ ಪೇಟೆ, ಕೊಪ್ಪಳ ರವರ ತಂದೆ ಪರಸಪ್ಪ ಶಿವಪ್ಪ.ಬಿ ಇವರು ತಮ್ಮ ಜೀವಿತ ಕಾಲದಲ್ಲಿ ಎದುರುದಾರರಾದ ಸ್ಟಾರ್ ಯುನಿಯನ್ ದಾಲ್ ಇಂಚ್ ಜೀವ ವಿಮಾ ಕಂಪನಿ ಲಿಮಿಟೆಡ, ನವಿ ಮುಂಬಯಿ ಇವರಲ್ಲಿ ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ ಅಡಿಯಲ್ಲಿ ಒಂದು ವಿಮಾ ಪಾಲಿಸಿಯನ್ನು ಕಾರ್ಪಾರೇಶನ ಬ್ಯಾಂಕ್ ಮೂಲಕ ವಿಮಾ ಪಾಲಸಿ ಸಂಖ್ಯೆ:ಜೆಜೆ000002ಯನ್ನು ದಿನಾಂಕ: 24–06–2015 ರಲ್ಲಿ ರೂ. 2,00,000 ಗಳಿಗೆ ಪಾಲಿಸಿಯ ವಿಮಾ ಕಂತು ವಾರ್ಷಿಕ ರೂ.330 ನ್ನು ಪಾವತಿಸಿ ಪಾಲಸಿಯನ್ನು ಪಡೆದುಕೊಂಡಿರುತ್ತಾರೆ. ಪ್ರತಿ ವರ್ಷ ಈ ವಿಮಾ ಪಾಲಸಿಯನ್ನು ನವೀಕರಿಸಿಕೊಂಡು ಬಂದಿರುತ್ತಾರೆ ಹಾಗೂ ಕೊನೆಯ ವಿಮಾ ಕಂತು ರೂ. 330 ಗಳನ್ನು ಕ್ರಮವಾಗಿ ದಿನಾಂಕ 29–05–2021 ಮತ್ತು 28–05–2022 ರಂದು (ಮರಣದ ನಂತರ ಬ್ಯಾಂಕ್ ಖಾತೆಯಿಂದ ವಿಮಾ ಕಂತಿನ ಮೊತ್ತ ಕಡಿತ) ಪಾವತಿಸಿರುತ್ತಾರೆ. ನಂತರ ದೂರುದಾರರು ತಂದೆಯಾದ ಪಾಲಿಸಿದಾರರು ಆಕಸ್ಮಿಕವಾಗಿ ಹೃದಯಘಾತದಿಂದ ದಿನಾಂಕ: 03/05/2022 ರಂದು ಕೊಪ್ಪಳದಲ್ಲಿ ಮರಣವನ್ನು ಹೊಂದಿರುತ್ತಾರೆ.

ದೂರುದಾರರ ತಂದೆಯು ಮರಣ ಹೊಂದಿದ ನಂತರ ದೂರುದಾರರು ಎದುರುದಾರರ ಶಾಖೆಗೆ ಹೋಗಿ ಕ್ಲೇಮ್ ಫಾರಂ ಸಂಗಡ ಎಲ್ಲಾ ದಾಖಲೆಗಳನ್ನು ನೀಡಿರುತ್ತಾರೆ. ಆದರೆ ಎದುರುದಾರರು ದಿನಾಂಕ: 30/09/2022 ರಂದು ಈ ಕ್ಲೇಮನ್ನು ನೀಡಲು ಬರುವುದಿಲ್ಲವೆಂದು ದೂರುದಾರರಿಗೆ ಪತ್ರವನ್ನು ಹಾಕಿರುತ್ತಾರೆ. ಕಾರಣ ಪಾಲಿಸಿದಾರರು ಪಾಲಿಸಿ ತೆಗೆದುಕೊಳ್ಳುವಾಗ ಪಾಲಿಸಿದಾರರ ವಯಸ್ಸು ತಪ್ಪಾಗಿ ತಿಳಿಸಿರುವುದರಿಂದ ಪಾಲಿಸಿಯ ಕ್ಲೇಮ್‌ನ್ನು ತಿರಸ್ಕಾರ ಮಾಡಿ ವಿಮಾ ಮೊತ್ತವನ್ನು ನೀಡಲು ಬರುವುದಿಲ್ಲವೆಂದು ತಿಳಿಸಿರುತ್ತಾರೆ. ಪಾಲಸಿದಾರರು ಉಳಿತಾಯ ಖಾತೆ ಕಾರ್ಪಾರೇಶನ ಬ್ಯಾಂಕ್ ಮೂಲಕ ಪಾಲಸಿಯನ್ನು ಪಡೆದುಕೊಂಡಿದ್ದು, ಪಾಲಿಸಿದಾರರು ಪಾಲಿಸಿ ಮಾಡಿಸುವ ಸಂದರ್ಭದಲ್ಲಿ ತನ್ನ ವಯಸ್ಸನ್ನು ಎದುರುದಾರರ ಶಾಖೆಗೆ ತಪ್ಪಾಗಿ ನೀಡಿರುವುದಿಲ್ಲ. ಎದುರುದಾರ ವಿಮಾ ಕಂಪನಿಯವರು ಕ್ಲೇಮಿನ ಹಣವನ್ನು ನೀಡುವುದರಿಂದ ತಪ್ಪಿಸಿಕೊಳ್ಳುವುದರ ಸಲುವಾಗಿ ಪಾಲಿಸಿಯ ಕ್ಲೇಮ್‌ನ್ನು ತಿರಸ್ಕಾರ ಮಾಡಿ ಸೇವಾ ನ್ಯೂನ್ಯತೆ ಎಸಗಿರುತ್ತಾರೆ. ಇದರಿಂದ ದೂರುದಾರರು ದೈಹಿಕ ಮತ್ತು ಮಾನಸಿಕವಾಗಿ ಯಾತನೆ ಅನುಭವಿಸಿರುತ್ತಾರೆ. ಇದರಿಂದ ಬೇಸತ್ತು ದೂರುದಾರರು ಎದುರುದಾರ–ರಿಂದ ಪರಿಹಾರ ಕೋರಿ ಈ ದೂರನ್ನು ದಾಖಲಿಸಿರುತ್ತಾರೆ.

ಈ ದೂರನ್ನು ದಾಖಲಿಸಿಕೊಂಡ ನಂತರ ಕೊಪ್ಪಳ ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಎದುರುದಾರರಿಗೆ ನೋಟಿಸನ್ನು ನೀಡಿದ್ದು, ಈ ನೋಟಿಸ್ ಎದುರುದಾರರಿಗೆ ಖುದ್ದು ಜಾರಿಯಾಗಿರುತ್ತದೆ. ಎದುರುದರರು ಜಿಲ್ಲಾ ಆಯೋಗಕ್ಕೆ ವಾಯಿದೆ ದಿನದಂದು ಗೈರು ಹಾಜರಾಗಿದ್ದು, ತಮ್ಮ ತಕರಾರನ್ನು ಸಲ್ಲಿಸಲು ವಿಫಲರಾಗಿರುತ್ತಾರೆ ಹಾಗೂ ಸಾಕ್ಷಿ ಹೇಳಿಕೆ ಅಥವಾ ಲಿಖಿತ ಅಥವಾ ಮೌಖಿಕ ವಾದ ಮಂಡನೆಯನ್ನು ಸಹ ಮಾಡಿರುವುದಿಲ್ಲ.

ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಜಿ.ಇ.ಸೌಭಾಗ್ಯಲಕ್ಷ್ಮೀ ಹಾಗೂ ಸದಸ್ಯರಾದ ರಾಜು ಎನ್. ಮೇತ್ರಿ ರವರು ಈ ವಾದವನ್ನು ಆಲಿಸಿ, ಎದುರುದಾರರು ದೂರುದಾರರ ತಂದೆ ಪಾಲಸಿದಾರರಾದ ಪರಸಪ್ಪ ಶಿವಪ್ಪ.ಬಿ ರವರು ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ ಅಡಿಯಲ್ಲಿ ಒಂದು ವಿಮಾ ಪಾಲಿಸಿಯನ್ನು ಕಾರ್ಪಾರೇಶನ ಬ್ಯಾಂಕ್ ಮೂಲಕ ದಿನಾಂಕ 24–06–2015 ರಂದು ಪಡೆದುಕೊಂಡಿದ್ದು, ಈ ವಿಮಾ ಪಾಲಸಿಯನ್ನು ಪ್ರತಿ ವರ್ಷ ವಿಮಾ ಕಂತು ರೂ. 330 ನ್ನು ಪಾವತಿಸಿ ನವೀಕರಿಸಿಕೊಂಡು ಬಂದಿರುತ್ತಾರೆ. ಪಾಲಸಿದಾರನು ಮೃತ ಹೊಂದುವ ಸಮಯದಲ್ಲಿ ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ ಅಡಿಯಲ್ಲಿ ವಿಮಾ ಪಾಲಿಸಿಯು ಚಾಲ್ತಿಯಲ್ಲಿದ್ದು ಎದುರುದಾರರು ವಿಮಾ ಮೊತ್ತ ರೂ. 2,00,000 ಪಾವತಿಸದೇ ದೂರುದಾರರ ಡೆತ್ ಕ್ಲೇಮ್‌ನ್ನು ನಿರಾಕರಸಿ, ಸೇವಾ ನ್ಯೂನ್ಯತೆ ಎಸಗಿರುವುದನ್ನು ದಾಖಲಾತಿಗಳ ಮೂಲಕ ಸಾಬೀತಾಗಿದೆ. ಆದ್ದ–ರಿಂದ ಎದುರುದಾರರು ದೂರುದಾರರ ತಂದೆಯವರು ಪಡೆದುಕೊಂಡ ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ ಅಡಿಯಲ್ಲಿ ಪಡೆದ ಪಾಲಸಿ ಸಂಖ್ಯೆ ಜೆಜೆ000002 ರಲ್ಲಿನ ವಿಮಾ ಮೊತ್ತ ರೂ. 2,00,000 ಗಳನ್ನು ದೂರುದಾರ–ರಿಗೆ ಪಾವತಿಸುವಂತೆ ಹಾಗೂ ಈ ವಿಮಾ ಮೊತ್ತಕ್ಕೆ ದೂರಿನ ದಿನಾಂಕದಿಂದ ಪಾವತಿಯಾಗುವವರೆಗೆ ವಾರ್ಷಿಕ ಶೇ.6ರ ಬಡ್ಡಿ ಸಮೇತ ನೀಡುವಂತೆ ಹಾಗೂ ಮಾನಸಿಕ ಯಾತನೆಗಾಗಿ ರೂ. 5,000 ಹಾಗೂ ದೂರಿನ ಖರ್ಚು ರೂ. 5,000 ಗಳನ್ನು ಪಾವತಿಸಲು ಎದುರುದಾರ–ರಿಗೆ ಆದೇಶಿಸಲಾಗಿದೆ. ಈ ಪರಿಹಾರದ ಮೊತ್ತವನ್ನು ಆದೇಶದ ದಿನಾಂಕದಿಂದ 45 ದಿನಗಳ ಒಳಗಾಗಿ ಎದುರುದಾರರು ಫಿರ್ಯಾದುದಾರರಿಗೆ ಪಾವತಿಸುವಂತೆ ಆದೇಶವನ್ನು ನೀಡಿರುತ್ತಾರೆ ಎಂದು ಕೊಪ್ಪಳ ಜಿಲ್ಲಾ ಗ್ರಾಹಕರ ಆಯೋಗದ ಸಹಾಯಕ ರಿಜಿಸ್ಟ್ರಾರ ಹಾಗೂ ಸಹಾಯಕ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

***

## ವಿಠ್ಠಲ ಮಂದಿರದಲ್ಲಿ ಶ್ರೀ ಜ್ಞಾನೇಶ್ವರಿ ಪಾರಾಯಣ ಪ್ರಾರಂಭ



ಘಟಪ್ರಭಾ ; ಪ್ರತಿ ವರ್ಷದಂತೆ ಈ ವರ್ಷವೂ ಮಲ್ಲಾಪುರ ಪಿ ಜಿ, ಘಟಪ್ರಭಾದ ಶ್ರೀ ವಿಠ್ಠಲ ರುಕ್ಮಿಣಿ ಮಂದಿರದಲ್ಲಿ ಶ್ರೀ ಜ್ಞಾನೇಶ್ವರಿ ಪಾರಾಯಣ ಸಪ್ತಾಹ ಕಾರ್ಯಕ್ರಮವು ಪೂಜೆ, ಅಭಿಷೇಕ, ಮಹಾಪ್ರಸಾದ ಇನ್ನು ಅನೇಕ ಭಕ್ತಿ ಭಾವದ ಭಜನೆ ಮುಖಾಂತರ ಗುರುವಾರ ದಿನಾಂಕ 14–08–2025 ರಂದು ಅದ್ದೂ–ರಿಯಾಗಿ ಪ್ರಾರಂಭವಾಯಿತು. ಶ್ರೀ ನಾಮದೇವ ಮಹಾರಾಜ ವಾಸ್ತವ ಮಹಾರಾಜ ಅವರ ನೇತೃತ್ವದಲ್ಲಿ ಪಾರಾಯಣ ಪ್ರಾರಂಭವಾಯಿತು. ಈ ಪಾರಾಯಣದಲ್ಲಿ ಜಿ ಪಿ ರಾವ ಹೊಸಪೇಟೆ, ರಾಮಣ್ಣ ಹುಕ್ಕೇರಿ, ಸುರೇಶ ಪಾಟೀಲ, ಕುಮಾರ ಹುಕ್ಕೇರಿ, ಕಾಶಪ್ಪ ಹುಕ್ಕೇರಿ, ರಾಜು ಹುಕ್ಕೇರಿ, ಅಲ್ಲಪ್ಪಾ ಹುಕ್ಕೇರಿ, ಮಲ್ಲಪ್ಪ ಹುಕ್ಕೇರಿ, ಶ್ರೀಕಾಂತ ವಿ ಮಹಾಜನ, ಸುರೇಶ ಪಾಟೀಲ ಬಸವರಾಜ ಬೆಳ್ಳಣ್ಣವರ, ಆನಂದ ಬನನ್ನವರ, ಶಂಕರಗೌಡ ಪಾಟೀಲ, (ಬೆಳವಿ) ಸುಭಾಷ ಗಾಯಕವಾಡ, ಕಲ್ಲಪ್ರಾ ಕೊಂಕಣಿ, ಕೆಂಚಪ್ಪ ನಾಯಿಕ, ಪ್ರಭು ಅಂತರಗಂಗಿ, ಎಂ ಜಿ ಬಡೋದೆ, ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಇತ್ತಿಚೇಗೆ ಸ್ವ ಉದ್ಯೋಗ ಪ್ರೇರಣಾ ಶಿಭಿರ ಉದ್ಘಾಟನೆ



ಗೋಕಾಕ: ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಪೃಥ್ವಿ ಜ್ಞಾನ ವಿಕಾಸ ಕೇಂದ್ರದಲ್ಲಿ ಇತ್ತಿಚೇಗೆ ಸ್ವ ಉದ್ಯೋಗ ಪ್ರೇರಣಾ ಶಿಭಿರವನ್ನು ನಗರದಲ್ಲಿ ಆಯೋಜಿಸಲಾಗಿತ್ತು.

ಈ ಶಿಭಿರದಲ್ಲಿ ಧಾರವಾಡದ ಕೌಶಲ್ಯಾಭಿವೃದ್ಧಿ ಸಂಸ್ಥೆಯ ಪ್ರೀಯಾ ಖೋದಾನಪುರ ಅವರು ಸ್ವ ಉದ್ಯೋಗಕ್ಕೆ ಪುರಕವಾಗಿ ಕಸದಿಂದ ರಸ ತಯಾರಿಕೆ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ವಲಯ ಮೇಲ್ವಿಚಾರಕ ಮಹಾಂತೇಶ, ಸಮನ್ವಯ ಅಧಿಕಾರಿ ಸವಿತಾ, ಶೋಭಾ, ರಶ್ಮಿ, ಅಮೃತಾ ಉಪಸ್ಥಿತರಿದ್ದರು.

****

## ಮನಗೂಳಿಯಲ್ಲಿ ರಾಯರ ಆರಾಧನೆ



ಬಸವನಬಾಗೇವಾಡಿ, ತಾಲೂಕಿನ ಮನಗೂಳಿ ಪಟ್ಟಣದ ಶ್ರೀರಾಘವೇಂದ್ರ ಭಕ್ತ ಮಂಡಳಿಯ ವತಿಯಿಂದ ಮಿಲಿಂದ ಪಾಟೀಲ ಅವರ ಮನೆಯಲ್ಲಿ ರಾಯರ 354 ನೇ ಆರಾಧನೆಯನ್ನುಮೂರು ದಿನಗಳ ಕಾಲ ವಿಜೃಂಭಣೆಯಿಂದ ಆಚರಿಸಲಾಯಿತು. ಪ್ರತಿದಿನವೂ ರಾಯರ ಮೃತ್ತಿಕಾ ವೃಂದಾವನಕ್ಕೆ ಪಂಚಾಮೃತ ಅಭಿಷೇಕ, ತುಳಸಿ ಅರ್ಚನೆ, ಅಷ್ಟೋತ್ತರ , ತೀರ್ಥಪ್ರಸಾದ ಮುಂತಾದ ಕಾರ್ಯಕ್ರಮಗಳು ವೇ.ಮೂ. ಪ್ರಭಾಕರ ಆಶ್ರೀತ ಅವರ ನೇತೃತ್ವದಲ್ಲಿ ವೈಭವದಿಂದ ಜರುಗಿದವು.

ಉತ್ತರಾರಾಧನೆ ದಿವಸ ಶಿಕ್ಷಕ ಜಿ.ವ್ಹಿ.ಕುಲಕರ್ಣಿ ಅವರು ಮಾತನಾಡಿ, ರಾಯರ ಮಹಿಮೆ ಹಾಗೂ ಯುಗ–ಯುಗಗಳಿಂದಲೂ ಮಂತ್ರಾಲಯ ಪರಮ ಪಾವನ ಕ್ಷೇತ್ರವಾಗಿರುವ ಬಗ್ಗೆ ತಿಳಿಸಿದರು. ಪ್ರತಿದಿನ ಸಾಯಂಕಾಲ ಭಕ್ತ ಮಂಡಳಿಯವರಿಂದ ಭಜನಾ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಹಿರಿಯರಾದ ಗುರುರಾಜ ಕುಲಕರ್ಣಿ, ರಾಘವೇಂದ್ರ ಜೋಶಿ ಬಬಲೇಶ್ವರ, ವೆಂಕಟೇಶ ಝುಳಕಿ, ಆನಂದ ಕೋಲಟಕರ ಶ್ರೀಧರ ಕುಲಕರ್ಣಿ, ಆದಿತ್ಯ ಪಾಟೀಲ, ವಾಣಿಶ್ರೀ ಆಶ್ರೀತ, ವಿಜಯಾ ಕುಲಕರ್ಣಿ, ಸಾವಿತ್ರಿ ಪಾಟೀಲ, ಮುಕ್ತಾ ಕುಲಕರ್ಣಿ, ಅಶ್ವಿನಿ ಕುಲಕರ್ಣಿ, ಶ್ರೀರಕ್ಷಾ ಕುಲಕರ್ಣಿ, ಸೃಷ್ಠಿ ಪಾಟೀಲ ಮುಂತಾದವರು ಇದ್ದರು.

### ಆ. 16 ರಂದು ಬೈಲಹೊಂಗಲದಲ್ಲಿ ಬೃಹತ್ ಪ್ರತಿಭಟನೆ

ಬೈಲಹೊಂಗಲ–ಕರ್ನಾಟಕ ರಾಜ್ಯ ರೈತ ಸಂಘಗಳ ಮಹಾ ಸಂಘ (ಒಕ್ಕೂಟ) ಇದರ ಅಡಿಯಲ್ಲಿ ಬರುವ ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಆ. 16 ರಂದು ಶನಿವಾರ ಮುಂಜಾನೆ 10 ಘಂಟೆಗೆ ಬೈಲಹೊಂಗಲದಲ್ಲಿ ಬೃಹತ ಪ್ರತಿಭಟನಾ ರ್‍ಯಾಲಿ ಜರುಗಲಿದೆ.

ರಾಣಿ ಚೆನ್ನಮ್ಮ ವೃತ್ತದಿಂದ ಮೆರವಣಿಗೆ ಹೊರಟು ಬಸ್ ನಿಲ್ದಾಣದ ಮೂಲಕ ಉಪವಿಭಾಗಾಧಿಕಾರಿಗಳ ಕಛೇರಿಗೆ ಬಂದು ಸೇರಲಿದೆ. ಉತ್ತರ ಕರ್ನಾಟಕದ ರೈತರು ಬೆಳೆದ ಬೆಳೆಗಳಿಗೆ ವಿವಿಧ ಕಂಪನಿಯವರು ಮಾರಾಟ ಮಾಡಿದ ಕಳಪೆ ಗುಣಮಟ್ಟದ ಕೀಟನಾಶಕಗಳಿಂದ ಸೊಯಾಬಿನ್, ಹೆಸರು ಬೆಳೆ, ಹತ್ತಿ ಬೆಳೆ ನಾಶವಾದ ಹಿನ್ನಲೆಯಲ್ಲಿ ರೈತರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಈ ಬೃಹತ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ರೈತ ಸಂಘಗಳ ಮಹಾಸಂಘಗಳ ಒಕ್ಕೂಟದ ರಾಜ್ಯ ಸಂಚಾಲಕ ಸುರೇಶ ವಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


### ಸಂಗೊಳ್ಳಿ ರಾಯಣ್ಣನ ಜನ್ಮ ದಿನ ಆಚರಣೆ ಕಾರ್ಯಕ್ರಮ

ಬೈಲಹೊಂಗಲ: ಪಟ್ಟಣದ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಆಗಸ್ಟ್ 15 ರಂದು ಅಖಿಲ ಕರ್ನಾಟಕ ಕ್ರಾಂತಿವೀರ ಶೂರ ಸಂಗೊಳ್ಳಿ ರಾಯಣ್ಣ ಸ್ಮರಣೋತ್ಸವ ಸಮಿತಿ ವತಿಯಿಂದ ಕ್ರಾಂತಿವೀರ ಶೂರ ಸಂಗೊಳ್ಳಿ ರಾಯಣ್ಣನ ಜನ್ಮ ದಿನ ಆಚರಣೆ ಕಾರ್ಯಕ್ರಮ ನಡೆಯಲಿದೆ.

ಅಂದು ಬೆಳಗ್ಗೆ 9 ಕ್ಕೆ ಸಂಗೊಳ್ಳಿ ರಾಯಣ್ಣನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಸಿಹಿ ವಿತರಿಸಲಾಗುವದು. ಇದೇ ವೇಳೆ ಗಣಾಚಾರಿ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳಿಂದ, ಎಬಿವಿಪಿ ವಿದ್ಯಾರ್ಥಿ ಸಂಘಟನೆಯಿಂದ 100 ಮೀಟರ್ ಉದ್ದದ ಬೃಹತ್ ತಿರಂಗ ಯಾತ್ರೆ ನಡೆಯಲಿದೆ.

ಸಂಗೊಳ್ಳಿ ರಾಯಣ್ಣನ ಸಮಸ್ತ ಅಭಿಮಾನಿಗಳು, ಕನ್ನಡಪರ ಸಂಘಟನೆಗಳು, ವಿವಿಧ ಸಂಘ, ಸಂಸ್ಥೆಗಳ ಪ್ರಮುಖರು, ಪದಾಧಿಕಾರಿಗಳು, ಸಾರ್ವಜನಿಕರು ಭಾಗವಹಿಸುವಂತೆ ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸರ್ವ ಶರಣರ 94ನೇ ವರ್ಷದ ಸಪ್ತಾಹ



ಗೋಕಾಕ: ನಗರದ ಸಮಗಾರ ಗಲ್ಲಿಯಲ್ಲಿರುವ ಸಮಾಜ ಸುಧಾರಕ ಶ್ರೀ ಗುರುಬಸವಣ್ಣನವರ ಶ್ರೀ ಶಿವಶರಣ ಸಮಗಾರ ಹರಳಯ್ಯನವರ ಮತ್ತು ಸರ್ವ ಶರಣರ 94ನೇ ವರ್ಷದ ಸಪ್ತಾಹವು ದಿ. 17 ಮತ್ತು 18 ಎರಡು ದಿನಗಳ ಕಾಲ ಜರುಗಲಿದೆ. ದಿ.17ರಂದು ಮುಂಜಾನೆ ಬುದ್ಧ,ಬಸವ,–ಅಂಬೇಡಕರ ಹಾಗೂ ಶಿವಶರಣ ಹರಳಯ್ಯನವರ ಮೂರ್ತಿಗಳಿಗೆ ಅಭಿಷೇಕ,ಬಸವಣ್ಣನವರ ಹಾಗೂ ಸರ್ವಶರಣರ ಭಾವಚಿತ್ರಗಳಿಗೆ ಪೂಜೆ ಜರುಗಲಿದೆ. ಸಂಜೆ 6 ಗಂಟೆಗೆ ಸಾಂಸ್ಕೃತಿ–ಕ ಕಾರ್ಯಕ್ರಮ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ. ರಾತ್ರಿ ವಿವಿಧ ಗ್ರಾಮಗಳ ಭಜನಾ ತಂಡದವರಿಂದ ಭಜನಾ ಕಾರ್ಯಕ್ರಮ ಜರುಗಲಿದೆ.

ದಿ.18ರಂದು ಮುಂಜಾನೆ ಬುದ್ಧ, ಬಸವ, ಅಂಬೇಡಕರ ಹಾಗೂ ಶಿವಶರಣ ಹರಳಯ್ಯನವರ, ಬಸವಣ್ಣನವರ ಹಾಗೂ ಸರ್ವಶರಣರ ಭಾವಚಿತ್ರಗಳ ಫಲ್ಲಕ್ಕಿ ಉತ್ಸವ, ಸುಮಂಗಲಿಯರಿಂದ ಅಂಬಲಿ ಕುಂಭ ಮತ್ತು ಆರತಿಯೊಂದಿಗೆ ಭಜನಾ ತಂಡದವರಿಂದ ಭವ್ಯ ಮೆರವಣಿಗೆಯು ನಗರದ ಪ್ರಮುಖ ಬೀದಿಗಳಲ್ಲಿ ಸಂಚ–ರಿಸಲಿದೆ ಎಂದು ಸಮಾಜದ ಕಮೀಟಿಯ ಸದಸ್ಯರಾದ ವೀರಣ್ಣಾ ತಾಳಿಕೋಟಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ರಾಜೀವ್ ಗಾಂಧಿ ಚೈತನ್ಯ ಯೋಜನೆಯಡಿ ಅನುದಾನ ಬಿಡುಗಡೆಗಾಗಿ ಸರ್ಕಾರಕ್ಕೆ ತಪ್ಪು ಮಾಹಿತಿ

### ಪ್ರಸ್ತಾವನೆ ಸಲ್ಲಿಸಿದ್ದ ಜಿ.ಪಂ. ಯೋಜನಾ ನಿರ್ದೇಶಕಿ ರೇಖಾ ಡೊಳ್ಳಿನವರ ಅವರನ್ನು ಅಮಾನತ್ತುಗೊಳಿಸಿ, ಸರ್ಕಾರದಿಂದ ಆದೇಶ

ಧಾರವಾಡ : ಗ್ರಾಮೀಣ ಯುವ ಜನ–ರಿಗೆ ಉತ್ತಮ ಕೌಶಲ್ಯ ತರಬೇತಿ ನೀಡಿ, ಸ್ವ–ಉದ್ಯೋಗ ಅವಕಾಶ ಮತ್ತು ವೃತ್ತಿಪರ ಕೌಶಲ್ಯ ತರಬೇತಿ ನೀಡಿ, ಉದ್ಯೋಗ ಒದಗಿಸುವ ಗುರಿ ಹೊಂದಿರುವ ರಾಜೀವ್ ಗಾಂಧಿ ಚೈತನ್ಯ ಯೋಜನೆಯಡಿ 2016–17 ಮತ್ತು 2017–18 ನೇ ಸಾಲಿನಲ್ಲಿ ಕೈಗೊಂಡ ಕಾರ್ಯಕ್ರಮಗಳಿಗೆ ಅನುದಾನ ಬಿಡುಗಡೆ ಮಾಡಲು ರಾಷ್ಟ್ರೀಯ ಜೀವನೋ ಪಾಯ ಅಭಿಯಾನ ನಿರ್ದೇಶಕರಿಗೆ ತಪ್ಪು ಮಾಹಿತಿಯೊಂದಿಗೆ, ನಿಯಮಾನುಸಾರ ದಾಖಲೆಗಳನ್ನು ಲಗತ್ತಿಸಿದೇ ಅಪೂರ್ಣವಾಗಿರುವ ಪ್ರಸ್ತಾವನೆ ಸಲ್ಲಿಸಿ, ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟುಮಾಡಲು ಪ್ರಯತ್ನಿಸಿದ್ದ ಕಾರಣಕ್ಕಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ಯ ಇಲಾಖೆಯು ಧಾರವಾಡ ಜಿಲ್ಲಾ ಪಂಚಾಯತ ಯೋಜನಾ ಅಧಿಕಾರಿ ರೇಖಾ ಡೊಳ್ಳಿನವರ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಿ, ಆದೇಶ ಹೊರಡಿಸಿದೆ.

ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕಿ ರೇಖಾ ಡೊಳ್ಳಿನವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಅವರನ್ನು ಕರ್ನಾಟಕ ನಾಗರಿಕ ಸೇವಾ ನಿಯಮಗಳಡಿ ಸರ್ಕಾರಿ ಸೇವೆಯಿಂದ ಅಮಾನತ್ತುಗೊಳಿಸಿ, ಅವರ ಲೀನ್‌ನ್ನು ಯೋಜನಾ ನಿರ್ದೇಶಕರು ಜಿಲ್ಲಾ ಪಂಚಾಯತಿ ವಿಜಯಪುರ ಇಲ್ಲಿಗೆ ವರ್ಗಾಯಿಸಿ, ಆದೇಶಿಸಲಾಗಿದೆ.

ಜಿಲ್ಲಾ ಪಂಚಾಯತ ಅಡಿ ಬರುವ ಎಲ್ಲ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ತಮ್ಮ ಇಲಾಖೆಯ ನಿಯಮಾನುಸಾರ ಮತ್ತು ಯೋಜನೆಗಳ ನಿಯಮಾವಳಿಗಳಿಗೆ ಅನುಗುಣವಾಗಿ ಕರ್ತವ್ಯ ನಿರ್ವಹಿಸಲು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಹಾಗೂ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗದಂತೆ ಕರ್ತವ್ಯ ನಿರ್ವಹಿಸಬೇಕು. ಈ ಕುರಿತು ಪ್ರಗತಿ ಪರಿಶೀಲನಾ ಸಭೆ ಹಾಗೂ ಇಲಾಖಾ ಕಚೇ–ರಿಗಳ ಭೇಟಿ ಸಂದರ್ಭದಲ್ಲಿ ಮೇಲಾಧಿಕಾ–ರಿಗಳು ಪರಿಶೀಲಿಸಿ, ವರದಿ ನೀಡುತ್ತಾರೆ. ಲೋಪಗಳು ಕಂಡು ಬಂದಲ್ಲಿ ಸೂಕ್ತ ಕ್ರಮಗಳನ್ನು ಇಲಾಖಾ ನಿಯಮಾನುಸಾರ ಕೈಗೊಳ್ಳಲಾಗುವುದೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ತಿಳಿಸಿದ್ದಾರೆ.

## ತಿರಂಗಾ ಧ್ವಜ ಹಾರಿಸುವದರ ಮೂಲಕ ಬೈಕ್ ರ್‍ಯಾಲಿ ಉದ್ಘಾಟನೆ



ಗೋಕಾಕ: ಬಿಜೆಪಿ ಗೋಕಾಕ ಗ್ರಾಮೀಣ ಹಾಗೂ ನಗರ ಮಂಡಲ ವತಿಯಿಂದ ಹರ್ ಘರ್ ತಿರಂಗಾ ಯಾತ್ರೆಯ ನಿಮಿತ್ತ ಕುಂದರನಾಡಿನ ವಿವಿಧ ಹಳ್ಳಿಗಳಲ್ಲಿ ಹಮ್ಮಿಕೊಂಡಿದ್ದ ಬೈಕ್ ರ್‍ಯಾಲಿಗೆ ಅಂಕಲಗಿ ಶ್ರೀ ಅಡವಿಸಿದ್ದೇಶ್ವರ ಮಠದಲ್ಲಿ ಮಠದ ಅಮರಸಿದ್ಧೇಶ್ವರ ಶ್ರೀಗಳು ಬುಧವಾರ ತಿರಂಗಾ ಧ್ವಜ ಹಾರಿಸುವದರ ಮೂಲಕ ಬೈಕ್ ರ್‍ಯಾಲಿ ಉದ್ಘಾಟಿಸಿದರು.

ಸಹಸ್ರಾರು ಸಂಖ್ಯೆಯಲ್ಲಿ ಪಾಲ್ಗೊಂಡಿದ್ದ ವಿವಿಧ ಗ್ರಾಮಗಳ. ಬಿಜೆಪಿ ಅಭಿಮಾನಿಗಳ ಬೈಕ್ ರ್‍ಯಾಲಿಯು ಅಂಕಲಗಿ, ಅಕ್ಕತಂಗೇರಹಾಳ, ಮದವಾಲ್, ಈರನಟ್ಟಿ ಮತ್ತು ತೆಳನಟ್ಟಿಗೆ ತೆರಳಿ ಮುಕ್ತಾಯಗೊಂಡಿತು.

ಶಾಸಕರ ಆಪ್ತ ಸಹಾಯಕ ಭೀಮಗೌಡ ಪೊಲೀಸಗೌಡರ, ಬಿಜೆಪಿ ಗ್ರಾಮೀಣ ಅಧ್ಯಕ್ಷ ರಾಜೇಂದ್ರ ಗೌಡಪ್ಪಗೋಳ ನಗರ ಅಧ್ಯಕ್ಷ ಭೀಮಶಿ ಭರಮನ್ನವರ, ಬಿಜೆಪಿ ಪದಾಧಿಕಾರಿಗಳಾದ ಈರಣ್ಣಾ ಅಂಗಡಿ, ಆನಂದ ಅತ್ತುಗೋಳ, ಮಹಾಂತೇಶ ಚಿನ್ನಪ್ಪಗೌಡರ, ಗುರು ಹಿರೇಮಠ, ವಿರೇಂದ್ರ ಏಕ್ಕೇರಿಮಠ, ಲಕ್ಕಪ್ಪಾ ಪೂಜೇರಿ, ಉದಯ ತಳವಾರ, ಮಹಾಂತೇಶ ಬಿಚಗತ್ತಿ, ರಮೇಶ ಕುಡಬಂಗಿ, ಶಿವಾ ಶಿಗ್ಗಾವಿ, ನೀಲಕಂಟ ಎಳ್ಳಿ, ಗಂಗಪ್ಪ ಅಂಗಡಿ, ಮುನ್ನಾ ದೇಸಾಯಿ, ನಟರಾಜ್ ಸತ್ತೆನ್ನವರ, ಬೋರಪ್ಪಾ ತಳವಾರ ಸೇರಿದಂತೆ ಸಾವಿರಾರು ಬಿಜೆಪಿ ಕಾರ್ಯಕರ್ತರು ಉಪಸ್ಥಿತರಿದ್ದರು.

## ರೈತರ ಬೆಳೆಗಳು ಹಾನಿ:ಸೂಕ್ತ ಪರಿಹಾರಕ್ಕಾಗಿ ಸರಕಾರಕ್ಕೆ ಮನವಿ



ಬೈಲಹೊಂಗಲ– ಕಳಪೆ ಬೀಜ, ಕಳಪೆ ಕೀಟಣಾಶಕದಿಂದ ಪ್ರಸಕ್ತ ಹಂಗಾಮಿನ ಸೋಯಾಬಿನ್, ಹೆಸರು, ಹತ್ತಿ ಮತ್ತು ಉದ್ದು ಸೇರಿದಂತೆ ವಿವಿಧ ತರಹದ ಬೆಳೆ ಹಾನಿಗೆ ಸರಕಾರ ಸೂಕ್ತ ಪರಿಹಾರ ಒದಗಿಸಿ ಕೊಡಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ರಾಜ್ಯಾಧ್ಯಕ್ಷ ಬಿ.ಎ.ಲಕ್ಷ್ಮೀನಾರಾಯಣಗೌಡಾ ಅವರ ಆದೇಶದ ಪ್ರಕಾರ ರಾಜ್ಯ ಉಪಾಧ್ಯಕ್ಷ ಬಸವರಾಜ ಬೆಳ್ಳಿಕಟ್ಟಿ ಅವರ ನೇತೃತ್ವದಲ್ಲಿ ಗುರುವಾರ ಉಪವಿಭಾಗಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಬೆಳಗಾವಿ ಜಿಲ್ಲೆಯ ಬೈಲಹೊಂಗಲ, ಸವದತ್ತಿ, ಚನ್ನಮ್ಮನ ಕಿತ್ತೂರು, ಗೋಕಾಕ ಹಾಗೂ ರಾಮದುರ್ಗ ತಾಲೂಕಿನಾದ್ಯಂತ ಸೊಯಾಬಿನ್, ಹೆಸರು, ಹತ್ತಿ, ಹಾಗೂ ಉದ್ದು ಬೆಳೆಗಳು ಕೀಡೆ, ಹುಳೆಬಾಧೆಯಿಂದ ಸಂಪೂರ್ಣ ಹಾಳಾಗಿರುತ್ತವೆ ಎಂದು ಆರೋಪಿಸಿದರು.

ಕಳಪೆ ಬೀಜ, ಕಳಪೆ ಕೀಟನಾಶಕ ಕಾರಣವಾಗಿದ್ದು ಸುಮಾರು 4 ರಿಂದ 5 ಬಾರಿ ಔಷದ ಸಿಂಪರಣೆ ಮಾಡಿದರೂ ಪ್ರಯೋಜನವಾಗಿಲ್ಲ. ಒಂದು ಎಕರೆ ಬೆಳೆಯಲು ಸುಮಾರು ನಾಲ್ವತ್ತು ಸಾವಿರದಿಂದ ಐವತ್ತು ಸಾವಿರದವರೆಗೆ ಬೀಜ, ಔಷದಕ್ಕೆ ಖರ್ಚು ಮಾಡಲಾಗಿದ್ದು ಯಾವದೇ ಬದಲಾವಣೆ ಆಗಿಲ್ಲವೆಂದು ಕಿಡಿ ಕಾರಿದರು. ಈಗಾಗಿ ಸರಕಾರ ರೈತರ ಹಿತ ದೃಷ್ಟಿಯಿಂದ ಪರಿಹಾರ ನೀಡಲು ಪ್ರಯತ್ನಿಸಬೇಕೆಂದು ಉಪ ವಿಭಾಗಾಧಿಕಾ–ರಿಗಳ ಮೂಲಕ ಸರಕಾರಕ್ಕೆ ಮನವಿ ಅರ್ಪಿಸಿ, ವಿನಂತಿಸಿದರು.

ಸಂಘಟಣೆಯ ಉತ್ತರ ಕರ್ನಾಟಕದ ರಾಜ್ಯಾಧ್ಯಕ್ಷ ಶಿವಾನಂದ ಪಡಸಲಗಿ, ಜಿಲ್ಲಾಧ್ಯಕ್ಷ ಈರಪ್ಪ ಹುಬ್ಬಳ್ಳಿ, ಜಿಲ್ಲಾ ಉಪಾಧ್ಯಕ್ಷ ಸಿದ್ದರಾಯ ಕಳ್ಳಿಮನಿ, ಸವದತ್ತಿ ತಾಲೂಕಾ ಗೌರವಾಧ್ಯಕ್ಷ ಕುಮಾರಸ್ವಾಮಿ ಹಿರೇಮಠ, ತಾಲೂಕಾಧ್ಯಕ್ಷ ರಮೇಶ ಸಾಳುಂಕೆ, ಯರಗಟ್ಟಿ ತಾಲೂಕಾಧ್ಯಕ್ಷ ರಾಯಪ್ಪ ಮಳಗಲಿ, ಮಹಾದೇವ ಕಲಭಾಂವಿ, ರೈತ ಧುರೀಣ ಶ್ರೀಶೈಲ ಕೋಟಗಿ, ಗಂಗಪ್ಪ ನಾಶಿಪುಡಿ, ಸುರೇಶ ತೋಟಗಿ, ಅದೃಶ್ಯ ಬೆಳ್ಳಿಕಟ್ಟಿ ಸೇ–ರಿದಂತೆ ನೂರಾರು ರೈತರು ಮನವಿಯಲ್ಲಿ ಪಾಲ್ಗೊಂಡಿದ್ದರು.

ಪೋಟೋ ಶೀರ್ಷಿಕೆ– ರೈತರ ವಿವಿಧ ತರಹದ ಬೆಳೆ ನಾಶ ಆಗಿರುವದನ್ನು ಆರೋಪಿಸಿ ಸೂಕ್ತ ಪರಿಹಾರಕ್ಕೆ ಒತ್ತಾಯಿಸಿ ಉಪವಿಭಾಗಾಧಿಕಾರಿಗಳ ಕಚೇರಿಯ ಶಿರಸ್ತೆದಾರೆ ಎಸ್.ಎಂ.ಗೌಡರ ಅವರು ಮನವಿ ಸ್ವೀಕರಿಸಿದರು.

# ಸೂಡಿ ಗ್ರಾಮದಲ್ಲಿ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಸ್ವಚ್ಛತೆಯೊಂದಿಗೆ ಸ್ವಾತಂತ್ರ್ಯ ಅಭಿಯಾನ



ಗಜೇಂದ್ರಗಡ: 79 ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ತಾಲೂಕಿನಾದ್ಯಂತ ಸ್ವಚ್ಛತೆಯೊಂದಿಗೆ ಸ್ವಾತಂತ್ರ್ಯ ದಿನಾಚರಣೆ ಅಭಿಯಾನ ನಡೆಸಲಾಗುತ್ತಿದೆ. ತಾಲೂಕಿನ ಸೂಡಿ ಗ್ರಾಪಂ ವ್ಯಾಪ್ತಿಯಲ್ಲಿ ಇಂದು ಖುದ್ದಾಗಿ ತಾಲೂಕು ಪಂಚಾಯತ ಇಒ ಚಂದ್ರಶೇಖರ ಕಂದಕೂರು ಮತ್ತು ಎಡಿ ಬಸವರಾಜ ಬಡಿಗೇರ ಅವರು ಕಸದ ವಾಹನ ಡ್ರೈವಿಂಗ್ ಮಾಡಿ ಸೂಡಿ ಗ್ರಾಮಸ್ಥರಲ್ಲಿ ಸ್ವಚ್ಛತೆ ಅರಿವು ಮೂಡಿಸಿದಷ್ಟೇ ಅಲ್ಲದೆ ಮನೆಗಳಿಂದ ಸ್ವತಃ ಒಣ ಕಸ ಮತ್ತು ಹಸಿ ಕಸ ಪ್ರತ್ಯೇಕಿಸಿ ಕಸದವಾಹನಕ್ಕೆ ಕಸ ಹಾಕುವುದರ ಮೂಲಕ ಸೂಡಿ ಗ್ರಾಮದಲ್ಲಿ ಸಾರ್ವಜನಿಕರಿಗೆ ಜಂಟಿಯಾಗಿ ಸ್ವಾತಂತ್ರ್ಯ ದಿನಾಚರಣೆಯ ಮಹತ್ವ ಸಾರುವ ಮೂಲಕ ಸ್ವಚ್ಛತೆಯ ಬಗ್ಗೆ ತಿಳುವಳಿಕೆ ಮೂಡಿಸಿದರು.

ಸೂಡಿ ಗ್ರಾಮದ ವಿದ್ಯಾನಗರ, ಶೆಟ್ಟರ ಕಾಲೋನಿ, ಬಜಾರ್ ಮುಖ್ಯ ರಸ್ತೆ, ಬಡಿಕಟ್ಟೆ ಓಣಿ ಸೇರಿದಂತೆ ಪ್ರಮುಖ ಬೀದಿಗಳಲ್ಲಿ ಸಂಚರಿಸುವುದರ ಮೂಲಕ ಸ್ವಾತಂತ್ರ್ಯ ದಿನಾಚರಣೆ ಸಂದೇಶ ಸಾರುವುದರೊಂದಿಗೆ ಸ್ವಚ್ಛತೆಗಾಗಿ ಗ್ರಾಪಂ ಸಿಬ್ಬಂದಿ ಜೊತೆ ಕೈಜೋಡಿಸುವಂತೆ ಸಾರ್ವಜನಿಕರಿಗೆ ಮನವಿ ಮಾಡಿಕೊಂಡರು. ಪ್ರತಿ ಮನೆಗಳಿಗೆ ತೆರಳಿದ ಇಒ ಮತ್ತು ಎಡಿ ಅವರು, 79 ನೇ ಸ್ವಾತಂತ್ರ್ಯ ದಿನಾಚರಣೆಯ ಸಂಭ್ರಮದಲ್ಲಿರುವ ನಾವೆಲ್ಲರೂ ನಮ್ಮ ಗ್ರಾಮವನ್ನು ಕಸಮುಕ್ತ ಮಾಡೋಣ ಎಂದರು. ಮನೆಯ ಗ್ರಹಿಣಿಯರನ್ನು ಭೇಟಿಯಾಗಿ ಹಸಿ ಕಸ ಮತ್ತು ಒಣ ಕಸ ಪ್ರತ್ಯೇಕಗೊಳಿಸಿ ಕಸದ ವಾಹನದಲ್ಲೇ ಕಸ ಹಾಕಿ ಅಂತ ಮನವಿ ಮಾಡಿಕೊಂಡರು. ಅಲ್ಲದೇ ಗ್ರಾಮದ ಕಿರಾಣಿ ಅಂಗಡಿ ಮಾಲೀಕರನ್ನು ಭೇಟಿಯಾಗಿ ಗುಟ್ಕಾ, ದಿನಸಿ ಸಾಮಾಗ್ರಿಗಳ ಪ್ಲಾಸ್ಟಿಕ್ ಕವರ್ ಗಳನ್ನು ಎಲ್ಲೆಂದರಲ್ಲಿ ಬೀಸಾಡದೆ ಕಸದಬುಟ್ಟಿಯಲ್ಲಿ ಸಂಗ್ರಹಿಸಿ ಕಸದ ವಾಹನ ಬಂದಾಗ ಸ್ವಚ್ಛತೆಯಿಂದ ಹಾಕಿ ಅಂತ ತಿಳುವಳಿಕೆ ಮೂಡಿಸಿದರು. ಅಗಸ್ಟ್-08 ರಿಂದ 15 ರವರೆಗೆ ನಡೆಯುತ್ತಿರುವ ಈ ಅಭಿಯಾನದಡಿ ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಬಗ್ಗೆ ತಿಳುವಳಿಕೆ ಮೂಡಿಸುವ ಕಾರ್ಯ ನಡೆಯುತ್ತಿದೆ. ಅದರಂತೆ ಸೂಡಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದ ಇಒ ಕಂದಕೂರ ಅವರು ಆರೋಗ್ಯ ಕೇಂದ್ರದ ವಾತಾವರಣವನ್ನು ಪರಿಶೀಲಿಸಿದರು. ಆರೋಗ್ಯ ಇಲಾಖೆಯ ಸಿಬ್ಬಂದಿಗಳಿಗೆ ಅಸ್ಪತ್ರೆಯನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಸೂಚಿಸಿದರು. ಆಸ್ಪತ್ರೆಯ ಬಳಿಯ ಶಿಥೀಲಾವಸ್ಥೆಯಲ್ಲಿರುವ ನೀರಿನ ಟ್ಯಾಂಕ್ ನ್ನು ಪರಿಶೀಲಿಸಿದ ಇಒ ಅವರು, ಸಂಬಂಧಿಸಿದ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಸಾರ್ವಜನಿಕರ ಹಿತದೃಷ್ಟಿಯಿಂದ ನೀರಿನ ಟ್ಯಾಂಕ್ ಗುಣಮಟ್ಟ ಪರಿಶೀಲಿಸಿ ವರದಿ ನೀಡುವಂತೆ ತಾಕೀತು ಮಾಡಿದರು.

ಈ ಸಂದರ್ಭದಲ್ಲಿ ಸೂಡಿ ಗ್ರಾಮ ಪಂಚಾಯತ ಪಿಡಿಒ ಅಶೋಕ್ ಕಂಬಿ, ಗ್ರಾಪಂ ಅಧ್ಯಕ್ಷೆ ಶ್ರೀಮತಿ ಆಶಾಬೇಗಂ ಮೂಕಾಶಿ, ಸದಸ್ಯರಾದ ರೇಣುಕಾ ಹರಮನಿ, ಶಾಂತವ್ವ ಕದುರಿಕೋಟೆ, ಕೆ.ಶರಣಬಸವ, ರುದ್ರಪ್ಪ ಮಾರನಬಸರಿ, ಚೆನ್ನಪ್ಪ ನೂಲ್ವಿ, ಎನ್.ಆರ್.ಎಲ್.ಎಂ ಸಿಬ್ಬಂದಿ ವರ್ಗ ಹಾಗೂ ಸೂಡಿ ಗ್ರಾಪಂ ಸಿಬ್ಬಂದಿ ವರ್ಗ ಹಾಜರಿದ್ದರು.

# ಗುರು ಎಂದರೆ ನಿರಾಕಾರ. ಭಗವಂತನ ಕಡೆಗೆ ಹೋಗುವ ದಾರಿಯನ್ನು ತೋರುವಾತ ಗುರು



ಜಮಖಂಡಿ: ಗುರು ಎಂದರೆ ಸರ್ವವ್ಯಾಪಕ. ಗುರು ಎಂದರೆ ನಿರಾಕಾರ. ಭಗವಂತನ ಕಡೆಗೆ ಹೋಗುವ ದಾರಿಯನ್ನು ತೋರುವಾತ ಗುರು. ಭಗವಂತನ ಸಾಕ್ಷಾತ್ಕಾರವಾಗಲು ಗುರು ಬೇಕು. ಗುರುಗಳಲ್ಲಿ ಭಗವಂತನನ್ನು ಕಾಣಬೇಕು ಎಂದು ಬಿ ಆರ್‌ಪಿ ದಾನಮ್ಮ ಪಂಚಕಟ್ಟಿಮಠ ಹೇಳಿದರು.

ಶ್ರಾವಣ ಮಾಸದ ನಿಮಿತ್ತ ಓಲೆಮಠದ ಆಶ್ರಯದಲ್ಲಿ ಜರುಗುತ್ತಿರುವ ಓಣಿಗೊಂದು ದಿನ ವಚನ ಶ್ರಾವಣ ಅಂಗವಾಗಿ ಕಾಡಸಿದ್ಧೇಶ್ವರ ಮಂಗಲ ಕಾರ್ಯಾಲಯದಲ್ಲಿ ಬುಧವಾರ ಸಂಜೆ ನಡೆದ ಇಪ್ಪತ್ತನೆ ದಿನದ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಅವರು ಅಲ್ಲಮಪ್ರಭುವಿನ ವಚನ 'ಮಹಾಮಹಿಮ ಸಂಗನ ಬಸವಣ್ಣ ... ಜಗವೆಲ್ಲಕ್ಕೆಯೂ ಗುರು' ಎಂಬ ವಿಷಯ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಮಾಜಿ ಶಾಸಕ ಆನಂದ ನ್ಯಾಮಗೌಡ ಮುಖ್ಯ ಅತಿಥಿಯಾಗಿ ಮಾತನಾಡಿ, ಖಾಲಿ ಬಾಟಲ್‌ಗೆ ಯಾವುದೇ ಮೌಲ್ಯವಿರುವುದಿಲ್ಲ. ಆದರೆ, ನೀರು, ತುಪ್ಪ, ಜೇನುತುಪ್ಪದಿಂದ ತುಂಬಿದಾಗ ಬಾಟಲ್‌ಗೆ ಮೌಲ್ಯ ಬರುತ್ತದೆ. ಹಾಗೆಯೆ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡಾಗ ವ್ಯಕ್ತಿಯ ಮೌಲ್ಯವೂ ಹೆಚ್ಚಾಗುತ್ತದೆ ಎಂದರು.

ಓಲೆಮಠದ ಆನಂದ ದೇವರು ಸಾನ್ನಿಧ್ಯ ವಹಿಸಿ ಮಾತನಾಡಿ, ತಂತ್ರಜ್ಞರು ಕೊಡುವ 4ಜಿ, 5ಜಿ ತಂತ್ರಜ್ಞಾನಕ್ಕಿಂತ ಹೊಟ್ಟೆಗೆ ಗಂಜಿ ಕೊಡುವ ರೈತರು ಶ್ರೇಷ್ಠ. ಆದ್ದರಿಂದ ರೈತರಿಗೆ ಗೌರವ ಕೊಡಬೇಕು. ರೈತರ ಮಕ್ಕಳಿಗೆ ಹೆಣ್ಣು ಕೊಡಬೇಕು. ಮುಂಬರುವ ಹತ್ತು ವರ್ಷಗಳಲ್ಲಿ ರೈತರ ಬದುಕು ಬಹಳ ಎತ್ತರಕ್ಕೆ ಹೋಗಲಿದೆ ಎಂದು ಆಶೀರ್ವಚನ ನೀಡಿದರು.

ಹಿರಿಯರಾದ ಕೆ.ಕೆ. ತುಪ್ಪದ, ಸಿದ್ರಾಮ ಜಂಬಗಿ ಇದ್ದರು. ಶಾಂತಾ ನ್ಯಾಮಗೌಡ ಪ್ರಾರ್ಥನೆ ಗೀತೆ ಹಾಡಿದರು. ಮಲ್ಲೇಶ ಹೇಸಮನಿ ಸ್ವಾಗತಿಸಿದರು. ಸರಸ್ವತಿ ಸಬರದ(ಹೆಗಡಿ), ಗೋಪಾಲ ತುಳಜಾಪೂರ ಸಂಗೀತ ಸೇವೆ ಸಲ್ಲಿಸಿದರು. ಬಸವರಾಜ ಬಳಗಾರ ನಿರೂಪಿಸಿದರು.

# 'ಸ್ಟಡಿ ಅಬ್ರಾಡ್' ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ




ಕೊಪ್ಪಳ : ರಾಜ್ಯದ ವಿದ್ಯಾರ್ಥಿಗಳಿಗೆ ಜಾಗತಿಕ ಉನ್ನತ ಶಿಕ್ಷಣದ ಅವಕಾಶಗಳನ್ನು ಪರಿಚಯಿಸುವ ಉದ್ದೇಶದಿಂದ ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯಾಭಿವೃದ್ಧಿ ನಿಗಮ ನಿಯಮಿತ (ಕೆ.ವಿ.ಟಿ.ಎಸ್.ಡಿ.ಸಿ) ವತಿಯಿಂದ ಆಗಸ್ಟ್ 17 ರಂದು ಬೆಂಗಳೂರಿನ ದಿ ಲಲಿತ್ ಅಶೋಕ ಹೋಟೆಲ್‌ನಲ್ಲಿ ಏರ್ಪಡಿಸಲಾಗಿರುವ 'ಸ್ಟಡಿ ಅಬ್ರಾಡ್' ಕಾರ್ಯಕ್ರಮದ ಪೋಸ್ಟ್-ಗಳನ್ನು ಜಿಲ್ಲಾಧಿಕಾರಿ ಡಾ. ಸುರೇಶ್ ಬಿ. ಇಟ್ನಾಳ ಅವರು ಬುಧವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರ್, ಜಂಟಿ ಕೃಷಿ ನಿರ್ದೇಶಕ ಟಿ.ಎಸ್. ರುದ್ರೇಶಪ್ಪ, ಕೊಪ್ಪಳ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಕೆ.ಗವಿಶಂಕರ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕೃಷ್ಣ ಸಿ. ಉಕ್ಕುಂದ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅಜ್ಮೀರ್ ಅಲಿ, ಮುಖಂಡರಾದ ನಜೀರಸಾಬ್ ಮೂಲಿಮನಿ, ಮೆಹಬೂಬ್ ಪಾಷಾ ಮಾನ್ವಿ, ಎಂ.ಡಿ ಸಿರಾಜ್ ಸಿದ್ದಾಪುರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಕೌಶಲ್ಯಾಭಿವೃದ್ಧಿ ಇಲಾಖೆಯ ಇತರೆ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.ಸ

****

# ಅಪ್ರಾಪ್ತ ವಯಸ್ಸಿನ ಬಾಲಕಿ ಅಪಹರಿಸಿ ಅತ್ಯಾಚಾರ ಎಸಗಿದ ಅಪರಾಧಿಗೆ ಶಿಕ್ಷೆ

ಕೊಪ್ಪಳ : ಅಪ್ರಾಪ್ತ ವಯಸ್ಸಿನ ಪರಿಶಿಷ್ಟ ಪಂಗಡಕ್ಕೆ ಸೇರಿದ ಬಾಲಕಿಯನ್ನು ಅಪಹರಿಸಿ ಅತ್ಯಾಚಾರ ಎಸಗಿದ ರಾಜಾಸಾಬ ಹಳ್ಳಿಕೇರಿ ಇತನ ಮೇಲಿನ ಆರೋಪ ಸಾಭಿತಾಗಿದೆ ಎಂದು ಕೊಪ್ಪಳ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ತ್ವರಿತ ವಿಲೇವಾರಿ ನ್ಯಾಯಾಲಯ (ಪೋಕ್ಸೊ) ಇವರು ಅಪರಾಧಿಗೆ ಶಿಕ್ಷೆ ವಿಧಿಸಿರುತ್ತಾರೆ.

ಕೊಪ್ಪಳ ತಾಲೂಕಿನ ಅಳವಂಡಿ ಗ್ರಾಮದ ರಾಜಾಸಾಬ ಹಳ್ಳಿಕೇರಿ ಇತನು ಬಾಧಿತಳಿಗೆ ಪರಿಚಯ ಮಾಡಿಕೊಂಡು ಸಲುಗೆಯಿಂದ ಮಾತನಾಡಿಸುತ್ತ ಪ್ರೀತಿಸುವುದಾಗಿ ಹೇಳಿದ್ದು ನೀನು ಪ್ರೀತಿಸದಿದ್ದರೆ ಸಾಯುವುದಾಗಿ ಹೆದರಿಕೆ ಹಾಕಿರುತ್ತಾನೆ. ಹೀಗೆ ಸುಮಾರು ವರ್ಷಗಳಿಂದ ಕದ್ದು ಮುಚ್ಚಿ ಮಾತನಾಡುತ್ತ ವಿಷಯವನ್ನು ಯಾರಿಗೂ ಹೇಳದಂತೆ ತಾಕೀತು ಮಾಡಿದ್ದು, ಈ ವಿಷಯ ಬಾಧಿತಳ ಮನೆಯವರಿಗೆ ಗೊತ್ತಾಗಿ ಬುದ್ದಿವಾದ ಹೇಳಿದರೂ ಕೇಳದೇ ದಿ: 31-01-2022 ರ ರಾತ್ರಿ 7-30 ಗಂಟೆ ಸುಮಾರಿಗೆ ಅಳವಂಡಿಯ ಕಾಲೇಜ ಹತ್ತಿರ ಆರೋಪಿತನು ಬಾಧಿತಳನ್ನು ಕರೆಯಿಸಿಕೊಂಡು ಓಡಿ ಹೋಗಿ ಮದವೆಯಾಗೋಣ ಎಂದು ಪುಸಲಾಯಿಸಿ ಮೋಟಾರ ಸೈಕಲ್ ಮೇಲೆ ತಳಕಲ್ ಗ್ರಾಮಕ್ಕೆ ಕರೆದುಕೊಂಡು ಹೋಗಿ ಅಲ್ಲಿನ ಮುಸ್ಲಿಂ ದರ್ಗಾದ ಮುಂದೆ ಬಾಧಿತಳು ಅಪ್ರಾಪ್ತಳು ಎಂದು ತಿಳಿದಿದ್ದರೂ ತಾಳಿ ಕಟ್ಟಿ ಬಾಲ್ಯ ವಿವಾಹವಾಗಿರುತ್ತಾನೆ. ಅಲ್ಲಿಂದ ನಿಟ್ಟಾಲಿ ಗ್ರಾಮಕ್ಕೆ ಹೋಗಿ ರಾತ್ರಿಯಾಗಿದ್ದರಿಂದ ಅಲ್ಲಿನ ಬಸ್ ನಿಲ್ದಾಣದಲ್ಲಿ ಮಲಗಿಕೊಂಡು ಭಾನಾಪುರಕ್ಕೆ ಬಂದು ಮೋಟಾರ ಸೈಕಲ್ ಬಿಟ್ಟು ರೇಲ್ವೆ ಹಾಗೂ ಬಸ್ ಮೂಲಕ ಮಂಗಳೂರಿನ ಸುಳ್ಯಕ್ಕೆ ಹೋಗುವಾಗ ಮಾರ್ಗ ಮಧ್ಯೆ ಬಾಧಿತಳ ಮಾವನಿಗೆ ಪೋನ್ ಮಾಡಿ ಬಾಧಿತಳನ್ನು ನನಗೆ ಕೊಟ್ಟು ಮದುವೆ ಮಾಡಿಕೊಡಬೇಕು ಇಲ್ಲದಿದ್ದರೆ ಹೆಣ ನೋಡಬೇಕಾಗುತ್ತದೆ ಎಂದು ಹೆದರಿಕೆ ಹಾಕಿರುತ್ತಾನೆ. ನಂತರ ಪೋನಿನಲ್ಲಿಯ ಸಿಮ್ ತೆಗೆದು ಬಿಸಾಕಿ ಸಾಕ್ಷಿ ಪುರಾವೆ ನಾಶಪಡಿಸಿರುತ್ತಾನೆ. ನಂತರ ಸುಳ್ಯದಲ್ಲಿ ಈ ಹಿಂದೆ ಕೆಲಸ ಮಾಡಿದ ಸಿಮೆಂಟ ಅಂಗಡಿಯಲ್ಲಿ ಕೆಲಸ ಮಾಡಿಕೊಂಡಿದ್ದು ಅಂಗಡಿ ಹಿಂದಿರುವ ರೂಮಿನಲ್ಲಿ ವಾಸವಾಗಿದ್ದ ಅವಧಿಯಲ್ಲಿ ರಾತ್ರಿ ಸಮಯದಲ್ಲಿ ಆರೋಪಿತನು ಬಾಧಿತಳ ಮೇಲೆ 3 ಸಲ ಅತ್ಯಾಚಾರ ಎಸಗಿರುವ ಆರೋಪದ ಹಿನ್ನೆಲೆಯಲ್ಲಿ ಅಳವಂಡಿ ಪೋಲಿಸ ಠಾಣೆಯ ಶಿಲ್ಪಾ ಶೆಟ್ಟರ ಪಿಎಸ್‌ಐ ಇವರು ದೂರು ಸ್ವೀಕರಿಸಿ ಪ್ರಥಮ ಹಂತದ ತನಿಖೆಯನ್ನು ನಿರ್ವಹಿಸಿ, ಗೀತಾ ಬೆನಹಾಳ ಡಿಎಸ್‌ಪಿ ಕೊಪ್ಪಳ ಇವರು ಮುಂದಿನ ತನಿಖೆಯನ್ನು ನಿರ್ವಹಿಸಿ ಆರೋಪಿತನ ವಿರುದ್ದ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು. ಶಿವಕುಮಾರ ಸಿಎಚ್‌ಸಿ ಡಿಎಸ್‌ಪಿ ಕಛೇರಿ ಇವರು ತನಿಖಾ ಸಹಾಯಕ ಕರ್ತವ್ಯ ನಿರ್ವಹಿಸಿರುತ್ತಾರೆ.

ಈ ಪ್ರಕರಣವು ಸ್ಪೇ.ಎಸ್‌ಸಿ (ಪೋಕ್ಸೊ) ಸಂ: 15/2022ರಲ್ಲಿ ದಾಖಲಾಗಿದ್ದು, ವಿಚಾರಣೆಯನ್ನು ನಡೆಸಿದ ನ್ಯಾಯಾಲಯ ಆರೋಪಿತನ ಮೇಲಿನ ಆರೋಪಣೆಗಳು ಸಾಭೀತಾಗಿದ್ದರಿಂದ 20 ವರ್ಷಗಳ ಜೈಲು ಶಿಕ್ಷೆ ಹಾಗೂ ರೂ. 10,000 ಗಳ ದಂಡವನ್ನು ಭರಿಸುವಂತೆ ಆದೇಶಿಸಿ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ತ್ವರಿತ ವಿಲೇವಾರಿ (ಪೋಕ್ಸೊ) ನ್ಯಾಯಾಲಯದ ನ್ಯಾಯಾಧೀಶರಾದ ಕುಮಾರ ಡಿ.ಕೆ ಅವರು ದಿ: 06-08-2025 ರಂದು ತೀರ್ಪು ಹೊರಡಿಸಿರುತ್ತಾರೆ. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕರಾದ ಗೌರಮ್ಮ ದೇಸಾಯಿ ಅವರು ಪ್ರಕರಣ ನಡೆಸಿ ವಾದ ಮಂಡಿಸಿದ್ದರು. ಅಳವಂಡಿ ಪೋಲಿಸ ಠಾಣೆಯ ಸಿಬ್ಬಂದಿ ರಾಘವೇಂದ್ರ ಅವರು ಸಾಕ್ಷಿದಾರರನ್ನು ನ್ಯಾಯಾಲಯಕ್ಕೆ ಹಾಜರಪಡಿಸುವಲ್ಲಿ ಸಾಕಷ್ಟು ಸಹಕರಿಸಿರುತ್ತಾರೆ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕರ ಕಛೇರಿಯ ಪ್ರಕಟಣೆ ತಿಳಿಸಿದೆ.

# ಸೇವಾ ನ್ಯೂನತೆ: ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಿಂದ ತೀರ್ಪು ಪ್ರಕಟ

ಕೊಪ್ಪಳ : ವಿವಾಹ ಸಮಾರಂಭದ ಪೋಟೋ ಮತ್ತು ವಿಡಿಯೋಗಳನ್ನು ಸೂಕ್ತ ರೀತಿಯಲ್ಲಿ ಹಾಗೂ ಸಮರ್ಪಕವಾಗಿ ಮಾಡಿಕೊಡದೇ ಫಿರ್ಯಾದುದಾರರಿಗೆ ಎದುರುದಾರರಿಂದ ಉಂಟಾದ ಸೇವಾ ನ್ಯೂನತೆ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ತೀರ್ಪು ಪ್ರಕಟಿಸಿದೆ.

ಗ್ರಾಹಕ ಫಿರ್ಯಾದು ಸಂಖ್ಯೆ: 72/2024 ರಲ್ಲಿನ ಅಂತಿಮ ತೀರ್ಪಿನ ಸಾರಾಂಶದನ್ವಯ ಫಿರ್ಯಾದುದಾರರಾದ ಲೇಖನಾ ಮತ್ತು ಅರ್ಪಣ್ ಇವರು ಕೊಪ್ಪಳ ನಿವಾಸಿಯಾಗಿದ್ದು, ಈ ದೂರುದಾರರು 1ನೇ ಎದುರುದಾರರಾದ ವೆಡ್‌ಹುಡ್ಸ್ ವೂವ್‌ಲೆಕ್ಸ್ ಆಫಿಸ್ ಬಿ.ಟಿ.ಎಂ ಲೇಔಟ್ ಬೆಂಗಳೂರಿನ ಆಫೀಸನ್ನು 2 ಮತ್ತು 3ನೇ ಎದುರುದಾರರಾದ ರೋಷನ್ ಕ್ರಿಸ್ಟೋಪರ್ ಮತ್ತು ಇಮ್ಯಾನುಲ್ ಇವರು ನಿರ್ವಹಿಸುತ್ತಿದ್ದು, ದೂರುದಾರರರು 1 ಮತ್ತು 2 ರವರ ವಿವಾಹ ಪೂರ್ವ ಮತ್ತು ವಿವಾಹ ದಿನಾಂಕ 28-11-2022 ರಿಂದ 30-11-2022 ರವರೆಗೆ ವಿವಾಹ ಸಮಾರಂಭದ ಪೋಟೋಗಳನ್ನು ಮತ್ತು ವಿಡಿಯೋವನ್ನು ಮಾಡಿಕೊಡುವ ಸೇವೆಯ ಸಲುವಾಗಿ ಹಾಗೂ ವಿವಾಹ ಪೂರ್ವ ಪೋಟೋಗಳನ್ನು ಮತ್ತು ವಿಡಿಯೋವನ್ನು ಮಾಡಿಕೊಡುವಂತೆ ಎದುರುದಾರರ ಮತ್ತು ದೂರುದಾರರ ಮಧ್ಯ ಮಾತುಕತೆಯಾಗಿ ರೂ. 1,20,000 ಗಳ ಒಪ್ಪಂದ ಆಗಿದ್ದು, ಎದುರುದಾರರನ್ನು ಸಂಪರ್ಕಿಸಿ ಒಟ್ಟು ಮೊತ್ತ ರೂ. 1,00,000 ಗಳಿಗೆ ಹಂತ ಹಂತವಾಗಿ ಪೋನ್‌ಪೇ ಮುಖಾಂತರ 3ನೇ ಎದುರುದಾರರ ಅಕೌಂಟಿಗೆ ಜಮೆ ಮಾಡಿರುತ್ತಾರೆ. ಎದುರುದಾರರು ದೂರುದಾರರಗಳ ವಿವಾಹ ಪೂರ್ವ ಪೋಟೋಗಳನ್ನು ಮತ್ತು ವಿಡಿಯೋವನ್ನು ಒಪ್ಪಂದದಂತೆ ಸಕಲೇಶಪೂರ ಮತ್ತು ಚಿಕ್ಕಮಗಳೂರಿನಲ್ಲಿ 3 ದಿನಗಳ ಕಾಲ ಮಾಡಿಕೊಡಬೇಕಾಗಿದ್ದು, ಈ ಪೋಟೋಗಳನ್ನು ಮತ್ತು ವಿಡಿಯೋವನ್ನು ಸಮರ್ಪಕವಾಗಿ ಮಾಡಿಕೊಡದೇ ಹಾಗೂ ವಿವಾಹ ಸಮಾರಂಭದ ಪೋಟೋಗಳನ್ನು ಮತ್ತು ವಿಡಿಯೋಗಳನ್ನು ಸೂಕ್ತ ರೀತಿಯಲ್ಲಿ ಹಾಗೂ ಸಮರ್ಪಕವಾಗಿ ಮಾಡಿಕೊಡದೇ ನಿರ್ಲಕ್ಷತೆ ತೋರಿ ಸೇವಾ ನ್ಯೂನ್ಯತೆ ಎಸಗಿದ್ದರಿಂದ ದೂರುದಾರರು ಎದುರುದಾರರ ವಿರುದ್ಧ ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಪರಿಹಾರ ಕೋರಿ ದೂರನ್ನು ದಾಖಲಿಸಿರುತ್ತಾರೆ.

ದೂರನ್ನು ದಾಖಲಿಸಿಕೊಂಡ ನಂತರ ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಎದುರುದಾರರಿಗೆ ನೋಟಿಸನ್ನು ನೀಡಿದ್ದು, ಈ ನೋಟಿಸ್ ಎದುರುದಾರರಿಗೆ ಖುದ್ದು ಜಾರಿಯಾಗಿರುತ್ತದೆ. ಎದುರುದಾರರು ವಕೀಲರ ಮೂಲಕ ಹಾಜರಾಗಿ ಆಕ್ಷೇಪಣೆಯನ್ನು ಸಲ್ಲಿಸಿರುತ್ತಾರೆ ಮತ್ತು ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತಾರೆ.

ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಜಿ.ಇ. ಸೌಭಾಗ್ಯಲಕ್ಷ್ಮೀ ಹಾಗೂ ಸದಸ್ಯರಾದ ರಾಜು ಎನ್. ಮೇತ್ರಿ ರವರು ವಾದವನ್ನು ಆಲಿಸಿ, ದಾಖಲೆಗಳನ್ನು ಪರಿಶೀಲಿಸಿ, ಎದುರುದಾರರು ದೂರುದಾರರಿಗೆ ವಿವಾಹ ಪೂರ್ವ ಮತ್ತು ವಿವಾಹ ಸಮಾರಂಭದ ಪೋಟೋಗಳನ್ನು ಮತ್ತು ವಿಡಿಯೋವನ್ನು ನೀಡುವಲ್ಲಿ ವಿಳಂಭ ಮಾಡಿರುವುದು ಮೇಲ್ನನೋಟಕ್ಕೆ ಕಂಡು ಬಂದಿರುತ್ತದೆ. ದೂರುದಾರರ ವಿವಾಹ ಸಮಾರಂಭದ ಸಂಪೂರ್ಣ ಪೋಟೋಗಳನ್ನು ಮತ್ತು ವಿಡಿಯೋವನ್ನು ಸಮರ್ಪಕವಾಗಿ ಸೂಕ್ತ ಸಮಯದಲ್ಲಿ ಒದಗಿಸುವಲ್ಲಿ ಎದುರುದಾರರು ವಿಫಲರಾಗಿ ಸೇವಾ ನ್ಯೂನ್ಯತೆ ಎಸಗಿರುತ್ತಾರೆ. ಆದ್ದರಿಂದ ಎದುರುದಾರರರು ದೂರುದಾರರಿಗೆ ಪರಿಹಾರ ರೂಪದಲ್ಲಿ ರೂ. 25,000 ಗಳನ್ನು ವಾರ್ಷಿಕ ಶೇ.6ರ ಬಡ್ಡಿ ಸಮೇತ ದೂರಿನ ದಿನಾಂಕದಿಂದ ಪಾವತಿಯಾಗುವವರೆಗೆ ನೀಡುವಂತೆ ಹಾಗೂ ದೂರಿನ ಖರ್ಚು ರೂ. 5,000 ಗಳನ್ನು ಎದುರುದಾರರು ದೂರುದಾರರಿಗೆ ಪಾವತಿಸುವಂತೆ ಆದೇಶಿಸಲಾಗಿದೆ. ಈ ಪರಿಹಾರದ ಮೊತ್ತವನ್ನು ಆದೇಶದ ದಿನಾಂಕದಿಂದ 45 ದಿನಗಳ ಒಳಗಾಗಿ ಎದುರುದಾರರು ಫಿರ್ಯಾದುದಾರರಿಗೆ ಪಾವತಿಸುವಂತೆ ಆದೇಶವನ್ನು ನೀಡಿರುತ್ತಾರೆ ಎಂದು ಕೊಪ್ಪಳ ಜಿಲ್ಲಾ ಗ್ರಾಹಕರ ಆಯೋಗದ ಸಹಾಯಕ ರಿಜಿಸ್ಟ್ರಾರ ಹಾಗೂ ಸಹಾಯಕ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

****

# ಡಿಸಿಸಿ ಬ್ಯಾಂಕ್ ಚುನಾವಣೆಗೆ ತಾಲೀಮ ಶುರು ತೇರದಾಳದಲ್ಲಿ ಪ್ರಕಾಶ ತಪಶೆಟ್ಟಿ ಬ್ಯಾಂಕುಗಳಿಗೆ ಬೇಟಿ



ತೇರದಾಳ-ಇದೇ ತಿಂಗಳ ನವಂಬರ ತಿಂಗಳಲ್ಲಿ ಬಾಗಲಕೋಟೆ ಜಿಲ್ಲಾ ಸಹಕಾರಿ ಬ್ಯಾಂಕ್ ಆಡಳಿತ ಮಂಡಳಿ ಚುನಾವಣೆ ನಡೆಯಲಿದ್ದು, ಆಕಾಂಕ್ಷಿಗಳು ಈಗಲೇ ತಾಲೀಮ ಶುರು ಮಾಡಿದ್ದಾರೆ.
ಬಿಡಿಸಿಸಿ ಬ್ಯಾಂಕ್ ನಿರ್ದೇಶ ಪ್ರಕಾಶ ತಪಶೆಟ್ಟಿ ಗುರುವಾರ ತೇರದಾಳ ಭಾಗಕ್ಕೆ ಆಗಮಿಸಿ ತಾವು ಸ್ಪರ್ಧಿಸುವ ಕೃಷಿಯೇತರ ಪತ್ತಿನ ಸಹಕಾರಿ ಸಂಘಗಳಿಗೆ ಬೇಟಿ ನೀಡಿ ಬ್ಯಾಂಕ್ ಆಡಳಿತ ಮಂಡಳಿ ಜತೆಗೆ ಚರ್ಚಿಸಿದರು.
ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರಕಾಶ ತಪಶೆಟ್ಟಿ, ಐದು ವರ್ಷಗಳಲ್ಲಿ 187 ನೂತನ ಕೃಷಿಯೇತರ ಪತ್ತಿನ ಸಹಕಾರಿ ಸಂಘಗಳಾಗಿದ್ದು, ಜಿಲ್ಲೆಯಲ್ಲಿ ಒಟ್ಟು 487 ತಾವು ಪ್ರತಿನಿಧಿಸುವ ಕ್ಷೇತ್ರಕ್ಕೆ ಬ್ಯಾಂಕುಗಳಿವೆ. ಮೂರು ಬಾರಿ ಬಿಡಿಸಿಸಿ ಬ್ಯಾಂಕ್ ಚುನಾವಣೆ ಎದುರಿಸಿದ್ದು, ಈ ಬಾರಿಯೂ ಸ್ಪರ್ಧಿಸುವುದಾಗಿ ತಿಳಿಸಿದ ಅವರು, ಕೃಷಿಯೇತರ ಪತ್ತಿನ ಸಹಕಾರಿ ಸಂಘಗಳು ಡಿಸಿಸಿ ಬ್ಯಾಂಕಿನಲ್ಲಿ ಇಡುವ ಠೇವಣಿ, ಸಭೆಗಳಲ್ಲಿ ಭಾಗವಹಿಸುವ ಕಡ್ಡಾಯವಿಕೆ, ಕಟ್ಟಡ ಹಾಗೂ ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ನೀಡುವ ಸಹಾಯ ಧನ ಸೇರಿದಂತೆ ತಮ್ಮ ಕ್ಷೇತ್ರ ವ್ಯಾಪ್ತಿಯ ಬ್ಯಾಂಕುಗಳ ಬೇಡಿಗಳನ್ನು ಈಡೇರಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗಿದೆ. ಇನ್ನೂ ಸಾಕಷ್ಟು ಹೊಸ ವಿಚಾರಗಳನ್ನು ಹೊಂದಲಾಗಿದೆ. ತಮ್ಮ ಕ್ಷೇತ್ರ ವ್ಯಾಪ್ತಿಯ ಬ್ಯಾಂಕುಗಳ ಸಹಕಾರ ಕೂಡ ಬಹಳಷ್ಟು ಅಮೂಲ್ಯವಾಗಿದೆ ಎಂದು ತಿಳಿಸಿದರು. ಉಸ್ಮಾನ ಮುಜಾವರ, ಡಾ. ಶಂಕರ ಅಥಣಿ, ಪ್ರವೀಣ ಬಾಳಿಗೇರಿ, ರಮೇಶ ಪಟ್ಟಣಶೆಟ್ಟಿ, ಶ್ರೀನಾಥ ಸೊಟ್ಟಿ, ಶ್ರೀಶೈಲ ತೆಳಗಿನಮನಿ, ಸುರೇಶ ಮರಡಿ, ಈಶ್ವರ ಮಠಪತಿ ಇದ್ದರು.

# ಪತ್ರಕರ್ತ ಮುರಿಗೆಪ್ಪ ಮಾಲಗಾರರಿಗೆ ರಾಜ್ಯ ಮಟ್ಟದ ಮಾಧ್ಯಮ ಸೇವಾ ರತ್ನ ಪ್ರಶಸ್ತಿ ಪ್ರಧಾನ



ಬೈಲಹೊಂಗಲ-ಪ್ರಾಮಾಣಿಕ ಪತ್ರಕರ್ತನಾಗಿ ಸಮಾಜ ಅಂಕು ಡೊಂಕುಗಳನ್ನು ತಿದ್ದಿ ಯಾವುದಕ್ಕೂ ಆಸೆ ಪಡದೆ ನಿಜ ಸುದ್ದಿಗಳನ್ನು ಪತ್ರಿಕೆಯಲ್ಲಿ ಬಿತ್ತರಿಸಿ ಅನೇಕ ವರ್ಷಗಳಿಂದ ಪತ್ರಿಕಾ ರಂಗದಲ್ಲಿ ಕಾರ್ಯ ನಿರ್ವಹಿಸುತ್ತಾ ಹಲವು ಪತ್ರಿಕೆಗಳಲ್ಲಿ ಹಲವಾರು ಲೇಖನಗಳನ್ನು ಬರೆದ ಮೂಡಲಗಿ ತಾಲ್ಲೂಕಿನ ಹಳ್ಳೂರ ಗ್ರಾಮದ ಯುವ ಪತ್ರಕರ್ತ ಮುರಿಗೆಪ್ಪ ಬಸಪ್ಪ ಮಾಲಗಾರ ಅವರ ಪ್ರಾಮಾಣಿಕ ಸೇವೆಯನ್ನು ಪರಿಗಣಿಸಿ ಧಾರವಾಡದ ರಂಗಾಯಣ ಸಭಾ ಭವನದಲ್ಲಿ ಭಾನುವಾರ ನಡೆದ ವಿಶ್ವ ದರ್ಶನ ಕನ್ನಡ ದಿನ ಪತ್ರಿಕೆಯ 5 ನೇ ವಾರ್ಷಿಕೋತ್ಸವ ಹಾಗೂ ಸಾಧಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಜ್ಯ ಮಟ್ಟದ ಮಾಧ್ಯಮ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಹುಬ್ಬಳ್ಳಿ ವಿಶ್ವ ದರ್ಶನ ಕನ್ನಡ ದಿನ ಪತ್ರಿಕೆಯ ಸಂಪಾದಕ ಎಸ್ ಎಸ್ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಪ್ರಶಸ್ತಿ ಪ್ರಧಾನ ಸಮಾರಂಭ ನಡೆಯಿತು. ದಿವ್ಯ ಸಾನಿಧ್ಯ ಬೆಂಗಳೂರ ಆರೂಢ ಭಾರತಿ ಮಹಾಸ್ವಾಮಿಗಳು, ಡಾ ಬಸವರಾಜ್ ಮಹಾಸ್ವಾಮಿಗಳು. ಶಂಕರಾನಂದ ಮಹಾಸ್ವಾಮಿಗಳು ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗೌರವಾನ್ವಿತ ವಿಶ್ರಾಂತ ನ್ಯಾಯಾದಿಶರು ಉಚ್ಚ ನ್ಯಾಯಾಲಯ ಬೆಂಗಳೂರು ಅರಳಿ ನಾಗರಾಜ. ಕಾರ್ಯನಿರತ ಪತ್ರಕರ್ತ ಸಂಘದ ರಾಜ್ಯಾಧ್ಯಕ್ಷರಾದ ಮಲ್ಲಿಕಾರ್ಜುನ ಬಂಗ್ಲೆ. ಮಂಜುನಾಥ ಮಾಡ್ಯಾಳ, ಎಸ್ ಎಸ್ ಮಿತ್ತಲಕೋಟ, ಮಹಾದೇವ ಸಾಹುಕಾರ, ಆರ್. ಸಿ. ಗಾಳೆ, ಚಲನ ಚಿತ್ರ ನಿರ್ದೇಶಕ ವಿನೋದ ಕುಮಾರ, ನ್ಯಾಯವಾದಿ ರವಿ ವಿ ಸೇರಿದಂತೆ ಅನೇಕರಿದ್ದರು.

# ಸೆ.13 ರಂದು ಲೋಕ ಅದಾಲತ್ : ಬೆಳಗಾವಿಯಲ್ಲಿ ಖಾಯಂ ಜನತಾ ನ್ಯಾಯಾಲಯ

# ಜಿಲ್ಲೆಯಾದ್ಯಂತ 90 ದಿನಗಳ ಮಧ್ಯಸ್ಥಿಕೆ ಅಭಿಯಾನ



ಬಾಗಲಕೋಟೆ: : ಜಿಲ್ಲಾ ಹಾಗೂ ಅಧಿನ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಜಿಲ್ಲೆಯಾದ್ಯಂತ 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಜನತೆ ಇದರ ಸದುಪಯೋಗ ಪಡೆದುಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಎನ್.ವಿ.ವಿಜಯ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ ಅವರು ಈ ಅಭಿಯಾನ ಜುಲೈ 1 ರಿಂದ ಆರಂಭಗೊಂಡಿದ್ದು, ಇದು 90 ದಿನಗಳ ವರೆಗೆ ರಾಜ್ಯಾದ್ಯಂತ ನಡೆಯುತ್ತಿದೆ. ಈ ಅಭಿಯಾನದಲ್ಲಿ ಬಾಕಿ ಇರುವ ಪ್ರಕರಣಗಳಾದ ವೈವಾಹಿಕ ಹಾಗೂ ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು, ಮೋಟಾರು ಅಪಘಾತ, ಚೆಕ್ ಅಮಾನ್ಯ ಪ್ರಕರಣಗಳು, ವಾಣಿಜ್ಯ, ಸೇವಾ ಪ್ರಕರಣಗಳು, ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು, ಗ್ರಾಹಕರ ವ್ಯಾಜ್ಯ ಪ್ರಕರಣಗಳು ಡಿ.ಆರ್.ಟಿ, ಪಾಲುದಾರಿಕೆ, ಭೂಸ್ವಾಧೀನ ಪ್ರಕರಣಗಳು ಹಾಗೂ ಇತರೆ ಸಿವಿಲ್ ಪ್ರಕರಣಗಳನ್ನು ಮಧ್ಯಸ್ಥಿಕೆಯ ಮೂಲಕ ಇತ್ಯರ್ಥಪಡಿಸಲಾಗುತ್ತದೆ.

ನ್ಯಾಯಾಲಯದ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಕ್ಕೆ ಸೂಚಿಸಿಕೊಂಡಲ್ಲಿ ಅಂತಹ ಪ್ರಕರಣಗಳಲ್ಲಿ ಉಭಯ ಪಕ್ಷಗಾರರನ್ನು ಕರೆದುಕೊಂಡು ಜಿಲ್ಲಾ ನ್ಯಾಯಾಲಯದ ಸಮುಚ್ಛಯದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳ ಹಾಗೂ ತಾಲೂಕು ನ್ಯಾಯಾಲಯಗಳ ಆವರಣಗಳಲ್ಲಿರುವ ಮಧ್ಯಸ್ಥಿಕೆ ಕೇಂದ್ರಗಳಲ್ಲಿ ರಾಜೀ ಸಂಧಾನ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ. ಸಾರ್ವಜನಿಕರು ತಮ್ಮ ಪ್ರಕರಣಗಳು ಉಚ್ಚ ನ್ಯಾಯಾಲಯದಲ್ಲಿ ಬಾಕಿ ಇದ್ದಲ್ಲಿ ಬೆಂಗಳೂರು, ಧಾರವಾಡ ಮತ್ತು ಕಲಬುರಗಿ ಉಚ್ಚ ನ್ಯಾಯಾಲಯಗಳ ಆವರಣಗಳಲ್ಲಿರುವ ಮಧ್ಯಸ್ಥಿಕೆ ಕೇಂದ್ರಗಳನ್ನು ಸಂಪರ್ಕಿಸಿ ಮಾಹಿತಿಯನ್ನು ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

ಸೆ.13 ರಂದು ಲೋಕ ಅದಾಲತ್

ಜಿಲ್ಲೆಯಾದ್ಯಂತ ಎಲ್ಲ ಅಧೀನ ಮತ್ತು ಜಿಲ್ಲಾ ನ್ಯಾಯಾಲಯಗಳಲ್ಲಿ ಸೆಪ್ಟೆಂಬರ 13 ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ. ಈ ಅದಾಲತ್‌ನಲ್ಲಿ ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದ್ದು, ಸಾರ್ವಜನಿಕರು ಇದರ ಲಾಭ ಪಡೆದುಕೊಳ್ಳಬಹುದಾಗಿದೆ. ರಾಜೀಯಾಗಬಲ್ಲ ಕ್ರಿಮಿನಲ್ ಪ್ರಕರಣಗಳು, ಎನ್‌ಐ ಆಕ್ಟ ಪ್ರಕರಣಗಳು, ಸಾಲ ವಸೂಲಾತಿ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ, ಮೋಟಾರು ವಾಹನ ಅಪಘಾತ ಪ್ರಕರಣ, ಕಾರ್ಮಿಕ ವಿವಾದ ಪ್ರಕರಣಗಳು, ಗಣಿ ಮತ್ತು ಭೂ ವಿಜ್ಞಾನ ಪ್ರಕರಣಗಳು, ವೈವಾಹಿಕ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು, ಆಸ್ತಿ ವಿಭಾಗ ಪ್ರಕರಣಗಳು, ನಿರ್ಧಿಷ್ಟ, ಜಾರಿ, ಹಕ್ಕು ಘೋಷಣೆ ಪ್ರಕರಣಗಳು, ಶಾಸ್ವತ ನಿರ್ಭಂಧಕಾಜ್ಞೆ ಹಾಗೂ ಇತರೆ, ಜನನ ಪ್ರಮಾಣ ಪತ್ರಕ್ಕೆ ಸಂಬಂಧಿಸಿದ ಪ್ರಕರಣಗಳು, ಲಘು ವ್ಯಾಜ್ಯ, ಜೀವನಾಂಶ, ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಗೆ ಸಂಬಂಧಿಸಿದ ಪ್ರಕರಣಗಳು ಮತ್ತು ವಾಜ್ಯ ಪೂರ್ವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಲೋಕ ಅದಾಲತ್‌ನಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್.ವಿ.ವಿಜಯ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಜಂಟಿಯಾಗಿ ತಿಳಿಸಿದ್ದಾರೆ.

## ಬೆಳಗಾವಿಯಲ್ಲಿ ಖಾಯಂ ಜನತಾ ನ್ಯಾಯಾಲಯ

ಬಾಗಲಕೋಟೆ ಜಿಲ್ಲೆಯ ವ್ಯಾಜ್ಯ ಪ್ರಕರಣಗಳನ್ನು ಬೇಗನೇ ಇತ್ಯರ್ಥಪಡಿಸಲು ಕರ್ನಾಟಕ ಉಚ್ಚ ನ್ಯಾಯಾಲಯ ಖಾಯಂ ಜನತಾ ನ್ಯಾಯಾಲಯವನ್ನು ಬೆಳಗಾವಿಯಲ್ಲಿ ಪ್ರಾರಂಭಿಸಲಾಗಿದೆ. ಈ ನ್ಯಾಯಾಲಯ ಸಾರ್ವಜನಿಕ ಉಪಯುಕ್ತ ಸೇವೆಗಳಿಗೆ ಸಂಬಂಧಪಟ್ಟ ವಿವಾದಗಳನ್ನು ರಾಜೀ ಮತ್ತು ವಿಚಾರಣೆ ಮೂಲಕ ತಿರ್ಮಾನ ಮಾಡುವ ಅಧಿಕಾರ ಹೊಂದಿದೆ. 1 ಕೋಟಿ ರೂ.ಗಳ ವರೆಗಿನ ಮೌಲ್ಯದ ವ್ಯಾಜ್ಯಗಳ ಪ್ರಕರಣಗಳನ್ನು ದಾಖಲಿಸಬಹುದಾಗಿದೆ. ಪ್ರಕರಣ ದಾಖಲು ಮಾಡಲು ಆದಾಯ ಮಿತಿ, ಶುಲ್ಕ ಇರುವದಿಲ್ಲ. ಜನತಾ ನ್ಯಾಯಾಲಯದಲ್ಲಿ ದಾಖಲಿಸಿದ ಪ್ರಕರಣ ಬೇರೆ ನ್ಯಾಯಾಲಯದಲ್ಲಿ ದಾವೆ ಸಲ್ಲಿಸಂತಿಲ್ಲ. ಒಂದು ವೇಳೆ ಉಭಯ ಪಕ್ಷಗಾರರು ರಾಜೀ ಸಂಧಾನಕ್ಕೆ ಒಪ್ಪದೇ ಇದ್ದರೆ ವಿವಾದವನ್ನು ವಿಚಾರಣೆ ಮಾಡಿ ಕಾನೂನು ಆಧಾರ ಮೇಲೆ ತ್ವರಿತವಾಗಿ ಐತೀರ್ಪು ನೀಡಲಾಗುತ್ತದೆ. ಈ ಐತೀರ್ಪಿನ ಬಗ್ಗೆ ಯಾವುದೇ ಸಿವಿಲ್ ಅಥವಾ ಜಿಲ್ಲಾ ನ್ಯಾಯಾಲಯದಲ್ಲಿ ಪ್ರಶ್ನಿಸುವ ಅವಕಾಶವಿಲ್ಲ. ಆದರೆ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸುವುದರ ಮೂಲಕ ಮಾತ್ರ ಐತೀರ್ಪನ್ನು ಪ್ರಶ್ನಿಸಲು ಅವಕಾಶವಿದೆ.

# ಸೆ. 13ರಂದು ಜಿಲ್ಲೆಯಾದ್ಯಂತ ರಾಷ್ಟ್ರೀಯ ಲೋಕ್ ಅದಾಲತ್

## ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥಕ್ಕೆ ಅವಕಾಶ –ಜಿಲ್ಲಾ ನ್ಯಾಯಾಧೀಶ ಹರೀಶ್ ಎ

ವಿಜಯಪುರ, ಜಿಲ್ಲಾ ಕೇಂದ್ರವೂ ಸೇ–ರಿದಂತೆ ಜಿಲ್ಲೆಯಾದ್ಯಂತ ಇರುವ ಎಲ್ಲ ಅಧೀನ ನ್ಯಾಯಾಲಯಗಳಲ್ಲಿ ಸೆಪ್ಟೆಂಬರ್ 13ರಂದು ರಾಷ್ಟ್ರೀಯ ಲೋಕ್ ಅದಾಲತ್ ಆಯೋಜಿಸಲಾಗಿದ್ದು, ಈ ಅದಾಲತ್‌ನಲ್ಲಿ ಕಕ್ಷಿದಾರರು ಭಾಗವಹಿಸಿ ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥಕ್ಕೆ ಅವಕಾಶವಿರುವುದರಿಂದ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಹರೀಶ.ಎ ಅವರು ತಿಳಿಸಿದರು.

ಗುರುವಾರ ಜಿಲ್ಲಾ ನ್ಯಾಯಾಲಯ ಸಂಕೀರ್ಣದ ಎಡಿಆರ್ ಕಟ್ಟಡದಲ್ಲಿ ಆಯೋಜಿಸಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಎಲ್ಲ ವರ್ಗದ ಕಕ್ಷಿದಾರ–ರಿಗೆ ಅನುಕೂಲವಾಗುವ ದೃಷ್ಟಿಯಿಂದ ಜಿಲ್ಲಾ ಕೇಂದ್ರ ಹಾಗೂ ಜಿಲ್ಲೆಯ ಎಲ್ಲ ತಾಲೂಕಾ ನ್ಯಾಯಾಲಯಗಳಲ್ಲಿ ಸೆಪ್ಟೆಂಬರ್ 13 ರಂದು ರಾಷ್ಟ್ರೀಯ ಲೋಕ್ ಅದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಲೋಕ್ ಅದಾಲತ್ ಕಾರ್ಯಕ್ರಮದಲ್ಲಿ ರಾಜಿ ಸಂಧಾನಕ್ಕೆ ಒಳಪಡಬಹುದಾದ ವ್ಯಾಜ್ಯ ಪೂರ್ವ ಪ್ರಕರಣಗಳು, ಚೆಕ್ ಅಮಾನ್ಯದ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್



ಸ್ಥಾಪಿಸಲ್ಪಡುವ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕ, ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಮತ್ತು ಇತರೆ ಸಿವಿಲ್ ಪ್ರಕರಣಗಳು, ಕರ್ನಾಟಕ ರಿಯಲ್ ಎಸ್ಟೇಟ್ ಪ್ರಾಧಿಕಾರಕ್ಕೆ ಸಂಬಂಧಪಟ್ಟ ಪ್ರಕರಣಗಳು (ರೇರಾ), ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಸಾಲ ವಸೂಲಾತಿ ನ್ಯಾಯಾಧೀಕರಣದ ಪ್ರಕರಣಗಳು (ಡಿಆರ್‌ಟಿ), ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (ಕೆಇಆರ್‌ಸಿ), ಕಾಯಂ ಜನತಾ ನ್ಯಾಯಾಲಯದಲ್ಲಿನ ಪ್ರಕರಣಗಳು, ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ಕಾರ್ಮಿಕ ವಿವಾದಗಳು, ಭೂಸ್ವಾಧೀನ ಪ್ರಕರಣಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು, ಪಿಂಚಣಿ ಪ್ರಕರಣಗಳು, ಕಂದಾಯ ಪ್ರಕರಣಗಳು ರಾಜಿಯಾಗಬಲ್ಲ ಸಿವಿಲ್ ಮತ್ತು ಇತರೆ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಇತ್ಯಥ–ರ್ಪಡಿಸಿಕೊಳ್ಳಬಹುದಾಗಿದೆ ಎಂದು ಹೇಳಿದರು.

ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ದಿನಾಂಕ: 01–08–2025ಕ್ಕೆ 46,446 ಸಿವಿಲ್ ಪ್ರಕರಣಗಳು ಹಾಗೂ 25,044 ಕ್ರಿಮಿನಲ್ ಪ್ರಕರಣಗಳು ಒಳಗೊಂಡಂತೆ ಒಟ್ಟು 71,490 ಪ್ರಕರಣಗಳು ವಿಚಾರಣೆಗೆ ಬಾಕಿ ಇದ್ದು, ಇವುಗಳಲ್ಲಿ ಈಗಾಗಲೇ 2,334 ಸಿವಿಲ್ ಪ್ರಕರಣಗಳು ಹಾಗೂ 979 ಕ್ರಿಮಿನಲ್ ಪ್ರಕರಣಗಳು ಸೇರಿದಂತೆ ಒಟ್ಟು 3,313 ಪ್ರಕರಣಗಳನ್ನು ಇತ್ಯರ್ಥಕ್ಕಾಗಿ ಗುರುತಿಸಲಾಗಿದೆ. ಸಂಬಂಧಿಸಿದ ವಕೀಲರು ಹಾಗೂ ಕಕ್ಷಿದಾರರೊಂದಿಗೆ ಮಾತುಕತೆಯ ಮೂಲಕ ಇನ್ನೂ ಹೆಚ್ಚಿನ ಪ್ರಕರಣಗಳನ್ನು ಸಹ ರಾಜಿಗಾಗಿ ಗುರುತಿಸಲಾಗುತ್ತಿದೆ. ಹೆಚ್ಚಿನ ಪ್ರಕರಣಗಳು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಗೊಳ್ಳುವ ನಿರೀಕ್ಷೆ ಇದೆ ಎಂದು ಅವರು ತಿಳಿಸಿದರು.

ಜಿಲ್ಲೆಯಲ್ಲಿ ಜುಲೈ 12 ರಂದು ನಡೆದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಜುಲೈ 01ಕ್ಕೆ ಬಾಕಿ ಇದ್ದ 77,958 ಪ್ರಕರಣಗಳಲ್ಲಿ 19,041 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಗೊಳಿಸಿ, ರೂ.52,81,17,704 ಗಳ ಪರಿಹಾರ ಕೊಡಿಸಲಾಗಿದೆ. ಸುಮಾರು 4,12,851 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಗೊಳಿಸಿ ರೂ. 34,57,62,270 ಪರಿಹಾರ ಕೊಡಿಸಲಾಗಿದೆ. ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥ ಮಾಡುವಲ್ಲಿ ಜಿಲ್ಲೆಯು ರಾಜ್ಯಕ್ಕೆ ಎರಡನೇ ಸ್ಥಾನ ಪಡೆದುಕೊಂಡಿದೆ ಎಂದು ಅವರು ಹೇಳಿದರು.

ಆದ್ದರಿಂದ, ಸೆಪ್ಟೆಂಬರ್ 13ರಂದು ಜಿಲ್ಲೆಯಲ್ಲಿ ಜರುಗುವ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಕಕ್ಷಿದಾರರು ತಮ್ಮ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಂಡು ನೆಮ್ಮದಿಯ ಜೀವನಕ್ಕೆ ನಾಂದಿ ಹಾಡಲು ಸುವರ್ಣಾವಕಾಶ ಕಲ್ಪಿಸಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಎಸ್ ಹಾಗರಗಿ, ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಡಿ.ಜಿ.ಬಿರಾದಾರ, ಪ್ರಧಾನ ಕಾರ್ಯದರ್ಶಿಗಳಾದ ಎಸ್. ಎಸ್. ಚೂರಿ ಉಪಸ್ಥಿತರಿದ್ದರು.

***

# ಗದಗ ಬೆಟಗೇರಿ ನಗರದ ಹಳೇ ಬಸ್ ನಿಲ್ದಾಣದ ಆವರಣದಲ್ಲಿ ನಿರ್ಮಿಸಲಾದ ಇಂದಿರಾ ಕ್ಯಾಂಟೀನ್ ಉದ್ಘಾಟನೆ ಸಮಾರಂಭ

ಗದಗ : ಕರ್ನಾಟಕ ಸರ್ಕಾರ ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯ, ಜಿಲ್ಲಾಡಳಿತ ಗದಗ, ಗದಗ ಬೆಟಗೇರಿ ನಗರಸಭೆ ಇವರುಗಳ ಸಹಯೋಗದಲ್ಲಿ ಗದಗ ಬೆಟಗೇರಿ ನಗರದ ಹಳೇ ಬಸ್‌ನಿಲ್ದಾಣದ ಆವರಣದಲ್ಲಿ ನಿರ್ಮಿಸಲಾದ ಇಂದಿರಾ ಕ್ಯಾಂಟೀನ್ ಉದ್ಘಾಟನಾ ಸಮಾರಂಭವು ಅಗಸ್ಟ 15 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಗಾನಯೋಗಿ ಪಂಡಿತ ಪುಟ್ಟರಾಜ ಗವಾಯಿ ಬಸ್ ನಿಲ್ದಾಣ ( ಹಳೇ ಬಸ್ ಸ್ಟಾಯಂಡ್ ) ನಲ್ಲಿ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಮ್ ಖಾನ್ , ನಗರಾಭಿವೃದ್ಧಿ ಸಚಿವರಾದ ಸುರೇಶ ಬಿ.ಎಸ್. (ಬೈರತಿ ) ಅವರುಗಳು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್. ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ಜಿಲ್ಲಾಧಿಕಾ–ರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಸಿ.ಎನ್.ಶ್ರೀಧರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ, ತಾಲೂಕಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಶ್ರೀಮತಿ ದೀಪಾ ರಾಜೇಂದ್ರ ಚೋಳನ್ , ಯೋಜನೆ, ಕಾರ್ಯಕ್ರಮಗಳು, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿ ರಮಣದೀಪ್ ಚೌಧರಿ, ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರಾದ ಪ್ರಭುಲಿಂಗ ಕವಳಿಕಟ್ಟಿ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್ , ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರು ಆಗಮಿಸುವರು.

ಅತಿಥಿಗಳಾಗಿ ಗೌರವಾನ್ವಿತ ನಗರಸಭಾ ಸದಸ್ಯರುಗಳು ಹಾಗೂ ನಾಮನಿರ್ದೇಶನ ಸದಸ್ಯರುಗಳು ಆಗಮಿಸುವರು.

ಗದಗ ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಶಿವಾಜಿ ಪವಾರ ಹಾಗೂ ಗದಗ ಬೆಟಗೇರಿ ನಗರಸಭೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಚ್.ಎ. ಬಂಡಿವಡ್ಡರ ಸರ್ವರಿಗೂ ಸ್ವಾಗತ ಕೋರಿದ್ದಾರೆ.

### ಕಾರಂಜಿಮಠದಲ್ಲಿ 290ನೇ ಶಿವಾನುಭವ-ಮಹಿಳಾ ಸಮಾವೇಶ

# ಕೊನೆಯ ಶ್ರಾವಣ ಸೋಮವಾರದ ವಿಶೇಷ ಕಾರ್ಯಕ್ರಮ

ಬೆಳಗಾವಿ: ಶಿವಬಸವನಗರ ಕಾರಂಜಿಮಠದ ಶಿವಾನುಭವ ಮಂಟಪದಲ್ಲಿ 290ನೇ ಶಿವಾನುಭವ ಹಾಗೂ ಕೊನೆಯ ಶ್ರಾವಣ ಸೋಮವಾರದ ನಿಮಿತ್ಯ ಮಹಿಳಾ ಸಮಾವೇಶವು ಸೋಮವಾರ ದಿನಾಂಕ 18 ಆಗಸ್ಟ್ 2025ರಂದು ಸಾಯಂಕಾಲ 6 ಗಂಟೆಗೆ ಜರುಗುವುದು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಪೂಜ್ಯ ಶ್ರೀ ಮ.ನಿ.ಪ್ರ. ಗುರುಸಿದ್ಧ ಮಹಾಸ್ವಾಮಿಗಳು ವಹಿಸಲಿದ್ದು, ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತರಾದ ಶ್ರೀಮತಿ ಶುಭ ಬಿ. ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಡಾ. ಗುರುದೇವಿ ಹುಲೆಪ್ಪನವರಮಠ ಮತ್ತು ಮಧುಮತಿ ಹಿರೇಮಠ ಅವರು ಆಗಮಿಸುವರು. ರಾಜೇಶ್ವರಿ ಸಂಬರಗಿಮಠ ಅವರ ಅಮೃತ ಮಹೋತ್ಸವ ಕಾರ್ಯಕ್ರಮ ನೆರವೇರಿವುದು.

ಡಾ. ಅಶ್ವಿನಿ ಭಾಗೋಜಿ ಅವರು ಮಹಿಳೆ ಅಬಲೆಯಲ್ಲ–ಸಬಲೆ ಎನ್ನುವ ವಿಷಯ ಕುರಿತು ವಿಶೇಷ ಉಪನ್ಯಾಸ ನೀಡುವರು.



ಇದೇ ಸಂದರ್ಭದಲ್ಲಿ ಡಾ. ಗುರುದೇವಿ ಹುಲೆಪ್ಪನವರಮಠ ಮತ್ತು ಪ್ರೊ. ರಿಟಾ ಬಣಗಾರ ಅವರು ಇಂಗ್ಲಿಷ್ ಭಾಷೆಯಲ್ಲಿ ಅನುವಾದಿಸಿದ "ಕಾರುಣ್ಯದ ಕಾರಂಜಿ" **(Fountain of Compassion)** ಗ್ರಂಥ ಲೋಕಾರ್ಪಣೆಯಾಗುವುದು. ಕುಮಾರಸ್ವಾಮಿ ಬಡಾವಣೆಯ ಮಾತೆಯರಿಂದ ಸಂಗೀತ ಕಾರ್ಯಕ್ರಮ ಮತ್ತು ಶ್ರೀ ಕಾರಂಜಿಮಠದ ಕುಮಾರೇಶ್ವರ ಸಂಗೀತ ಪಾಠಶಾಲೆಯ ಮಕ್ಕಳಿಂದ ಪ್ರಾರ್ಥನೆ ಜರುಗುವುದು ಎಂದು ಶ್ರೀಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಸಾಧಕರಿಗೆ ಹಾಗೂ ಪತ್ರರಕರ್ತರಿಗೆ ಗೌರವ ಸನ್ಮಾನ ಇಂದು

ಮುಧೋಳ: 79 ನೇ ಸ್ವಾತಂತ್ರ್ಯೋತ್ಸವ ಹಾಗೂ ಮಾಜಿ ಸಚಿವ ಹಾಗು ಕೈಗಾರಿಕೋದ್ಯಮಿ ಡಾ.ಮುರುಗೇಶ್ ನಿರಾಣಿ ಅವರ ಹುಟ್ಟುಹಬ್ಬದ ಅಂಗವಾಗಿ 120 ಸಾಧಕರಿಗೆ ಹಾಗೂ ಹಿರಿಯ ಪತ್ರಕರ್ತರಿಗೆ ಸನ್ಮಾನ ಕಾರ್ಯಕ್ರಮ ಆಗಸ್ಟ್ 15ರಂದು, ಮುಂಜಾನೆ 9:00ಗೆ ನಿರಾಣಿ ಸಕ್ಕರೆಕಾರ್ಖಾನೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ನಾಗರಿಕರ ವೇದಿಕೆ ಅಧ್ಯಕ್ಷ ಕಲ್ಲಪ್ಪ ಸಬರದ, ಹಿರಿಯ ಸಾಹಿತಿ ಡಾ.ಸಿದ್ದು ದಿವಾಣ ತಿಳಿಸಿದ್ದಾರೆ.

ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ವೆಂಕಪ್ಪ ಸುಗತೇಕರ್, ಚಲನಚಿತ್ರ ನಟ ಗುರುರಾಜ್ ಹೊಸಕೋಟೆ, ಸಾಹಿತಿ ಶ್ರೀರಾಮ್ ಇಟ್ಟಣ್ಣವರ್, ಸೈಕಲ್ ಚಾಂಪಿಯನ್ ಶಿವಾಜಿ ಮುಧೋಳ್, ಕೃಷ್ಣ ಪೂಜಾರಿ, ಮಾರುತಿ ಸರಕಾರಕುರಿ, ಸುಲೋಚನಾ ಜವಳಗಿ, ಯಲ್ಲವ್ವ ರೊಡ್ಡಣ್ಣವರ್, ಗಂಗಮ್ಮ ಮೋಸಲಗಿ, ಕೃಷಿ ತಜ್ಞ ದೇವೇಂದ್ರಪ್ಪ ಬಳೂಟಗಿ, ಹಿರಿಯ ಪತ್ರಕರ್ತ ಮಲ್ಲಿಕಾರ್ಜುನ ಹೆಗ್ಗಳಗಿ, ಅಶೋಕ ಕುಲಕರ್ಣಿ, ಎಂ ಸಿ ಗೊಂದಿ, ನಿಂಗಪ್ಪ ದೇವರವರ, ರವೀಂದ್ರ ಹಳಿಂಗಳಿ ಸೇರಿದಂತೆ 120 ಸಾಧಕರನ್ನು ಗೌರವ ನೀಡಿ ಸನ್ಮಾನಿಸಲಾಗುವುದು ಎಂದು ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

### ಅವಧಿ ವಿಸ್ತರಣೆ

ಬೆಳಗಾವಿ, : 2025–26ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್,ಬೌದ್ಧ, ಸಿಖ್ ಹಾಗೂ ಪಾರ್ಸಿ) ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಯು.ಪಿ.ಎಸ್.ಸಿ ನಾಗ–ರೀಕ ಸೇವೆ, ಕೆ.ಎ.ಎಸ್ ಗೆಜಿಟೆಡ್ ಪ್ರೊಬೇಷನರ್, ಗ್ರೂಪ್–ಸಿ, ಆರ್. ಆರ್.ಬಿ & ಎಸ್.ಎಸ್.ಸಿ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಗೆ ಆಯ್ಕೆ ಮಾಡಲು ಆಸಕ್ತ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಲಾಗಿದೆ. ಆಸಕ್ತರು ಆಗಸ್ಟ, 26, 2025 ರ ಒಳಗಾಗಿ ಸೇವಾಸಿಂಧು ಪೋರ್ಟಲ್ **(http://sevasindhu.karnataka.gov.in)** ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಛೇರಿ ಹಾಗೂ ತಾಲ್ಲೂಕಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರುದ್ರಭೂಮಿಯಲ್ಲಿ ಪರಮಾತ್ಮನ ಭವ್ಯ ಮೂರ್ತಿ

## ಸ್ಮಶಾನವೂ ಶಾಂತಿ ತೋಟವಾಗಿದೆ ಸಂಸದ ಕಡಾಡಿ ಶ್ಲಾಘನೇ

ಮೂಡಲಗಿ : ಮನುಷ್ಯ ಜೀವನದ ಕೊನೆಯ ಹಂತ ಸ್ಮಶಾನವು ಕೂಡ ಒಂದು ನೆಮ್ಮದಿಯ ಕೇಂದ್ರವಾಗಿ ಉದ್ಯಾನವನದಂತೆ ಕಂಗೊಳಿಸುವಂತಾಗಲಿ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ಸುಣಧೋಳಿ ಗ್ರಾಮದ ರುದ್ರ ಭೂಮಿಯಲ್ಲಿ ವೀರಶೈವರ ಆರಾಧ್ಯ ದೈವ ಶ್ರೀ ಪರಮೇಶ್ವರ ಮೂರ್ತಿಯನ್ನು ಉದ್ಘಾಟಿಸಿ ಮಾತನಾಡಿದ ಅವರು ಗ್ರಾಮದ ಗ್ರಾಮಸ್ಥರು ಸ್ಮಶಾನ ಭೂಮಿಯನ್ನು ಅಭಿವೃದ್ಧಿ ಪಡಿಸಿ ಮುಕ್ತಿಧಾಮವಾಗಿ ನಿರ್ಮಾಣ ಮಾಡುವ ಮೂಲಕ ತಾಲೂಕಿನಲ್ಲಿ ಮಾದರಿ ಗ್ರಾಮವಾಗಿಲಿ ಎಂದು ಶುಭ ಹಾರೈಸಿದರು

ಕಾರ್ಯಕ್ರಮದ ಸಾನಿಧ್ಯವನ್ನು ಸುಣಧೋಳಿ ಜಡಿಸಿದ್ದೇಶ್ವರ ಮಠದ ಪೂಜ್ಯರಾದ ಅಭಿನವ ಶಿವಾನಂದ ಮಹಾಸ್ವಾಮಿಗಳು ಹಾಗೂ ಸೊಗಲದ ಪೂಜ್ಯ ಚಿದಾನಂದ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಪ್ರಮುಖರಾದ ಶ್ರೀಶೈಲ ವಾಲಿ, ಚಂದ್ರಶೇಖರ ಗಾಣಿಗೇರ, ಭೀಮಣ್ಣ ಹೊಟ್ಟಿಹೊಳಿ, ಬಸವರಾಜ ಗಾಣಿಗೇರ, ನಾಗಪ್ಪ ಗಾಣಿಗೇರ, ಈರಣ್ಣ ಹಟ್ಟಿ, ಮಹಾದೇವ ಹಟ್ಟಿ, ಶಿವಲಿಂಗಪ್ಪ ಉಗರಗೋಳ, ಮಹಾದೇವ ವಾಲಿ ಸೇ–ರಿದಂತೆ ಸ್ಥಳೀಯ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

### ಆರ್.ಡಿ.ಎಸ್. ಕಾಲೇಜಿನಲ್ಲಿ ನಶಾ ಮುಕ್ತ ಭಾರತದ ಅಭಿಯಾನ

# ಮಾದಕ ವಸ್ತು ಸೇವನೆ ಮಾಡದಿರಲು ಪ್ರತಿಜ್ಞೆ ಸ್ವೀಕಾರ



ಮೂಡಲಗಿ : ಮಾದಕ ವಸ್ತು ಸೇವೆನೆ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವದಲ್ಲದೆ ದೈಹಿಕ ಅನಾರೋಗ್ಯಕ್ಕೆ ಕಾರಣವಾಗುತ್ತದೆ ಇಂದಿನ ಯುವಕರು ಡ್ರಗ್ಸ್ ತಂಬಾಕು ಗಾಂಜಾ ಹಾಗೂ ಮಧ್ಯಪಾನಗಳ ದುಶ್ಚಟಕ್ಕೆ ಬಲಿಯಾಗುತ್ತಿದ್ದು ಅವುಗಳನ್ನು ಸೇವನೆ ಮಾಡುವದರಿಂದ ದೂರ ಇರುವ ಯುವ ಸಮುದಾಯ ಸೃಷ್ಟಿಯಾಗುವುದು ಅವಶ್ಯಕವಿದೆ ಎಂದು ಆರ್.ಡಿ.ಎಸ್. ಸಮೂಹ ಸಂಸ್ಥೆಗಳ ಅಧ್ಯಕ್ಷ ಸಂತೋಷ ಪಾರ್ಶಿ ಹೇಳಿದರು. ಪಟ್ಟಣದ ಆರ್.ಡಿ.ಎಸ್. ಕಲಾ, ವಾಣಿಜ್ಯ, ವಿಜ್ಞಾನ ಪದವಿ ಮಹಾವಿದ್ಯಾಲಯ ಹಾಗೂ ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ನಶಾ ಮುಕ್ತ ಭಾರತದ ಅಭಿಯಾನದ ಮಾದಕ ವಸ್ತು ಸೇವನೆ ಮಾಡದಿರಲು ಪ್ರತಿಜ್ಞೆ ಸ್ವೀಕಾರ ಕಾರ್ಯಕ್ರಮದಲ್ಲಿ ಮಾತನಾಡಿದರು,

ನಮ್ಮ ಮನೆ ಕುಟುಂಬ ಹಾಗೂ ಸಮುದಾಯದ ಆರೋಗ್ಯ ಕಾಪಾಡಲು ಮಾದಕ ವಸ್ತುಗಳಿಂದ ನಾವೆಲ್ಲರೂ ದೂರ ಇರೋಣ ಭಾರತ ಸರಕಾರ ಯುವ ಸಮುದಾಯದ ಆರೋಗ್ಯಕ್ಕಾಗಿ ಮಾದಕ ವಸ್ತು ಸೇವನೆಯ ಪರಿಣಾಮಗಳು ಕುರಿತು ಜಾಗೃತಿಯನ್ನು ಹಮ್ಮಿಕೊಂಡು ಪ್ರತಿಯೊಬ್ಬ–ರಿಗೆ ತಿಳಿವಳಿಕೆ ನೀಡುವುದು ಅದರ ಜೊತೆಗೆ ನಾವೆಲ್ಲರೂ ಪ್ರತಿಜ್ಞೆ ಸ್ವೀಕರಿಸಿ ಅದರಂತೆ ನಡೆದುಕೊಳ್ಳೋಣ ಎಂದರು.

ಉಪನ್ಯಾಸಕ ಎಸ್.ಎನ್. ಕುಂಬಾರ ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು ಪ್ರಾಚಾರ್ಯರಾದ ಸತೀಶ ಗೋಟೂರೆ ಶಿವಾನಂದ ಸತ್ತಿಗೇರಿ ಹಾಗೂ ಕಾಲೇಜಿನ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಪ್ರತಿಜ್ಞೆಯನ್ನು ಸ್ವೀಕರಿಸಿದರು.

# ಮಕ್ಕಳ ಭವಿಷ್ಯ ಶಿಕ್ಷಕರ ಕೈಯಲ್ಲಿದೆ ; ಸಂಸದೆ ಪ್ರಿಯಾಂಕಾ ಜಾರಕಿಹೊಳಿ



ಗೋಕಾಕ: ಮಕ್ಕಳ ಭವಿಷ್ಯ ಶಿಕ್ಷಕರ ಕೈಯಲ್ಲಿದೆ. ವೃತ್ತಿ ಪಾವಿತ್ರತೆ ಕಾಪಾಡಿಕೊಂಡು ಪ್ರಾಮಾಣಿಕವಾಗಿ ಬೋಧನೆ ಮಾಡಿ ಉತ್ತಮ ಭಾವಿ ಪ್ರಜೆಗಳನ್ನು ದೇಶಕ್ಕೆ ಕೊಡುಗೆ ನೀಡಬೇಕೆಂದು ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರು ಹೇಳಿದರು.

ನಗರದ ಸತೀಶ್ ಶುಗರ್ಸ್ ಅಕ್ಯಾಡೆಮಿ ಪದವಿ ಮಹಾವಿದ್ಯಾಲಯ ಹಾಗೂ ನಾಯಿಕ ಸುಡೆಂಟ್ ಫೆಡರೇಷನ್ ಪ್ರೌಢ ಶಾಲೆಯ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಶೈಕ್ಷಣಿಕ ಕ್ಷೇತ್ರ ಉದಾರೀಕರಣಕ್ಕಾಗಿ ತಂದೆ, ಸಚಿವರಾದ ಸತೀಶ್ ಜಾರಕಿಹೊಳಿ ಅವರು ಈ ಭಾಗದಲ್ಲಿ ಸಾಕಷ್ಟು ಶ್ರಮ ವಹಿಸಿದ್ದಾರೆ. ಉತ್ತಮ ಸಮಾಜ, ಸದೃಢ ದೇಶ ನಿರ್ಮಾಣಕ್ಕೆ ಶಿಕ್ಷಕರ ಪಾತ್ರ ಬಹು ಮುಖ್ಯವಾಗಿದ್ದು, ವಿದ್ಯಾರ್ಥಿಗಳ ಏಳಿಗೆಗಾಗಿ ಶಿಕ್ಷಕರೊಂದಿಗೆ ನಾವು ಶ್ರಮ ವಹಿಸುತ್ತೇವೆ ಎಂದರು.

ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯ ಕುಲಪತಿ ಪ್ರೊ. ಸಿ. ಎಮ್. ತ್ಯಾಗರಾಜ ಮಾತನಾಡಿ, ನಲವತ್ತು ವರ್ಷಗಳ ಕಾಲ ಶಿಕ್ಷಕನಾಗಿ ಸೇವೆ ಸಲ್ಲಿಸಿ, ಸಾವಿರಾರೂ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ ತೃಪ್ತಿ ನನಗಿದೆ. ಇನ್ನು ಸಚಿವ ಸತೀಶ್ ಜಾರಕಿಹೊಳಿಯವರು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆ ಬಗ್ಗೆ ಅತ್ಯಂತ ಗೌರವ ಇದೆ. ಅವರು ನಾಯಿಕ ಸುಡೆಂಟ್ ಫೆಡರೇಷನ್ ಮೂಲಕ ಸಾವಿರಾರೂ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಕಾರ್ಯವನ್ನು ಶ್ಲಾಘಿಸಿದರು.

ರಾಜ್ಯ ಯುವ ಕಾಂಗ್ರೆಸ್ ಘಟಕದ ಪ್ರಧಾನ ಕಾರ್ಯದರ್ಶಿ ರಾಹುಲ್ ಜಾರಕಿಹೊಳಿ ಮಾತನಾಡಿ, ಗೋಕಾಕ ತಾಲೂಕಿಗೆ ಈಗಾಗಲೇ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮಂಜೂರಾಗಿದ್ದು, ಸದ್ಯಕ್ಕೆ ಕಾಲೇಜು ಆರಂಭಕ್ಕಾಗಿ ಸತೀಶ್ ಶುಗರ್ಸ್ ಅಕ್ಯಾಡೆಮಿ ಪದವಿ ಮಹಾವಿದ್ಯಾಲಯದ ಕಟ್ಟಡವನ್ನು ಒದಗಿಸೋಣ ಎಂದು ತಂದೆ, ಸಚಿವರಾದ ಸತೀಶ್ ಜಾರಕಿಹೊಳಿ ಅವರು ತಿಳಿಸಿದ್ದಾರೆ. ಈ ಕಾಲೇಜು ಆರಂಭವಾದರೆ ಇಲ್ಲಿನ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ದೊರೆಯಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸತೀಶ್ ಶುಗರ್ಸ್ ಅಕ್ಯಾಡೆಮಿ ಟ್ರಸ್ಟಿ ವಿಠ್ಠಲ್ ಪರಸನ್ನವರ್, ಗೋಕಾಕ ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಬಿ. ಬಳಿಗಾರ, ಸತೀಶ್ ಶುಗರ್ಸ್ ಅಕ್ಯಾಡೆಮಿ ಆಡಳಿತಾಧಿಕಾರಿ ಪ್ರಕಾಶ ಲಕ್ಕೆಟ್ಟಿ, ಮಹೇಶ ಚಿಕ್ಕೋಡಿ ಸೇರಿದಂತೆ ಸತೀಶ್ ಶುಗರ್ಸ್ ಅಕ್ಯಾಡೆಮಿ ಪದವಿ ಮಹಾವಿದ್ಯಾಲಯ ಹಾಗೂ ನಾಯಿಕ ಸುಡೆಂಟ್ ಫೆಡರೇಷನ್ ಪ್ರೌಢ ಶಾಲೆಯ ಶಿಕ್ಷಕರು ಇದ್ದರು.

# ಸತತ ಪರಿಶ್ರಮದಿಂದ ಗೆಲುವು ಸಾಧ್ಯ-ಸಂಜಯ್ ಕೌಜಲಗಿ



ಮೂಡಲಗಿ : ಸಮೀಪದ ಕೌಜಲಗಿಯ ಸ್ಥಳೀಯ ಸಿಂಧೂತಾಯಿ ಮಹಾದೇವರಾವ್ ದಳವಾಯಿ ಎಜುಕೇಶನ್ ಟ್ರಸ್ಟನ ಡಾ॥ಮಹದೇವಪ್ಪ ಮಡ್ಡೆಪ್ಪ ದಳವಾಯಿ ಪ್ರೌಢಶಾಲೆಯಲ್ಲಿ ಸಾಧಕರ ಸತ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಇತ್ತೀಚೆಗೆ ಯುಪಿಎಸ್‌ಸಿ ಪರೀಕ್ಷೆಯಲ್ಲಿ 690ನೇ ರಾಂಕ್ ಪಡೆದು ಭಾರತೀಯ ಕಂದಾಯ ಸೇವೆ (ಆಯ್.ಆರ್.ಎಸ್)ಗೆ ಆಯ್ಕೆಯಾದ ಸಂಜಯ ಶಶಿಕಾಂತ್ ಕೌಜಲಗಿಯವರ ಸತ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಸತ್ಕಾರ ಸ್ವೀಕರಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಸಂಜಯ್ ಕೌಜಲಗಿ ಅವರು ವಿದ್ಯಾರ್ಥಿಗಳು ಪ್ರೌಢಶಾಲಾ ಹಂತದಲ್ಲಿಯೇ ಜೀವನದಲ್ಲಿ ಗುರಿಗಳನ್ನು ಇಟ್ಟುಕೊಳ್ಳಬೇಕು ಹಾಗೂ ಗುರಿ ಮುಟ್ಟುವವರೆಗೆ ಸತತ ಪರಿಶ್ರಮ ಪಡಬೇಕು ಅಂದಾಗ ಮಾತ್ರ ಗೆಲವು ಸಾಧ್ಯ ಎಂದರು. ಈ ಹಾದಿಯಲ್ಲಿ ಹಲವಾರು ಎಡರು ತೊಡರುಗಳು ಬಂದರೂ ಧೃತಿಗೆಡದೆ ನಿರಂತರ ಪ್ರಯತ್ನ ಮಾಡಬೇಕು ಕೌಜಲಗಿ ಹಳ್ಳಿಯಲ್ಲಿ ಹುಟ್ಟಿ ಬೆಳೆದು 40 ವರ್ಷಗಳ ಹಿಂದೆ ಐಎಎಸ್ ಹುದ್ದೆಗೆ ಆಯ್ಕೆಯಾದ ದೊಡ್ಡಪ್ಪ ಡಾ.ಅಶೋಕ್ ದಳವಾಯಿಯವರು, ಕೆಎಎಸ್ ಅಧಿಕಾರಿಗಳಾದ ಅರವಿಂದ ದಳವಾಯಿ ಹಾಗೂ ಅನಿಲಕುಮಾರ ದಳವಾಯಿಯವರು ನನ್ನಂತಹ ಸಾವಿರಾರು ಯುವಕರಿಗೆ ಸ್ಪೂರ್ತಿಯಾಗಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಸ್ಥಳೀಯ ವೈದ್ಯರಾದ ಡಾ॥ಶಿವಾನಂದ ಪಾಟೀಲ ಅವರು ಮಾತನಾಡುತ್ತಾ ದಳವಾಯಿ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡ ಈ ಕಾರ್ಯಕ್ರಮ ಬಹಳ ವಿಶೇಷವಾಗಿದ್ದು ವಿದ್ಯಾರ್ಥಿಗಳಿಗೆ ಸ್ಪೂರ್ತಿದಾಯಕವಾಗಿದೆ. ಮುಂದಿನ ದಿನಗಳಲ್ಲಿ ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯಲಿ ಎಂದರು

ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯರಾದ ಉದ್ಯಮಿ ಸುರೇಶ್ ಶೆಟ್ಟಿ, ನಿವೃತ್ತ ಸೈನಿಕರಾದ ವಸಂತ ದಳವಾಯಿ, ಶಾಲೆಯ ಮುಖ್ಯೋಪಾಧ್ಯಾಯ ವಿವೇಕ್ ಹಳ್ಳೂರ್, ಸಂದೀಪ್ ಕೌಜಲಗಿ ಸೇರಿದಂತೆ ಶಾಲೆಯ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಹರ್ ಘರ್ ತಿರಂಗಾ



ಮಹಾಲಿಂಗಪುರ ಸಮೀಪದ ನಂದಗಾಂವ ವಸ್ತಿ ಸರಕಾರಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ವಾದ್ಯ ಮೇಳದೊಂದಿಗೆ ಮನೆಮನೆಗೆ ಸಂಚರಿಸಿ ಹರ್ ಘರ್ ತಿರಂಗಾ ಅಭಿಯಾನ ಹಮ್ಮಿಕೊಂಡರು. ರಾಷ್ಟ್ರಧ್ವಜ ಕೈಯಲ್ಲಿ ಹಿಡಿದು ಜಯಘೋಷಗಳೊಂದಿಗೆ ಜಾಗೃತಿ ಮೂಡಿಸಿದರು. ಮುಖ್ಯ ಶಿಕ್ಷಕ ವೀರಣ್ಣ ಗೊಂದಿ, ಎಸ್.ಜಿ.ಜುಟನಟ್ಟಿ, ಸೋಮು ಕಂಬಳಿ ಮತ್ತಿತರರು ಇದ್ದರು.

# ಧರ್ಮಸ್ಥಳ ಬಗ್ಗೆ ಅಪಪ್ರಚಾರ ಮಾಡದಂತೆ ಕಾಗವಾಡದಲ್ಲಿ ಶನಿವಾರ ಪ್ರತಿಭಟನೆ

ಅಥಣಿ ;– ನಾಡಿನ ಅತ್ಯಂತ ಶ್ರದ್ದಾ ಭಕ್ತಿಯ ಧಾರ್ಮಿಕ ಕ್ಷೇತ್ರವಾಗಿರುವ ಧರ್ಮಸ್ಥಳ ಕ್ಷೇತ್ರಕ್ಕೆ ಅಪಕೀರ್ತಿ ತರಲು ಕೆಲವು ಯೂಟೂಬ್‌ಗಳು,ಕೆಲವು ದುಷ್ಟ ಶಕ್ತಿಗಳು ಅತ್ಯಂತ ಕೆಟ್ಟ ಭಾಷೆ ಬಳಸುತ್ತಿರುವುದು ತೀವ್ರ ಖಂಡನೀಯ. ಅಂತವರ ವಿರುದ್ದ ಕಾನೂನು ರೀತಿ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಶನಿವಾರ ದಿ16 ರಂದು ಕಾಗವಾಡ ಪಟ್ಟಣದಲ್ಲಿ ಮನವಿ ಸಲ್ಲಿಸಲಾಗುವುದೆಂದಯ ಕರ್ನಾಟಕ ಜೈನ್ ಅಸೋಶಿಯೇಶಷನ ರಾಜ್ಯ ಉಪಾಧ್ಯಕ್ಷ ಶೀತಲಗೌಡ ಪಾಟೀಲ ಉಗಾರದಲ್ಲಿ ತಿಳಿಸಿದರು.

ಗುರುವಾರ ಉಗಾರ ಪಟ್ಟಣದಲ್ಲಿ ಸುದ್ದಿಗಾರೊಂದಿಗೆ ಮಾತನಾಡುವಾಗ ಈ ವಿಷಯ ತಿಳಿಸಿದರು. ಧರ್ಮಸ್ಥಳ ಕ್ಷೇತ್ರದ ಬಗ್ಗೆ ಕಳೆದ ಹಲವಾರು ವರ್ಷಗಳಿಂದ ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣನವರು, ಸಮೀರ್, ಸಂತೋಷ ಶೆಟ್ಟಿ, ಜಯಂತ್ ಟಿ ಹಾಗೂ ಇವರ ಸಹಚರರು ಸೇರಿ ಶ್ರೀ ಮಂಜುನಾಥ ಸ್ವಾಮಿ ದೇವಾಲಯ ಧರ್ಮಸ್ಥಳ ಮತ್ತು ಇದರ ಧರ್ಮಾಧಿಕಾ–ರಿಗಳಾದ ಪರಮಪೂಜ್ಯ ಡಾ। ಡಿ ವೀರೇಂದ್ರ ಹೆಗ್ಗಡೆಯವರಿಗೆ ವೃಥಾ ಕಳಂಕವನ್ನು ತರುವ ಪಿತೂರಿ ನಡೆಸುತ್ತಿದ್ದು, ಹಿಂದು ಧರ್ಮದ ದೇವಾಲಯದ ಬಗ್ಗೆ ಕೀಳಾಗಿ ಮಾತಾಡ್ತಾ ಇದ್ದಾರೆ, ಇವರ ಮೇಲೆ ಶೀಘ್ರ ಕ್ರಮ ಕೈಗೊಳ್ಳಲು ಶನಿವಾರ ಕಾಗವಾಡ ತಾಲೂಕಾ ದಂಡಾಧಿಕಾರಿಗಳಿಗೆ ಹಾಗೂ ಪೊಲೀಸ್ ಇಲಾಖೆಗೆ ಮನವಿ ಸಲ್ಲಿಸುವ ಸಲುವಾಗಿ ಈ ಸಭೆಯಲ್ಲಿ ಕಾಗವಾಡ ತಾಲೂಕಿನ ಕ್ಷೇತ್ರ ಭಕ್ತರು, ಪೂಜ್ಯ ಹೆಗ್ಗಡೆಯವರ ಅಭಿಮಾನಿಗಳು, ಪ್ರಯೋಜನಾರ್ಥಿಗಳು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಮಹಿಳಾ ಸಂಘಟನೆಗಳು ಮತ್ತು ಸಾರ್ವಜನಿಕರು ಸ್ವಯಂ ಪ್ರೇರಿತರಾಗಿ ಸಾವಿರ ಸಾವಿರ ಸಂಖ್ಯೆಯಲ್ಲಿ ಸಕಾಲದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಈ ಮೂಲಕ ಶೀತಲಗೌಡ ಪಾಟೀಲ ವಿನಂತಿಸಿಕೊಳ್ಳುತ್ತೇವೆ.

# ಒಳ ಸಂಚಿನ ವಿರುದ್ಧ ತನಿಖಾ ತಂಡದಿಂದ ತನಿಖೆ ಕೈಗೊಳ್ಳಲು ತಹಶೀಲ್ದಾರ ಮುಖಾಂತರ ಸರಕಾರಕ್ಕೆ ಮನವಿ




ಗೋಕಾಕ: ಅನಾಮಿಕ ವ್ಯಕ್ತಿಯನ್ನು ಬಳಸಿಕೊಂಡು ಗಿರೀಶ ಮಟ್ಟನ್ನವರ, ಮಹೇಶ ತಿಮರೊಡ್ಡಿ, ಜಯಂತ ಟಿ ಹಾಗೂ ಸಮೀರ್ ಎಮ್ ಡಿ ಇವರು ಧರ್ಮಸ್ಥಳ ಶ್ರೀ ಮಂಜುನಾಥ ದೇವಾಲಯದ ಪಾತಿವ್ರತ್ಯಕ್ಕೆ ಕಳಂಕ ತರುತ್ತಿರುವ ಬಗ್ಗೆ ಇವರ ಒಳ ಸಂಚಿನ ವಿರುದ್ಧ ತನಿಖಾ ತಂಡದಿಂದ ತನಿಖೆಯನ್ನು ಕೈಗೊಳ್ಳಬೇಕೆಂದು ಶ್ರೀ ಕ್ಷೇತ್ರ ಧರ್ಮಸ್ಥಳ ಅಭಿಮಾನಿಗಳ ವೇದಿಕೆಯವರು ತಹಶೀಲ್ದಾರ ಮುಖಾಂತರ ಸರಕಾರಕ್ಕೆ ಮನವಿ ಸಲ್ಲಿಸಿದರು.

ಗುರುವಾರದಂದು ನಗರದ ಬಸವೇಶ್ವರ ವೃತ್ತದಿಂದ ಸಾವಿರಾರು ಭಕ್ತರು ಬಿತ್ತಿ ಪತ್ರದೊಂದಿಗೆ ಮೆರವಣಿಗೆ ಮೂಲಕ ತಹಶೀಲದಾರ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು. ನಮ್ಮ ನಾಡಿನ ಪ್ರಸಿದ್ಧ ಧಾರ್ಮಿಕ ಶ್ರದ್ಧಾಕೇಂದ್ರ ಶ್ರೀ ಮಂಜುನಾಥ-ಸ್ವಾಮಿ ದೇವಾಲಯದ ಬಗ್ಗೆ ಹಾಗೂ ದೇವಾಲಯದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗಡೆಯವರ ಹೆಸರಿಗೆ ಕಳಂಕ ತರುವಂತಹ ವಿಡಿಯೋಗಳನ್ನು ಸಾಮಾಜಿ-ಕ ಮಾಧ್ಯಮದಲ್ಲಿ ಹರಿಬಿಡುತ್ತಿದ್ದಾರೆ. ದೇವಾಲಯವನ್ನೆ ಗುರಿಯಾಗಿಸಿಕೊಂಡು ಆರೋಪಗಳನ್ನು ಮಾಡುತ್ತಿರುವದರಿಂದ ಧಾರ್ಮಿಕ ಭಾವನೆ ಹಾಗೂ ನಂಬಿಕೆಗಳಿಗೆ ನಿರಂತರವಾಗಿ ಧಕ್ಕೆಯಾಗುತ್ತಿದೆ. ಈ ಆರೋಪಗಳು ಸುಳ್ಳು ಎಂಬುದು ನಮಗೆ ಸ್ಪಷ್ಟವಾಗಿ ಗೋಚರಿಸುತ್ತಿವೆ. ನಾವುಗಳು ಹುಟ್ಟಿನಿಂದ ಆರಾಧಿಸಿಕೊಂಡು ಬಂದಿರುವ ಶ್ರೀ ಮಂಜುನಾಥ ಸ್ವಾಮಿ ಹಾಗೂ ಹೆಗಡೆಯವರ ಕುರಿತು ಅಪಪ್ರಚಾರ ಮಾಡುತ್ತ ಸಾಮಾಜಿಕ ಮಾಧ್ಯಮದಲ್ಲಿ ಸುಳ್ಳು ಸುದ್ದಿ ಹರಿಬಿಡುತ್ತಿರುವವರ ವಿರುದ್ಧ ಸೂಕ್ತಕ್ರಮ ಕೈಗೊಳ್ಳುವಂತೆ ಮನವಿಯಲ್ಲಿ ವಿನಂತಿಸಿದ್ದಾರೆ. ಈ ಸಂದರ್ಭದಲ್ಲಿ ನಾರಾಯಣ ಮಠಾಧಿಕಾರಿ, ಅಶೋಕ ಪೂಜಾರಿ, ಶಾಮಾನಂದ ಪೂಜೇರಿ, ಸೋಮಶೇಖರ ಮಗದುಮ, ಮಹಾಂತೇಶ ತಾಂವಶಿ, ಸದಾಶಿವ ಗುದಗಗೋಳ, ಶೀತಲ ಡೋಂಗರೆ, ಮಹಾವೀರ ಖಾರೆಪಟನ, ಈಶ್ವರ ಬಾಗೋಜಿ, ಬಾಬು ಮುಳಗುಂದ, ಸಂತೋಷ ಶೆಟ್ಟಿ, ಬಲದೇವ ಸಣ್ಣಕ್ಕಿ, ರಾಜೇಶ್ವರಿ ಒಡೆಯರ ಸೇರಿದಂತೆ ಅನೇಕರು ಇದ್ದರು.

## ಸಂದಿಗವಾಡ ಗ್ರಾಮದಲ್ಲಿ ಛಾವಡಿ - ಅರಿವು ಕೇಂದ್ರ ಉದ್ಘಾಟನೆ

# ಸಂಸ್ಕಾರಯುತ ಬದುಕಿಗೆ ಶಿಕ್ಷಣ ಅತ್ಯಗತ್ಯ : ಚಂದ್ರಶೇಖರ ಬಿ ಕಂದಕೂರ



ರೋಣ : ಮಲ್ಲಾಪೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಸಂದಿಗವಾಡ ಗ್ರಾಮದಲ್ಲಿ ಗ್ರಾಮ ಪಂಚಾಯತಿ ಅನುದಾನದ ಅಡಿಯಲ್ಲಿ ಅಭಿವೃದ್ಧಿಪಡಿಸಲಾದ ಗ್ರಾಮ ಛಾವಡಿ ಮತ್ತು ಅರಿವು ಕೇಂದ್ರ (ಗ್ರಂಥ-ಾಲಯ)ದ ಉದ್ಘಾಟನಾ ಸಮಾರಂಭವು ಇಂದು ವಿಜೃಂಭಣೆಯಿಂದ ನಡೆಯಿತು.

ತಹಶೀಲ್ದಾರದ ನಾಗರಾಜ್ ಕೆ ರೋಣ ಗ್ರಾಮ ಆಡಳಿತ ಅಧಿಕಾರಿ ಕೊಠಡಿಯನ್ನು ಉದ್ಘಾಟಿಸಿ, ಕರ್ನಾಟಕ ಸರಕಾರದ ಪೋತಿ ಖಾತೆ ಕಾರ್ಯಕ್ರಮ ದಡಿ ರಾಜ್ಯದ ಮೊದಲ ಪೋತಿ ಖಾತೆಯಾಗಿ ಈ ಕೊಠಡಿ ಆಗಿದೆ ಗ್ರಾಮಸ್ಥರು ಈ ಸೌಲಭ್ಯದ ಸದುಪಯೋಗ ವನ್ನು ಪಡೆಯಬೇಕೆಂದು ಕರೆ ನೀಡಿದ ಅವರು, ಕಂದಾಯ ಇಲಾಖೆಯ ಸಿಬ್ಬಂದಿಗಳಿಗೆ ಹಾಗೂ ಗ್ರಾಮ ಆಡಳಿತ ಅಧಿಕಾರಿ ಶ್ರೀ ವಾಯ್. ಡಿ. ಬಡಿಗೇರ ಇವರಿಗೆ ಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಪೋತಿ ಖಾತೆಯಿಂದ ವಾರಸರಾದ ರೈತರಿಗೆ ಪಹಣಿಗಳನ್ನು ವಿತ-ರಿಸಲಾಯಿತು.

ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಇವರು ಅರಿವು ಕೇಂದ್ರದ ಕೊಠಡಿಯನ್ನು ಉದ್ಘಾಟಿಸಿ ಮಾತನಾಡಿ. ಮಕ್ಕಳು, ಯುವಕರು ಹಾಗೂ ವಯಸ್ಕರು ಮೊಬೈಲ್‌ನಿಂದ ದೂರವಿದ್ದು, ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕೆಂದು ಸಲಹೆ ನೀಡಿದರು. "ಸಂಸ್ಕಾರಯುತ ಬದುಕಿಗೆ ಶಿಕ್ಷಣ ಅತ್ಯಗತ್ಯ. ಎಲ್ಲರೂ ತಮ್ಮ ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡಬೇಕು. ಶಿಕ್ಷಣದಲ್ಲಿ ಶಿಕ್ಷೆ ಮತ್ತು ಬಹುಮಾನ ಎರಡೂ ಅವಶ್ಯಕ. ಶಿಕ್ಷಕರು ಮಕ್ಕಳನ್ನು ಶಿಸ್ತಿನಿಂದ ಕಲಿಸಿದಾಗ ಪೋಷಕರು ವಿರೋಧಿಸಬಾರದು. ಒಂದು ವೇಳೆ ಶಿಕ್ಷಕರು ಬುದ್ಧಿ ಕಲಿಸದಿದ್ದರೆ, ಮುಂದೆ ಪೊಲೀಸ್ ಸ್ಟೇಷನ್ ನಲ್ಲಿ ಬುದ್ಧಿ ಕಲಿಯಬೇಕಾಗುತ್ತದೆ," ಎಂದು ಹಾಸ್ಯ ಚಟಾಕಿಯಿಂದ ತಿಳಿಸಿದರು. ಅಲ್ಲದೆ, ಗ್ರಾಮಸ್ಥರು ಪ್ರತಿವರ್ಷ ತಮ್ಮ ಮನೆ, ಜಾಗೆ ಮತ್ತು ನೀರಿನ ತೆರಿಗೆಯನ್ನು ಸಕಾಲದಲ್ಲಿ ಪಾವತಿಸಿ ಗ್ರಾಮದ ಅಭಿವೃದ್ಧಿಗೆ ಕೈಜೋಡಿಸಬೇಕೆಂದು ಕರೆ ನೀಡಿದರು. ನೀರಿನ ಸಂರಕ್ಷಣೆ ಮತ್ತು ನೈರ್ಮಲ್ಯದ ಮಹತ್ವವನ್ನು ಒತ್ತಿ ಹೇಳಿದ ಅವರು, ನೀರಿನ ಅನಗತ್ಯ ಬಳಕೆ ತಡೆಗಟ್ಟುವಂತೆ ಸೂಚಿಸಿದರು.

ಈ ಕಾರ್ಯಕ್ರಮಕ್ಕೆ ತಹಶೀಲ್ದಾರದ ನಾಗರಾಜ ಕೆ ಹಾಗೂ ತಾಲೂಕ ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಇವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಕಾರ್ಯಕ್ರಮದ ಧಾರ್ಮಿಕ ಸಾನ್ನಿಧ್ಯವನ್ನು ವೇ.ಮೂ. ಸಿದ್ದಯ್ಯ ಹಿರೇಮಠ ಇವರು ವಹಿಸಿದ್ದರ, ಅಧ್ಯಕ್ಷತೆಯನ್ನು ಹನಮಂತಗೌಡ ಹೂಲ್ಲೂರ ಇವರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಉಪಾಧ್ಯಕ್ಷೆ ಕರಿಯಮ್ಮ ಚಲವಾದಿ, ಸದಸ್ಯರಾದ ಶ್ರೀಮತಿ ಬಸಮ್ಮ ಟಕ್ಕೆದ, ಕಸ್ತೂರೆವ್ವ ಜಂಪಣ್ಣನವರ, ಮೈಲಾರಪ್ಪ ಕರಿಲಿಂಗಣ್ಣವರ, ಕಮಲಾಕ್ಷಿ ಭರಮಗೌಡ್ರ, ದ್ರಾಕ್ಷಾಯಣಿ ಹಡಪದ, ಸುಮಂಗಲಾ ಕೊಳ್ಳದ, ಗಿರಿಜವ್ವ ಹಟ್ಟಿ, ವಿಕ್ರಮ ದಾನರಡ್ಡಿ, ಯಲ್ಲಪ್ಪ ಮಳಗಿ, ವೀರನಗೌಡ ಕಟ್ಟಿ, ಸುರೇಶ ವತ್ತಟ್ಟಿ ಸೇ-ರಿದಂತೆ ಗ್ರಾಮದ ಹಿರಿಯರು, ಗುರುಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು. ಪಂಚಾಯತಿ ಅಭಿವೃದ್ಧಿ ಅಧಿಕಾರಿ ಡಿ. ಎಸ್. ಹಂಚಿನಾಳ ಇವರು ಸ್ವಾಗತ ಭಾಷಣ ಮಾಡಿದರು, ಹಾಗೂ ಮುತ್ತು ಅರಹುಣಸಿ ಇವರು ವಂದನಾರ್ಪಣೆ ಸಲ್ಲಿಸಿದರು.

# ಕುಡಿಯುವ ನೀರಿನ ಕಾಮಗಾರಿ ಪರಿಶೀಲನೆ



ಬಾಗಲಕೋಟೆ: :ಜಿಲ್ಲೆಯ ಬಾದಾಮಿ ಹಾಗೂ ಗುಳೇದಗುಡ್ಡ ತಾಲೂಕಿ ವಿವಿಧ ಗ್ರಾಮ ಪಂಚಾಯತ ವ್ಯಾಪ್ತಿಯ ಗ್ರಾಮಗಳಲ್ಲಿ ನಡೆಯುತ್ತಿರುವ ಕುಡಿಯುವ ನೀರಿನ ಕಾಮಗಾ-ರಿಗಳನ್ನು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಪರಿಶೀಲಿಸಿದರು.

ಹಂಗರಗಿ, ಹಂಸನೂರು, ಕೋಟಿ-ಕಲ್, ಲಾಯದಗುಂದಿ, ಸಬ್ಬಲಹುನಸಿ, ಇಂಜಿನವಾರಿ, ಬೆನಕನವಾರಿ, ಮತ್ತು ಕಳ್ಳಿಗುಡ್ಡ ಗ್ರಾಮಗಳಲ್ಲಿನ ಜಲ ಜೀವನ ಮಿಷನ್ ಯೋಜನೆಯಡಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಪರಿಶೀಲನೆ ಮಾಡಿದರು. ಗ್ರಾಮಗಳಲ್ಲಿ ನಡೆಯುತ್ತಿರುವ ವಿವಿಧ ಹಂತದ ನೀರಿನ ಶುದ್ಧೀಕರಣ ಘಟಕಗಳು, ಪೈಪ್‌ಲೈನ್ ಅಳವಡಿಕೆ, ಓವರ್‌ಹೆಡ್ ಟ್ಯಾಂಕ್ ನಿರ್ಮಾಣ ಹಾಗೂ ಮನೆಯ ನಳ ಸಂಪರ್ಕ ಕಾಮಗಾರಿಗಳನ್ನು ಪರಿಶೀಲಿಸಿದರು. ಹಾನಿಗೊಳಗಾದ ಮತ್ತು ಸೋರಿಕೆಯಾಗುತ್ತಿರುವ ಟ್ಯಾಪ್‌ಗಳನ್ನು ಬದಲಾಯಿಸಲು ಸೂಚಿಸಿದ ಅವರು ದೋಷಯುಕ್ತ ನೀರಿನ ಮೀಟರ್‌ಗಳನ್ನು ಸರಿಪಡಿಸಬೇಕು. ಬೈಪಾಸ್ ಮಾಡಲಾಗಿರುವ ನೀರಿನ ಪೈಪ್‌ಲೈನ್‌ಗಳನ್ನು ತಡೆಗಟ್ಟುವ ಕೆಲಸವಾಗಬೇಕು. ಪೈಪ್‌ಲೈನ್ ಅಳವಡಿಕೆ ಕಾರ್ಯ ಪೂರ್ಣಗೊಂಡ ನಂತರ ರಸ್ತೆ ಪುನಃಸ್ಥಾಪನೆ ಕಾರ್ಯಗಳನ್ನು ಕೈಗೊಳ್ಳಲು ಸೂಚನೆ ನೀಡಿದರು.

ಗ್ರಾಮ ಪಂಚಾಯತ್ ಸದಸ್ಯರು, ಗುತ್ತಿಗೆದಾರರು ಮತ್ತು ತಾಂತ್ರಿಕ ಸಿಬ್ಬಂದಿಗಳೊಂದಿಗೆ ಸಭೆ ನಡೆಸಿದ ಸಿಇಓ ಕುರೇರ್ ಅವರು ಕಾಮಗಾ-ರಿಗಳನ್ನು ಗುಣಮಟ್ಟದೊಂದಿಗೆ, ನಿಗದಿತ ಅವಧಿಯೊಳಗೆ ಪೂರ್ಣಗೊಳ್ಳಬೇಕು. ಗ್ರಾಮಸ್ಥರಿಗೆ ನಿರಂತರವಾಗಿ ಶುದ್ಧ ಕುಡಿಯುವ ನೀರು ತಲುಪಿಸುವುದು ಸರ್ಕಾರದ ಆದ್ಯ ಕರ್ತವ್ಯವಾಗಿದ್ದು, ಯೋಜನೆಗಳನ್ನು ವಿಳಂಬವಿಲ್ಲದೆ ಪೂರ್ಣಗೊಳಿಸಲು ತಿಳಿಸಿದರು.

ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ವಿಭಾಗ ಕಾರ್ಯನಿರ್ವಾಹಕ ಅಭಿಯಂತರ ಆಕಾಶ ವಂದೆ, ಬಾದಾಮಿ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸತೀಶ ಮಾಕೊಂಡ, ಗುಳೇದಗುಡ್ಡ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಿಕಾರ್ಜುನ ಬಡಿಗೇರ, ಬಾದಾಮಿ ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಉಪ-ವಿಭಾಗ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಅಶೋಕ ತೋಪಲಕಟ್ಟಿ ಸೇರಿದಂತೆ ಇತರರು ಇದ್ದರು.

### ವಿದ್ಯುತ್ ಅದಾಲತ್ ಹಾಗೂ ಗ್ರಾಹಕರ ಸಂವಾದ ಸಭೆ

ಕಾರವಾರ, : ಹೊನ್ನಾವರ ಉಪ-ವಿಭಾಗ ವ್ಯಾಪ್ತಿಯಲ್ಲಿ ಆ.16 ರಂದು ಬೆಳಗ್ಗೆ 11 ಗಂಟೆಗೆ ವಿದ್ಯುತ್ ಅದಾಲತ್ ಹಾಗೂ ಮಧ್ಯಾಹ್ನ 3.30 ಗಂಟೆಗೆ ಗ್ರಾಹಕರ ಸಂವಾದ ಸಭೆಯನ್ನು ಹೊನ್ನಾವರ ಉಪ- ವಿಭಾಗ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಹೊನ್ನಾವರ ಉಪ-ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆ.16 ರಂದು ಗ್ರಾಹಕರ ಸಂವಾದ ಸಭೆ

ಕಾರವಾರ, : ಕಾರವಾರ ಕಾರ್ಯ ಮತ್ತು ಪಾಲನಾ ಉಪವಿಭಾಗ ಕಚೇರಿಯಲ್ಲಿ ಗ್ರಾಹಕರ ಸಂವಾದ ಸಭೆಯನ್ನು ಆ.16 ರಂದು ಮಧ್ಯಾಹ್ನ 3.30 ಗಂಟೆಯಿಂದ ಸಂಜೆ 5.30 ಗಂಟೆವರೆಗೆ ಹಮ್ಮಿಕೊಳ್ಳಲಾಗಿದೆ.

ಗ್ರಾಹಕರು ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳೇನಾದರು ಇದ್ದಲ್ಲಿ ಸಭೆಗೆ ಹಾಜರಾಗಿ ತಮ್ಮ ಕುಂದು ಕೊರತೆಗಳ ಅಹಾಲುಗಳನ್ನು ನೀಡುವಂತೆ ಕಾರವಾರ ಕಾರ್ಯ ಮತ್ತು ಪಾಲನಾ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ)ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೌಶಲ್ಯಾಧಾರಿತ ಉಚಿತ ತರಬೇತಿಗೆ ಅರ್ಜಿ ಆಹ್ವಾನ

ಕಾರವಾರ, : ಕೆನರಾ ಬ್ಯಾಂಕ್ ಮತ್ತು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಹಸು, ಕುರಿ ಮತ್ತು ಕೋಳಿ ಸಾಕಾಣಿಕೆ ಕುರಿತ 13 ದಿನಗಳ ಉಚಿತ ತರಬೇತಿಯು ಸೆಪ್ಟೆಂಬರ್ 8 ರಿಂದ ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್‌ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಆಗಸ್ಟ್ 30 ಕೊನೆಯ ದಿನವಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 9241482541, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಿಜೆಪಿ ಏಜೆಂಟ್ ಆಗಿರುವ ಚುನಾವಣಾ ಆಯೋಗ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಟೀಕೆ

# ಮತಗಳ್ಳತನ ವಿರುದ್ಧ ಪ್ರತಿಭಟನೆಯಲ್ಲಿ ಸಚಿವರು ಭಾಗಿ




ಉಡುಪಿ: ಕೇಂದ್ರ ಚುನಾವಣಾ ಆಯೋಗವು ಬಿಜೆಪಿ ಏಜೆಂಟ್ ರೀತಿ ವರ್ತಿಸುತ್ತಿದೆ. ಮತಗಳ್ಳತನಕ್ಕೆ ಬಿಜೆಪಿಗೆ ಬೆಂಬಲವಾಗಿ ನಿಂತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಹಾಗೂ ಉಡುಪಿ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಆರೋಪಿಸಿದರು.

ಉಡುಪಿ ಜಿಲ್ಲಾ ಕಾಂಗ್ರೆಸ್ ಸಮಿತಿಗಳ ವತಿಯಿಂದ " ಮತಕಳ್ಳರೇ ಅಧಿಕಾರ ಬಿಟ್ಟು ತೊಲಗಿ " ಕಾರ್ಯಕ್ರಮದ ಅಂಗವಾಗಿ ಕ್ಲಾಕ್ ಟವರ್ ನ ಗಾಂಧಿ ಪ್ರತಿಮೆ ಬಳಿ ಕ್ಯಾಂಡಲ್ ಲೈಟ್ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಸಚಿವರು, ಚುನಾವಣೆಯನ್ನು ನಿಷ್ಪಕ್ಷಪಾತ, ನಿರ್ಭಿತಿಯಿಂದ ನಡೆಸಬೇಕು. ಆದ-ರೆ, ಚುನಾವಣಾ ಆಯೋಗದ ಧೋರಣೆಯನ್ನು ನೋಡಿದರೆ ಬೇಲಿಯೇ ಎದ್ದು ಹೊಲ ಮೇಯ್ದಂತಾಗಿದೆ ಎಂದರು.

ಬಿಜೆಪಿ ಹಾಗೂ ಚುನಾವಣಾ ಆಯೋಗ ಸಂವಿಧಾನದ ಹಕ್ಕನ್ನು ಕಸಿಯುತ್ತಿವೆ. ವಾಮಮಾರ್ಗದಲ್ಲಿ ಚುನಾವಣೆ ಗೆಲ್ಲುವುದೇ ಬಿಜೆಪಿಗರ ಹುನ್ನಾರವಾಗಿದೆ. ಬಿಜೆಪಿ ವಿರುದ್ಧ ಹೋರಾಟಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ನಮ್ಮ ನಾಯಕ ರಾಹುಲ್ ಗಾಂಧಿ ಸಾಕ್ಷಿ ಸಮೇತ ಚುನಾವಣಾ ಆಯೋಗದ ಅವ್ಯವಹಾರವನ್ನು ಎಳೆ ಎಳೆಯಾಗಿ ಬಿಚ್ಚಿಟ್ಟಿದ್ದಾರೆ. ಸಂವಿಧಾನ ಪ್ರತಿಯೊಬ್ಬ ವ್ಯಕ್ತಿಗೂ ಒಂದು ಮತದಾನದ ಹಕ್ಕನ್ನು ನೀಡಿದರೆ, ಇಲ್ಲಿ ಒಬ್ಬ ವ್ಯಕ್ತಿ ನಾಲ್ಕು ಬಾರಿ ಮತದಾನ ಮಾಡಿದ ಉದಾಹರಣೆಗಳಿವೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಟೀಕಿಸಿದರು.

ವಿರೋಧ ಪಕ್ಷದ ನಾಯಕರ ಮೇಲೆ ಇಡಿ, ಐಟಿ ದಾಳಿ ಮಾಡಿಸುವ ಕೇಂದ್ರದ ಬಿಜೆಪಿ ನಾಯಕರು, ಇದೀಗ ಮತಗಳ್ಳತನಕ್ಕೂ ಕೈಹಾಕಿದ್ದಾರೆ. ಚುನಾವಣೆ ಆದ ತಕ್ಷಣ ರಾಹುಲ್ ಗಾಂಧಿಯವರು ಮತದಾನ ಪಟ್ಟಿ ಕೇಳಿದರೂ ಕೊಡಲಿಲ್ಲ. ನಮ್ಮ ಹೋರಾಟದ ವಿರುದ್ಧ ರಾಜ್ಯ ಬಿಜೆಪಿ ನಾಯಕರು ಅಪಪ್ರಚಾರ ಮಾಡುತ್ತಿದ್ದಾರೆ. ಪ್ರಜಾಪ್ರಭುತ್ವದ ಕಗ್ಗೊಲೆ ಮಾಡುತ್ತಿರುವ ಬಿಜೆಪಿಗೆ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಬೇಕು ಎಂದು ಹೇಳಿದರು.

ಈ ವೇಳೆ ಮಾಜಿ ಸಂಸದ ಜಯಪ್ರಕಾಶ್ ಹೆಗ್ಡೆ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಶೋಕ್ ಕುಮಾರ್ ಕೊಡವೂರು, ಮುಖಂಡರಾದ ಪ್ರಸಾದ್ ಕಾಂಚನ್, ರಮೇಶ್ ಕಾಂಚನ್, ಹರೀಶ್ ಕಿಣಿ, ಕಿಶನ್ ಹೆಗ್ಡೆ ಕೊಳಕೆಬೈಲ್, ಗಣೇಶ್ ನೆರ್ಗಿ ಉಪಸ್ಥಿತರಿದ್ದರು.

# ಕೃಷ್ಣಾ ನದಿಗೆ ಬಾಗಿನ ಅರ್ಪಣೆ



ರಬಕವಿ-ಬನಹಟ್ಟಿ,ಆ13: ರಬಕವಿಯ ಮಲ್ಲಿಕಾರ್ಜುನ ದೇವರ ಜಾತ್ರಾ ಮಹೋತ್ಸವದ ಮೂರನೇ ದಿನವಾದ ಇಂದು ಬುಧವಾರ ಮುಂಜಾನೆ ಜಾತ್ರಾ ಕಮೀಟಿ ಹಾಗೂ ಶಂಕರಲಿಂಗ ದೇವಸ್ಥಾನ ಟ್ರಸ್ಟ್ ಕಮೀಟಿಯ ಹಿರಿಯರು ಸಮೀಪದ ಕೃಷ್ಣಾ ನದಿಗೆ ತೆರಳಿ ಬಾಗಿನ ಅರ್ಪಿಸಿದರು.

ಹಿರಿಯರು ಪೂಜೆ ಸಲ್ಲಿಸಿ ಕೃಷ್ಣಾ ನದಿಗೆ ಬಾಗಿನ ಅರ್ಪಿಸಿದರು.

ಈ ಸಂದರ್ಭದಲ್ಲಿ ಬಾಲಚಂದ್ರ ಉಮದಿ, ಪ್ರಭು ಉಮದಿ, ಡಾ. ಸಂಗಮೇಶ ಹತಪಾಕಿ, ಮಾರುತಿ ನಾಯಕ, ಬಸವರಾಜ ದಲಾಲ, ಸೋಮಶೇಖರ ಕೊಟ್ರಶೆಟ್ಟಿ, ಡಾ. ರವಿ ಜಮಖಂಡಿ, ಶಿವಾನಂದ ಹೊಸಮನಿ, ಶಂಕರಗೌಡ ಪಾಟೀಲ, ಭೀಮಸಿ ಪಾಟೀಲ, ಚನಮಲ್ಲಪ್ಪ ತೇಲಿ, ಈಶ್ವರ ನಾಗರಾಳ, ಶಿವಾನಂದ ಕಡಕೋಳ, ಕುಷ್ಣಪ್ಪ ಪಾಟೀಲ, ಆರ್ ಎಸ್. ಖಪಲಿ, ಪ್ರೇಮ ಪೂಜಾರಿ, ಕೆ. ಎಸ್. ರಜಪೂತ, ಪ್ರಕಾಶ ಕುಂಬಾರ ಸೇರಿದಂತೆ ಅನೇಕರು ಇದ್ದರು.

****





ಬೆಳಗಾವಿ: ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆ ರಾಮತೀರ್ಥ ನಗರದಲ್ಲಿ ಗುರುವಾರದಂದು ಎಲ್‌ಕೆಜಿ-ಯುಕೆಜಿ ತರಗತಿಗಳ ಮುದ್ದು ಪುಟಾಣಿಗಳಿಂದ ಶ್ರೀಕೃಷ್ಣ ಜನ್ಮಾಷ್ಟಮಿ ಆಚರಿಸಲಾಯಿತು. ಮುದ್ದು ಪುಟಾಣಿಗಳು, ಕೃಷ್ಣ ರಾಧೆಯರ ವೇಷದಲ್ಲಿ ಬಹಳ ಆಕರ್ಷಕರಾಗಿ ಎಲ್ಲರ ಗಮನ ಸೆಳೆದರು. ವಿದ್ಯಾರ್ಥಿಗಳಿಗೆ ಈ ಸಂಧರ್ಭದಲ್ಲಿ ಮುಖ್ಯ ಗುರುಗಳಾದ ಶ್ರೀಮತಿ ಎನ್. ಆರ್. ಮೆಳವಂಕಿ ಹಾಗೂ ಶಿಕ್ಷಕರು, ಸಿಬ್ಬಂದಿ ವರ್ಗದವರು, ಪಾಲಕರು ಶುಭಹಾರೈಸಿದರು.




ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಹಾಗೂ ಸಂಜೀವಿನಿ ಯೋಜನೆಯಡಿ, ಉಡುಪಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಇವರ ಸಹಯೋಗದಲ್ಲಿ ಉಡುಪಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ನೂತನವಾಗಿ ಆರಂಭಿಸಲಾಗಿರುವ ಅಕ್ಕ ಕೆಫೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಚಾಲನೆ ನೀಡಿದರು.

ಈ ವೇಳೆ ಜಿಲ್ಲಾಧಿಕಾರಿ ಟಿ.ಕೆ. ಸ್ವರೂಪ, ಜಿಲ್ಲಾ ಪಂಚಾಯತ್ ಸಿಇಒ ಪ್ರತೀಕ್ ಬಾಯಲ್, ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿ ಹರಿರಾಮ್ ಶಂಕರ್, ಅಪರ ಜಿಲ್ಲಾಧಿಕಾರಿ ಅಬಿದ್ ಗದ್ಯಾಳ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

|| ಶಿವಗಣಾರಾಧನೆ ||



ಕೈ.ವಾ. ಶ್ರೀ ಬಸಪ್ಪ ಮುದಕಪ್ಪ ತುರಮರಿ
ಜನನ-02-01-1955 ಮರಣ-11-08-2025
ಸಾ: ಮೃತ್ಯುಂಜಯ ನಗರ, ಬೈಲಹೊಂಗಲ

ಇವರು ಸೋಮವಾರ 11-08-2025 ರಂದು ತಮ್ಮ 71 ನೇ ವಯಸ್ಸಿನಲ್ಲಿ ಕೈಲಾಸವಾಸಿಗಳಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರ ಶಿವಗಣಾರಾಧನೆಯನ್ನು ಶುಕ್ರವಾರ ದಿ. 15-08-2025 ರಂದು ಮುಂಜಾನೆ ಎಪಿಎಂಸಿ ಎದುರಿಗೆ ಮೃತ್ಯುಂಜಯ ನಗರದ 2 ನೇ ಕ್ರಾಸ್‌ನ ಸ್ವಗೃಹ ಬೈಲಹೊಂಗಲದಲ್ಲಿ ನೆರವೇರಿಸಲಾಗುವದು. ಕಾರಣ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿಸಲಾಗಿದೆ.

-: ದುಃಖತಪ್ತ :-

ಪತ್ನಿ, ಪುತ್ರ, ಪುತ್ರಿಯರು, ಸಹೋದರ, ಸಹೋದರಿಯರು, ಮಕ್ಕಳು, ಸೊಸೆಯಂದಿರು, ಮೊಮ್ಮಕ್ಕಳು, ಅಳಿಯಂದಿರು, ಆತ್ಮೀಯ ಸ್ನೇಹಿತರು ಹಾಗೂ ತುರಮರಿ ಕುಟುಂಬದ ಅಪಾರ ಬಂಧು-ಬಳಗ ಬೈಲಹೊಂಗಲ ಜಿಲ್ಲಾ-ಬೆಳಗಾವಿ

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016 DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :163, Postal Reg No. PMG/KA/NK/BM/135/25-27 / POST AT Vantamury Colony Post Office